ಸಂಪುಟ: 22, ಸಂಚಿಕೆ: 220, ಪುಟಗಳು: 8, ಮಂಗಳವಾರ, 20 ಮೇ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com



We Undertake Printing of Newspapers | Tabloids | Magazines


### ಸುಭಾಷಿತ

ಬಯಸಿದ್ದು ಸಿಗಲು ಯೋಗವಿರಬೇಕು. ಸಿಕ್ಕಿದ್ದನ್ನು ಉಳಿಸಿಕೊಳ್ಳಲು ಯೋಗ್ಯತೆ ಬೇಕು.

### ಪಂಚಾಂಗ

(ಮಂಗಳವಾರ 20 ಮೇ-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ವಸಂತ ಋತು
- ವೈಶಾಖ ಮಾಸ, ಕೃಷ್ಣ ಪಕ್ಷ
- ತಿಥಿ: ಅಷ್ಟಮಿ • ಯೋಗ: ಇಂದ್ರ
- ನಕ್ಷತ್ರ: ಧನಿಷ್ಠ
- ರಾಹುಕಾಲ: 7:34 ರಿಂದ 9:09
- ಗುಳಿಕಕಾಲ: 1:55 ರಿಂದ 3:30
- ಯಮಗಂಡಕಾಲ: 10:44 ರಿಂದ

## ಸಂಕ್ಷಿಪ್ತ ಸುದ್ದಿ

### ನ್ಯಾಯಮೂರ್ತಿಗಳು ಕೂಡ ಮನುಷ್ಯರೇ ಅವರಿಂದಲೂ ತಪ್ಪಾಗುತ್ತೆ

**ನವದೆಹಲಿ:** 'ನ್ಯಾಯಮೂರ್ತಿಗಳು ಕೂಡ ಮನುಷ್ಯರೇ, ಅವರಿಂದಲೂ ತಪ್ಪಾಗಬಹುದು'' ಎಂದು ಸುಪ್ರೀಂಕೋರ್ಟ್ ನ ನ್ಯಾ. ಅಭಯ್ ಎಸ್ ಓಕಾ ಹೇಳಿದ್ದಾರೆ.2016ರಲ್ಲಿ ಬಾಂಬೆ ಹೈಕೋರ್ಟ್ ನ ನ್ಯಾಯಮೂರ್ತಿಗಳಾಗಿ ಕೌಟುಂಬಿಕ ಹಿಂಸಾಚಾರ ಕಾಯ್ದೆಗೆ ಸಂಬಂಧಿಸಿದ ಪ್ರಕರಣದಲ್ಲಿ ತೀರ್ಪು ನೀಡುವಾಗ ತಾವು ಕೂಡ ತಪ್ಪು ಮಾಡಿರುವುದಾಗಿ ಅವರು ಒಪ್ಪಿಕೊಂಡರು. ನ್ಯಾಯಮೂರ್ತಿಗಳಿಗೆ ಇದು ನಿರಂತರ ಕಲಿಕಾ ಪ್ರಕ್ರಿಯೆ ಎಂದರು.



ನ್ಯಾಯಮೂರ್ತಿ ಓಕಾ, ಅವರು ಸ್ವತಃ ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರನ್ನೊಳಗೊಂಡ ಪೀಠದ ಪರವಾಗಿ ತೀರ್ಪು ನೀಡಿದ್ದರು. ಕೌಟುಂಬಿಕ ಹಿಂಸಾಚಾರ ಕಾಯ್ದೆಯ ಸೆಕ್ಷನ್ 12(1) ರ ಅಡಿಯಲ್ಲಿ ಸಲ್ಲಿಸಲಾದ ಅರ್ಜಿಯ ವಿಚಾರಣೆಯನ್ನು ರದ್ದುಗೊಳಿಸಲು ಹೈಕೋರ್ಟ್‌ಗೆ ಅಧಿಕಾರವಿದೆ ಎಂದು ಹೇಳಿದ್ದರು. ಪುಟ 2

### ಸಿಂಗಾಪುರದಲ್ಲಿ ಕೊರೊನಾ ಸೋಂಕಿತ ಪ್ರಕರಣದಲ್ಲಿ ಹೆಚ್ಚಳ



**ನವದೆಹಲಿ:** ಭಾರತದಲ್ಲಿ ಪ್ರಸ್ತುತ ಕೊರೊನಾ ಸೋಂಕಿತ ಪ್ರಕರಣಗಳು ನಿಯಂತ್ರಣದಲ್ಲಿದೆ ಮತ್ತು ಮೇ 19ರ ಹೊತ್ತಿಗೆ ಸಕ್ರಿಯ ಪ್ರಕರಣಗಳ ಸಂಖ್ಯೆ 257 ಆಗಿದೆ ಎಂದು ಆರೋಗ್ಯ ಸಚಿವಾಲಯದ ಮೂಲಗಳು ತಿಳಿಸಿವೆ.

» **ಭಾರತದಲ್ಲಿ 257 ಕೇಸ್ ಪತ್ತೆ**

ಆರೋಗ್ಯ ಸೇವೆಗಳ ಮಹಾನಿರ್ದೇಶಕರ (ಡಿಜಿಹೆಚ್ಎಸ್) ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ (ಎನ್‌ಸಿಡಿಸಿ), ತುರ್ತು ವೈದ್ಯಕೀಯ ಪರಿಹಾರ (ಇಎಂಆರ್) ವಿಭಾಗ, ವಿಪತ್ತು ನಿರ್ವಹಣಾ ಕೋಶ, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಮತ್ತು ಕೇಂದ್ರ ಸರ್ಕಾರಿ ಆಸ್ಪತ್ರೆಗಳ ತಜ್ಞರ ಪರಿಶೀಲನಾ ಸಭೆಯ ನಂತರ ಈ ಹೇಳಿಕೆ ಬಂದಿದೆ. ಪುಟ 2

# ಪಾಕ್‌ನ ಗುಂಡಿನ ದಾಳಿಗೆ ನಾವು ಶತ್ರುಗಳ ಗುಂಡಿಗೆಯೂ ನಡುಗುವಂಥಾ ಉತ್ತರ ನೀಡಿದ್ದೇವೆ: ಭಾರತೀಯ ಸೇನೆ

**ನವದೆಹಲಿ:** ಆಪರೇಷನ್ ಸಿಂಧೂರ್ ಅಡಿಯಲ್ಲಿ ಭಾರತೀಯ ಸೇನೆಯು ಶತ್ರುಗಳ ನೆಲೆಗಳು ಮತ್ತು ಭಯೋತ್ಪಾದಕ ನೆಲೆಗಳ ಮೇಲೆ ನಿಖರ ದಾಳಿ ನಡೆಸಿ ಸಂಪೂರ್ಣವಾಗಿ ನಾಶಪಡಿಸಿವೆ. ಪಾಕಿಸ್ತಾನದ ಗುಂಡಿನ ದಾಳಿಗೆ ಗುಂಡಿಗೆಯೂ ನಡುಗುವಂಥಾ ಉತ್ತರ ನೀಡಿದ್ದೇವೆ ಎಂದು ಭಾರತೀಯ ಸೇನೆ ಹೇಳಿಕೊಂಡಿದೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ಪಾಕಿಸ್ತಾನಿ ಭಯೋತ್ಪಾದಕರು ಭಾರತೀಯ ಪ್ರವಾಸಿಗರನ್ನು ಕೊಂದ ನಂತರ , ಭಾರತೀಯ ಸಶಸ್ತ್ರ ಪಡೆಗಳು ಮೇ 6-7 ರ ರಾತ್ರಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿರುವ 9 ಭಯೋತ್ಪಾದಕ ಅಡಗುತಾಣಗಳ ಮೇಲೆ ನಿಖರವಾದ ದಾಳಿ ನಡೆಸಿ ಅವುಗಳನ್ನು ಸಂಪೂರ್ಣವಾಗಿ ನಾಶಪಡಿಸಿದವು.



ಭಾರತದ ಪ್ರತೀಕಾರದ ಕ್ರಮವು ಪಾಕಿಸ್ತಾನದಲ್ಲಿ ಕೋಲಾಹಲಕ್ಕೆ ಕಾರಣವಾಯಿತು. ಪ್ರತಿಯೊಂದು ಶೆಲ್ ಶತ್ರುಗಳಿಗೆ ಉತ್ತರವಾಗಿತ್ತು ಮತ್ತು ಅವರ ಸ್ಥೈರ್ಯವನ್ನು ನುಜ್ಜುಗುಜ್ಜಾಗಿಸಿತ್ತು ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

ಸೋಮವಾರ ಭಾರತೀಯ ಸೇನಾ ಅಧಿಕಾರಿಗಳು ಆಪರೇಷನ್ ಸಿಂಧೂರ್ ಯಶಸ್ಸಿನ ಬಗ್ಗೆ ಮಾತನಾಡಿದರು. ಆಪರೇಷನ್ ಸಿಂಧೂರ್ ಭಯೋತ್ಪಾದಕ ಚಟುವಟಿಕೆಗಳು ಮತ್ತು ಒಳನುಸುಳುವಿಕೆಯನ್ನು ಬೆಂಬಲಿಸುವ ಶತ್ರು ಪೋಸ್ಟ್‌ಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಗುರಿಯನ್ನು ಹೊಂದಿರುವ ಯೋಜಿತ ಮತ್ತು ಗುರಿ ಆಧಾರಿತ ಕ್ರಮವಾಗಿದೆ ಎಂದು ಅವರು ಹೇಳಿದರು.

ಸೇನಾ ಅಧಿಕಾರಿ ಹೇಳುವಂತೆ ಗುಂಡು ಶತ್ರುಗಳಿಂದಲೇ ಹಾರಿತು, ಆದರೆ ಪಾಕಿಸ್ತಾನದಲ್ಲಿ ಧಮಾಕಾ ಆಗಿದ್ದು ನಮ್ಮಿಂದ. ಈ ಕಾರ್ಯಾಚರಣೆಯು ಪ್ರತಿಕ್ರಿಯೆಯಲ್ಲ, ಬದಲಾಗಿ ಪೂರ್ವ ಯೋಜಿತ ಪ್ರತಿ-ಕ್ರಮವಾಗಿದೆ ಎಂದು ಅವರು ಹೇಳಿದರು.

ಶತ್ರುಗಳ ಮನೋಸ್ಥೈರ್ಯ ಕುಗ್ಗಿತು ಈ ಕಾರ್ಯಾಚರಣೆಯಲ್ಲಿ ಸೇನೆಯು ಸ್ಥಳೀಯ ರಾಡಾರ್ ವ್ಯವಸ್ಥೆ ಮತ್ತು ಗುರಿ ಸ್ವಾಧೀನ ತಂತ್ರಜ್ಞಾನವನ್ನು ಬಳಸಿದೆ ಎಂದು ಅಧಿಕಾರಿ ಹೇಳಿದರು. ಪಾಕಿಸ್ತಾನ ಕಡೆಯಿಂದ ಭಾರೀ ಶೆಲ್ ದಾಳಿ ನಡೆದಿದೆ, ಆದರೆ ಭಾರತೀಯ ಸೇನೆಯು ತನ್ನ ಸೈನಿಕರಿಗೆ ಯಾವುದೇ ಹಾನಿ ಮಾಡಲು ಅವಕಾಶ ನೀಡಲಿಲ್ಲ.

ಕಾರ್ಯಾಚರಣೆಯಲ್ಲಿ ಶತ್ರುಗಳ ನೆಲೆಗಳು ನಾಶವಾದವು ಮಾತ್ರವಲ್ಲದೆ ಪುಟ 2

## ಕರ್ನಾಟಕದ 6 ಜಿಲ್ಲೆಗಳಿಗೆ ರೆಡ್ ಅಲರ್ಟ್

# ಮೇ 26ರವರೆಗೆ ಭಾರಿ ಮಳೆ

**ಬೆಂಗಳೂರು:** ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತ ಹಿನ್ನೆಲೆ ಕರ್ನಾಟಕದಾದ್ಯಂತ ಮಳೆ ಯಾಗುತ್ತಿದೆ.ಕರ್ನಾಟಕದ 6 ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಬೆಂಗಳೂರಲ್ಲೂ ಮೇ 26ರವರೆಗೆ ಮಳೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬೆಳಗಾವಿ, ಚಿಕ್ಕಮಗಳೂರು, ಶಿವಮೊಗ್ಗ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಮಾಣದ ಮಳೆಯಾಗಲಿದೆ. ಬಾಗಲಕೋಟೆ, ಧಾರವಾಡ, ಹಾವೇರಿ, ಹಾಸನ, ಕೊಡಗಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಗದಗ,ಕೊಪ್ಪಳ, ವಿಜಯಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಒಟ್ಟಿನಲ್ಲಿ ಮೇ 26ರವರೆಗೆ ಕರ್ನಾಟಕ ಬಹುತೇಕ ಜಿಲ್ಲೆಗಳಲ್ಲಿ ಮಳೆ ಮುಂದುವರೆಯಲಿದೆ.

ಎಲ್ಲೆಲ್ಲಿ ಮಳೆಯಾಗಿದೆ ಬೆಂಗಳೂರು ಜಿಕೆವಿಕೆ, ಚಾಮರಾಜನಗರ, ಬೆಂಗಳೂರು ನಗರ, ಟಿಜಿಹಳ್ಳಿ, ಕನಕಪುರ, ಹುನಗುಂದ, ನಾರಾಯಣಪುರದಲ್ಲಿ ಹೆಚ್ಚು ಮಳೆಯಾಗಿದೆ. ಹೊಸಕೋಟೆ, ಹೆಸರಘಟ್ಟ, ಕುಣಿಗಲ್, ಬಸವನ ಬಾಗೇವಾಡಿ, ಚಿತ್ತಾಪುರ, ಜೇವರ್ಗಿ, ನಲ್ವತವಾಡ, ಮಾಗಡಿ, ಎಲೆಕ್ ಟ್ರಾನಿಕ್ ಸಿಟಿ, ಹಣಸಗಿ, ಬೆಳಗಾವಿ, ಕೆಂಭಾವಿ, ಕಕ್ಕೇರಿ, ಅಫ್ಜಲ್ ಪುರ, ಚಿಂಚೋಳಿ, ಗದಗದಲ್ಲಿ ಮಳೆಯಾಗಿದೆ.

ಬೆಳ್ಳೂರು, ಎಂಎಂ ಹಿಲ್ಸ್ ,ಕೋಲಾರ, ಭಾಗಮಂಡಲ, ಬರಗೂರು, ಮದ್ದೂರು,ಮಧುಗಿರಿ, ಗೌರಿಬಿದನೂರು, ಬಾದಾಮಿ, ಸಿರಾ, ಕುಶಾಲನಗರ, ಕೋಲಾರ, ಸೈದಾಪುರ, ಲೋಕಾಪುರ, ಇಳಕಲ್, ಮುದ್ದೇಬಿಹಾರ, ಗಂಗಾವತಿ, ನಾಗಮಂಗಲ, ಕೃಷ್ಣರಾಜಸಾಗರ, ರಾಯಲ್ಪಾಡು, ಯಲಬುರ್ಗಾ, ರಬಕವಿ, ಮಿಡಿಗೇಶಿ, ಮುನಿರಾಬಾದ್, ಸಿಂಧಗಿ, ಚಿಕ್ಕೋಡಿ, ಖಾನಾಪುರ, ಬೀದರ್, ತಾವರಗೇರಾ, ಬೀದರ್, ಕಲಘಟಗಿಯಲ್ಲಿ ಮಳೆಯಾಗಿದೆ.



### ಭಾರಿ ಮಳೆಗೆ ಕರ್ನಾಟಕದಲ್ಲಿ 4 ಸಾವು

**ಬೆಂಗಳೂರು:** ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಸೋಮವಾರ ಭಾರಿ ಮಳೆ ಸುರಿದಿದ್ದು, ಅನೇಕ ಅವಾಂತರಗಳು ಸಂಭವಿಸಿವೆ. ಮಳೆ ಸಂಬಂಧಿತ ಅವಘಡಗಳಲ್ಲಿ ರಾಜ್ಯದಾದ್ಯಂತ ನಾಲ್ವರು ಮೃತಪಟ್ಟಿದ್ದಾರೆ. ಬೆಂಗಳೂರಿನಲ್ಲೇ ಮೂರು ಸಾವುಗಳು ಸಂಭವಿಸಿವೆ. ಸೋಮವಾರ ಬೆಳಗ್ಗೆಯಷ್ಟೇ ಬೆಂಗಳೂರಿನಲ್ಲಿ ಉದ್ಯೋಗಿಯೊಬ್ಬರನ್ನು ಬಲಿ ಪಡೆದಿದ್ದ ಮಳೆ, ರಾತ್ರಿ ಹೊತ್ತಿಗೆ ಮತ್ತಿಬ್ಬರನ್ನು ಬಲಿ ಪಡೆದಿದೆ. ಬಿಟಿಎಂ ಲೇಔಟ್ ನ 2ನೇ ಹಂತದ ಎನ್‌ಎಸ್ ಪಾಳ್ಯದ ಮಧುವನ ಅಪಾರ್ಟ್ ಮೆಂಟ್ ಬೇಸ್ ಮೆಂಟ್ ನಲ್ಲಿ ದುರ್ಘಟನೆ ಸಂಭವಿಸಿದೆ. ಮಳೆಯಿಂದ ಬೇಸ್ ಮೆಂಟ್ ಜಲಾವೃತವಾಗಿತ್ತು. ಮೋಟಾರ್ ಮೂಲಕ ನೀರು ಹೊರಹಾಕಲು ಯತ್ನಿಸುತ್ತಿದ್ದಾಗ ಕರೆಂಟ್ ಶಾಕ್ ತಗುಲಿ ಅಪಾರ್ಟ್ ಮೆಂಟ್ ನಿವಾಸಿ ಮನೋಹರ ಕಾಮತ್ ಮತ್ತು ನೇಪಾಳ ಮೂಲದ 9 ವರ್ಷದ ಬಾಲಕ ದಿನೇಶ್ ಮೃತಪಟ್ಟಿದ್ದಾರೆ.

ಬೆಂಗಳೂರಿನಲ್ಲಿ 2 ಕಡೆ ಮಳೆ ಹಾನಿ ಪ್ರದೇಶಕ್ಕೆ ಭೇಟಿ ನೀಡಿ ಡಿಸಿಎಂ ಡಿಕೆ ಶಿವಕುಮಾರ್ ಪರಿಶೀಲನೆ ಮಾಡಿದ್ದಾರೆ.



ಹಾನಿಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ. ಬಳಿಕ ಮಾತನಾಡಿದ ಅವರು, ಯಾರಿಗೆ ಪರಿಹಾರ ಕೊಡಬೇಕೋ ಅವರಿಗೆ ಕೊಡುತ್ತೇವೆ. ಉಳಿದುಕೊಳ್ಳಲು ಜಾಗದ ವ್ಯವಸ್ಥೆ ಮಾಡುತ್ತೇವೆ ಎಂದು ಭರವಸೆ ನೀಡಿದ್ದಾರೆ.

ಕಳೆದ ವರ್ಷ ಉತ್ತರ ಕನ್ನಡ ಜಿಲ್ಲೆ ಶಿರೂರಿನಲ್ಲಿ ಭೂ ಕುಸಿತ ಉಂಟಾಗಿ, 11 ಜನ ಮೃತಪಟ್ಟಿದ್ದರು. ಆ ಈ ದುರಂತದಲ್ಲಿ ಅಂಕೋಲ ತಾಲೂಕಿನ ಉಳವರೆಯ ಈ ತಮ್ಮಣ್ಣಿಗೌಡ ಕೂದಲೆಳೆ ಅಂತರದಲ್ಲಿ ಪಾರಾಗಿದ್ದರು. ಪುಟ 2

### ರಸ್ತೆಗಳು ಜಲಾವೃತ

**ಬೆಂಗಳೂರು:** ಬೆಂಗಳೂರು ಮಹಾನಗರದಲ್ಲಿ ಮಳೆಯ ಅಬ್ಬರ ಮುಂದುವರಿದಿದೆ. ಮೆಜೆಸ್ಟಿಕ್, ಕೆ.ಆರ್ .ಮಾರ್ಕೆಟ್, ಜಯನಗರ, ಚಾಮರಾಜಪೇಟೆ, ಬನಶಂಕರಿ, ಶಾಂತಿನಗರ, ವಿಜಯನಗರ, ಚಂದ್ರಾಲೇಔಟ್, ರಾಜಾಜಿನಗರ, ಆರ್.ಟಿ.ನಗರ, ಹೆಬ್ಬಾಳ, ಮಲ್ಲೇಶ್ವರಂ, ಕೋರಮಂಗಲ, ಕಾಮಾಕ್ಷಿಪಾಳ್ಯ, ಸುಂಕದಕಟ್ಟೆ, ನಾಗರಬಾವಿ, ಯಶವಂತಪುರ, ಪೀಣ್ಯ, ಬಿಟಿಎಂ ಲೇಔಟ್ ಸೇರಿ ಹಲವೆಡೆ ರಾತ್ರಿಯಿಂದಲೇ ಎಡೆಬಿಡದೆ ಮಳೆ ಸುರಿಯುತ್ತಿದೆ. ಈ ಪೈಕಿ ಕೆಲವು ಪ್ರದೇಶಗಳಲ್ಲಿ ಮಂಗಳವಾರ ಬೆಳಗ್ಗೆ ಮಳೆ ಜೋರಾಗಿದೆ. ಪರಿಣಾಮವಾಗಿ ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿದೆ.





ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ರಸ್ತೆಗಳು ಜಲಾವೃತಗೊಂಡಿದ್ದರೆ, ಇನ್ನು ಕೆಲವು ಕಡೆಗಳಲ್ಲಿ ಮರಗಳು ಬಿದ್ದು ಸಂಚಾರಕ್ಕೆ ಅಡಚಣೆಯಾಗಿದೆ. ಹಲವು ರಸ್ತೆಗಳಲ್ಲಿ ನಿಧಾನಗತಿಯ ಸಂಚಾರ ಇದೆ. ಈ ಬಗ್ಗೆ ಬೆಂಗಳೂರು ಸಂಚಾರ ಪೊಲೀಸರು ಮಾಹಿತಿ ನೀಡಿದ್ದಾರೆ.

ಪುಟ್ಟೇನಹಳ್ಳಿ ಮುಖ್ಯರಸ್ತೆ ಕಡೆಯಿಂದ ಕೊತ್ತನೂರು ದಿನ್ನೆ ಜಂಕ್ಷನ್ ಕಡೆಗೆ ಹಾಗೂ ಹೊಸಗುಡ್ಡದಹಳ್ಳಿ ಜಂಕ್ಷನ್ ಕಡೆಯಿಂದ ಮೈಸೂರು ರಸ್ತೆ ಟೋಲ್ಗೇಟ್ ಕಡೆಗೆ. ಮಳೆನೀರು ನಿಂತಿರುವುದರಿಂದ ನಿಧಾನಗತಿಯ ಸಂಚಾರವಿರುತ್ತದೆ ಎಂದು ಟ್ರಾಫಿಕ್ ಪೊಲೀಸರು ತಿಳಿಸಿದ್ದಾರೆ.

**ರೂಪೇನ ಅಗ್ರಹಾರದ ಬಳಿ ರಸ್ತೆ ಜಲಾವೃತ:** ಮಡಿವಾಳ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಳೆ ಬೀಳುತ್ತಿರುವುದರಿಂದ ರೂಪೇನ ಅಗ್ರಹಾರದ ಬಳಿ ರಸ್ತೆ ಜಲಾವೃತಗೊಂಡಿದ್ದು ಹೊಸೂರು ಮುಖ್ಯ ರಸ್ತೆ ಮೂಲಕ ನಗರದ ಒಳ ಭಾಗಕ್ಕೆ ಬರುವ ಸಂಚಾರ ನಿಧಾನಗತಿಯಲ್ಲಿ ಸಾಗುತ್ತಿದೆ. ಪುಟ 2

## ರೈಲ್ವೆ ಹಳಿ ಮೇಲೆ ಮರದ ದಿಮ್ಮಿಗಳನ್ನು ಎಸೆದು ರೈಲು ಹಳಿ ತಪ್ಪಿಸುವ ಯತ್ನ

**ಉತ್ತರ ಪ್ರದೇಶ:** ರೈಲ್ವೆ ಹಳಿ ಮೇಲೆ ಮರದ ದಿಮ್ಮಿಗಳನ್ನು ಎಸೆದು ರೈಲು ಹಳಿ ತಪ್ಪಿಸುವ ಯತ್ನ ಮಾಡಿರುವ ಘಟನೆ ಉತ್ತರ ಪ್ರದೇಶದ ಹರ್ದೋಯ್ ಜಿಲ್ಲೆಯಲ್ಲಿ ನಡೆದಿದೆ. ರೈಲ್ವೆ ಹಳಿಯಲ್ಲಿ ಅರ್ಥಿಂಗ್ ವೈರ್‌ನಲ್ಲಿ ಸಿಲುಕಿಕೊಂಡಿದ್ದ ಮರದ ದಿಮ್ಮಿಗಳನ್ನು ಇರಿಸಿ ರಾಜಧಾನಿ ಎಕ್ಸ್‌ಪ್ರೆಸ್ ಮತ್ತು ಕಠ್ಗೋಡಮ್ ಎಕ್ಸ್‌ಪ್ರೆಸ್ ಹಳಿ ತಪ್ಪಿಸಲು ದುಷ್ಕರ್ಮಿಗಳು ಸಂಚು ಹೂಡಿದ್ದರು.

ಆದರೆ ಇದು ರೈಲ್ವೆ ಲೋಕೋ ಪೈಲಟ್ ಗಮನಕ್ಕೆ ಬಂದಿದ್ದು, ಕೂಡಲೇ ರೈಲನ್ನು ನಿಲ್ಲಿಸಿದ್ದಾರೆ. ಹೀಗಾಗಿ ಸಂಭವಿಸಬೇಕಿದ್ದ ದೊಡ್ಡ ಅನಾಹುತವೇ ತಪ್ಪಿದಂತಾಗಿದೆ. ಹರ್ದೋಯ್-ಲಕ್ನೋ ರೈಲು ಮಾರ್ಗದಲ್ಲಿ ದಲೇಲ್‌ನಗರ ಮತ್ತು ಉಮರ್ತಾಲಿ ನಿಲ್ದಾಣಗಳ ನಡುವೆ ಈ ಘಟನೆ ಸಂಭವಿಸಿದೆ.



ಸೋಮವಾರ ಸಂಜೆ 5.45 ರ ಸುಮಾರಿಗೆ 20504 ನವದೆಹಲಿ-ದಿಬ್ರುಗಢ ರಾಜಧಾನಿ ಎಕ್ಸ್‌ಪ್ರೆಸ್ ಲಕ್ನೋ ಕಡೆಗೆ ಹೋಗುತ್ತಿದ್ದಾಗ ಮೊದಲ ಪ್ರಯತ್ನ ಮಾಡಲಾಯಿತು. ದುಷ್ಕರ್ಮಿಗಳು ಮರದ ತುಂಡನ್ನು ಕಬ್ಬಿಣದ ಅರ್ಥಿಂಗ್ ತಂತಿಗೆ ಬಿಗಿಯಾಗಿ ಜೋಡಿಸಿ, ಹಳಿತಪ್ಪಿಸಲು ಅದನ್ನು ಕೆಳ ಹಳಿಯಲ್ಲಿ ಇಟ್ಟಿದ್ದರು.

## ಕಾಂಗ್ರೆಸ್ ಸರ್ಕಾರದ ಸಾಧನಾ ಸಮಾವೇಶಕ್ಕೆ ಬಸ್ ಬುಕ್

**ವಿಜಯನಗರ:** ಕಾಂಗ್ರೆಸ್ ಸರ್ಕಾರ 2 ವರ್ಷಗಳ ಅಧಿಕಾರವಧಿ ಪೂರ್ಣಗೊಳಿಸಿದೆ. ಈ ಹಿನ್ನಲೆ ನಾಳೆ ಜಿಲ್ಲೆಯಲ್ಲಿ ಸರ್ಕಾರದ 2 ವರ್ಷಗಳ ಸಾಧನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ. 3 ಲಕ್ಷ ಜನ ಸೇರುವ ನಿರೀಕ್ಷೆ ಇದೆ. ಇನ್ನು ಈ ಸಮಾವೇಶಕ್ಕೆ ಫಲಾನುಭವಿಗಳನ್ನು ಕರೆದೊಯ್ಯಲು, ಸರ್ಕಾರಿ ಬಸ್ ಗಳನ್ನು ನಿಯೋಜನೆ ಮಾಡಲಾಗಿದೆ. ಹಾಗಾಗಿ ನಾಳೆ ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಸಂಚಾರ ವ್ಯತ್ಯಯ ಉಂಟಾಗಲಿದೆ. ಆದ್ದರಿಂದ ಪ್ರಯಾಣಿಕರು ನಾಳೆಯ ಪ್ರಯಾಣವನ್ನು ಮುಂದೂಡುವುದು ಉತ್ತಮ ಎನ್ನಲಾಗುತ್ತಿದೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ನಾಳೆಗೆ ಎರಡು ವರ್ಷ ಯಶಸ್ವಿಯಾಗಿ ಪೂರೈಸುತ್ತದೆ. ಈ ಹಿನ್ನಲೆ ಸಾಧನಾ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಜೊತೆಗೆ ವಿವಿಧ ಸವಲತ್ತುಗಳ ವಿತರಣಾ ಸಮಾವೇಶವೂ ನಡೆಯಲಿದೆ. ಎಲ್ಲಾ ಜಿಲ್ಲೆಗಳಿಂದ ವಿವಿಧ ಯೋಜನೆಗಳ ಫಲಾನುಭವಿಗಳು ವಿಜಯನಗರದತ್ತ ಮುಖ ಮಾಡಿದ್ದಾರೆ.



**ವಿಜಯಪುರ ಜಿಲ್ಲೆಯಿಂದ 200 ಬಸ್ ಗಳು ನಿಗದಿ:** ವಿಜಯಪುರ ಜಿಲ್ಲೆಯಿಂದ 200 ಬಸ್ ಗಳನ್ನು ನಿಗದಿ ಮಾಡಲಾಗಿದೆ. ವಿಜಯಪುರದಿಂದ ಸಾವಿರಾರು ಜನರು ತೆರಳಿದ್ದಾರೆ. ಫಲಾನುಭವಿಗಳ ಬೆಂಬಲಿಗರು ತೆರಳಲು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆಯ ಬಸ್ ಗಳನ್ನು ನಿಯೋಜನೆ ಮಾಡಲಾಗಿದೆ. ಈ ಹಿನ್ನಲೆ ನಾಳೆ ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ಬಸ್ ಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಹಾಗಾಗಿ ಸಾರ್ವಜನಿಕರು ಸಹಕಾರ ಪುಟ 2

## ವಿದೇಶದಲ್ಲಿ ಉದ್ಯೋಗ ಕೊಡಿಸುವ ನೆಪ ಕೋಟಿ ವಂಚನೆ

**ಮಂಗಳೂರು:** ವಿದೇಶದಲ್ಲಿ ಉದ್ಯೋಗ ಕೊಡಿಸುವ ಆಮಿಷವೊಡ್ಡಿ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಖಾಸಗಿ ಏಜೆನ್ಸಿಯೊಂದು ಕೋಟ್ಯಂತರ ರೂಪಾಯಿ ವಂಚನೆ ಎಸಗಿದ್ದು, 185ಕ್ಕೂ ಹೆಚ್ಚು ಮಂದಿ ಸಂತ್ರಸ್ತರಾಗಿದ್ದಾರೆ. Hire Glow Elegent overseas international Private Ltd ಎಂಬ ಹೆಸರಿನಿಂದ ವಂಚನೆಗೊಳಗಾದ 185 ಜನ ಇದೀಗ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ಕರ್ನಾಟಕ ಮಾತ್ರವಲ್ಲದೆ ಕೇರಳ ಸೇರಿದಂತೆ ಇತರ ಕೆಲವು ರಾಜ್ಯಗಳ ಜನರೂ ವಂಚನೆಗೆ ಒಳಗಾಗಿದ್ದಾರೆ.



ಇದೀಗ ವಂಚನೆಗೊಳಗಾದವರು ಪೊಲೀಸ್ ಠಾಣೆ ಮೆಟ್ಟಿಲೇರುತ್ತಿದ್ದಂತೆಯೇ ವಂಚನೆಯ ಕರಾಳ ಮುಖ ಅನಾವರಣಗೊಂಡಿದೆ.

**ನ್ಯೂಜಿಲೆಂಡ್‌ನಲ್ಲಿ ಕೆಲಸ ಕೊಡಿಸುವ ಆಮಿಷ:** ಮಂಗಳೂರಿನ ಕಂಕನಾಡಿಯಲ್ಲಿ ಕಚೇರಿಯನ್ನು ಹೊಂದಿದ್ದ ಖಾಸಗಿ ಸಂಸ್ಥೆ ನ್ಯೂಜಿಲೆಂಡ್‌ನ VALARIS ಕಂಪೆನಿಯಲ್ಲಿ ಉದ್ಯೋಗ ಕೊಡಿಸುವ ಬಗ್ಗೆ ಭರವಸೆ ನೀಡಿತ್ತು. ಹೀಗಾಗಿ ದಕ್ಷಿಣಕನ್ನಡ ಜಿಲ್ಲೆಯ 185ಕ್ಕೂ ಹೆಚ್ಚು ಮಂದಿ ಕಂಪನಿಯನ್ನು ಉದ್ಯೋಗಕ್ಕಾಗಿ ಸಂಪರ್ಕಿಸಿದ್ದರು. ಪುಟ 2

## ಮನೆ ನಿರ್ಮಾಣ ಪೂರ್ಣಗೊಳಿಸಲು ಸೂಚನೆ

**ರಾಮನಗರ:** ಚನ್ನಪಟ್ಟಣ ನಗರಸಭೆ ವತಿಯಿಂದ 2010-11ರಿಂದ 2015-16ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿ (ವಾಜಪೇಯಿ ನಗರ ವಸತಿ ಯೋಜನೆ, ಡಾ. ಬಿ.ಆರ್. ಅಂಬೇಡ್ಕರ್ ನಗರ ವಸತಿ ಯೋಜನೆ, ಪ್ರಧಾನ ಮಂತ್ರಿ ಅವಾಸ್ ನಗರ ವಸತಿ ಯೋಜನೆ) ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಿ, ಯೋಜನೆಯನ್ನು ಮುಕ್ತಾಯಗೊಳಿಸುವ ಬಗ್ಗೆ ಮತ್ತು ಪ್ರಧಾನ ಮಂತ್ರಿ ಅವಾಸ್ ನಗರ ವಸತಿ ಯೋಜನೆಯಡಿ ಪ್ರಾರಂಭವಾಗದ ಮನೆಗಳನ್ನು ಮೇ 31 ರೊಳಗೆ ಪ್ರಾರಂಭಿಸಿ ಮುಕ್ತಾಯಗೊಳಿಸಲು ಅಂತಿಮ ಕಾಲಾವಕಾಶ ನೀಡಲಾಗಿದೆ. ಈಗಾಗಲೇ ಇನ್ನೂ ಪ್ರಾರಂಭಿಸದ ಹಾಗೂ ವಿವಿಧ ಹಂತದಲ್ಲಿರುವ ಮನೆ ನಿರ್ಮಿಸದ ಫಲಾನುಭವಿಗಳಿಗೆ ನೋಟೀಸ್ ನೀಡಲಾಗಿದ್ದು, ಇಲ್ಲಿಯವರೆಗೆ ಮನೆ ನಿರ್ಮಾಣವನ್ನು ಪೂರ್ಣಗೊಳಿಸದೆ ಇದ್ದಲ್ಲಿ ಮೇ 31ರೊಳಗೆ ಪ್ರಾರಂಭಿಸಿ ಪೂರ್ಣಗೊಳಿಸಲು ಅಂತಿಮ ಕಾಲಾವಕಾಶ ನೀಡಲಾಗಿದೆ. ತಪ್ಪಿದ್ದಲ್ಲಿ ಸರ್ಕಾರದ ಆದೇಶ ಹಾಗೂ ರಾಜೀವ್ ಗಾಂಧೀ ವಸತಿ ನಿಗಮ ನಿಯಮಿತದ ಆದೇಶದಂತೆ ಈ ಮನೆಗಳಿಗೆ ಬಿಡುಗಡೆಯಾದ ಅನುದಾನವನ್ನು ಭೂ ಕಂದಾಯ ಬಾಕಿ ವಸೂಲಿ ಮಾಡಿ ಸರ್ಕಾರಕ್ಕೆ ಜಮೆ ಮಾಡಿ ಹಾಗೂ ಮನೆಗಳನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಚನ್ನಪಟ್ಟಣ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐ.ಟಿ.ಐ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ರಾಮನಗರ:** ಹಾರೋಹಳ್ಳಿಯ ಕುಂಬಾರ ಕಾಲೋನಿಯ ಡಿ.ಪಿ.ಕೆ ಕಾಂಪ್ಲೆಕ್ಸ್ ನಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26ನೇ ಸಾಲಿನ ಐ.ಟಿ.ಐ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಸಂಸ್ಥೆಯಲ್ಲಿ ಫಿಟ್ಟರ್, ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ ಹಾಗೂ ಟಿ.ಆರ್.ಎ.ಸಿ ವೃತ್ತಿಗಳಲ್ಲಿ ಪ್ರವೇಶಾತಿ ಲಭ್ಯವಿದ್ದು, ಎಸ್.ಎಸ್.ಎಲ್.ಸಿ ಉತ್ತೀರ್ಣ ಹಾಗೂ ಪಿ.ಯು.ಸಿಯಲ್ಲಿ ಉತ್ತೀರ್ಣ/ಅನುತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಮೇ 28ರೊಳಗೆ ವೆಬ್ ಸೈಟ್ www.cite.karnataka.gov.inಮೂಲಕ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ರಾಮನಗರ:** ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು http://shp.karnataka.gov.in/bcwd ಮೂಲಕ 2025ರ ಜೂನ್ 16ರೊಳಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬೇಕು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ: 8050770004 ಅಥವಾ 8050770005 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಅರ್ಜಿ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಅನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ: ಪ್ರವರ್ಗ-1, ಎಸ್.ಸಿ ಎಸ್.ಟಿ. ರೂ. 2.50 ಲಕ್ಷ, ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ, ವರ್ಗ ಹಾಗೂ ಇತರೆ ರೂ. 1.00ಲಕ್ಷ ಇಲಾಖೆಯ ವೆಬ್‌ಸೈಟ್ https://shp.karnataka.gov.in/bcw ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನಾಂಕವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004 ಮತ್ತು 8050770005 ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಡಿಪ್ಲೊಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಅರ್ಜಿ

**ಬೆಂಗಳೂರು:** ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯು 2025-26 ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸ್‌ಗೆ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಸ್.ಎಸ್.ಎಲ್.ಸಿ ಉತ್ತೀರ್ಣವಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಈ ಕೋರ್ಸ್ 3 ವರ್ಷದ ಅವಧಿಯದ್ದಾಗಿದೆ.

ಪ್ರವೇಶಕ್ಕೆ ಬಯಸುವ ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ ಶಾಲೆಯ ಮುಖ್ಯಸ್ಥರು ದೃಡೀಕರಿಸಿದ ಎಸ್.ಎಸ್.ಎಲ್.ಸಿ / ತತ್ಸಮಾನವಾದ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಂಕಪಟ್ಟಿ, ಮೂಲ ವರ್ಗಾವಣೆ ಪ್ರಮಾಣ ಪತ್ರ, ವ್ಯಾಸಂಗ ಪ್ರಮಾಣ ಪತ್ರ (5 ವರ್ಷಗಳ ಬಿ.ಇ.ಓ ರವರಿಂದ ದೃಡೀಕರಿಸಿರಬೇಕು), ಇತ್ತೀಚಿನ ಪಾಸ್ ಪೋರ್ಟ್ ಅಳತೆಯ 06 ಭಾವಚಿತ್ರಗಳು, ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ, ಕನ್ನಡ / ಗ್ರಾಮೀಣ / ಹೈದ್ರಾಬಾದ್-ಕರ್ನಾಟಕ ಪ್ರಮಾಣ ಪತ್ರ, ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯ ಜಾಲತಾಣ https://gpt.karnataka.gov.in/gittbengaluru/public/ ಹಾಗೂ ಶ್ರೀಮತಿ ಉಷಾ ಎಸ್. ಪ್ರಾಂಶುಪಾಲರು ಮೊಬೈಲ್ ಸಂಖ್ಯೆ : 9481101049 ಮತ್ತು ಶ್ರೀನಿವಾಸಯ್ಯ ವಿ, ವಿಭಾಗದ ಮುಖ್ಯಸ್ಥರು ಮೊಬೈಲ್ ಸಂಖ್ಯೆ : 9448705205 ಇವರನ್ನು ಸಂಪರ್ಕಿಸಬಹುದು ಅಥವಾ ಸಂಸ್ಥೆಗೆ ಬಂದು ಕಾರ್ಯಾಲಯದಿಂದ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಲೋಕಾಯುಕ್ತ: ದೂರು ಸ್ವೀಕರಿಸುವ ಕಾರ್ಯಕ್ರಮ

**ಮೈಸೂರು:** ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳಿಂದ ಮೇ 21 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲ್ಲೂಕು ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ/ ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಅಗತ್ಯ ದಾಖಲೆಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಉಮೇಶ್.ಟಿ. ಜೆ. ಅವರು ತಿಳಿಸಿದ್ದಾರೆ.

## ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

**ಮೈಸೂರು:** ಕೈಮಗ್ಗ ಮತ್ತು ಜವಳಿ ಇಲಾಖೆಯ ವತಿಯಿಂದ 2025-26 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷದ ಡಿಪ್ಲೋಮಾ(ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಸಮಯದಲ್ಲಿ ಅವರಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುತ್ತದೆ.

ಎಸ್. ಎಸ್. ಎಲ್. ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಜುಲೈ 1,2025 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿ ಹೊಂದಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ. 2025-26 ನೇ ಸಾಲಿಗೆ ಮೂರು ವರ್ಷದ ಡಿಪ್ಲೋಮಾ ಕೋರ್ಸ್‌ಗಾಗಿ ಲಭ್ಯವಿರುವ ಅಭ್ಯರ್ಥಿಗಳ ಸಂಖ್ಯೆ ಮತ್ತು ಸಂಸ್ಥೆಗಳ ವಿವರ: ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ - ಬೆಟಗೇರಿ( ಕರ್ನಾಟಕ), 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ , ಸೇಲಂ (ತಮಿಳುನಾಡು), 12 ಅಭ್ಯರ್ಥಿಗಳು, ಎಸ್. ಪಿ.ಕೆ.ಎಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂಧ್ರಪ್ರದೇಶ), 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು(ಕೇರಳ), 02 ಅಭ್ಯರ್ಥಿಗಳು ಒಟ್ಟು 39 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್ ಕರೆಯಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ನರಸಾಪುರ ಗದಗ-ಬೆಟಗೇರಿ ಕಚೇರಿ ದೂ. ಸಂ: 08372-297221 ಮೋ.ನಂ.9449162822 ಅಥವಾ ಉಪ ನಿರ್ದೇಶಕರ ಕಚೇರಿ ಕೈಮಗ್ಗ ಮತ್ತು ಜವಳಿ ಇಲಾಖೆ ಸಿ.ಟಿ.ಐ.ಕಟ್ಟಡ ಸೈಯಾಜಿ ರಾವ್ ರಸ್ತೆ ಜಿಲ್ಲಾ ಪಂಚಾಯತ್ ಮೈಸೂರು ದೂ. ಸಂ: 0821-2441353 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್‌ನ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಸಕ ಕೆ.ವೈ. ನಂಜೇಗೌಡ ಹೇಳಿಕೆ

# ಕದನ ವಿರಾಮ ಘೋಷಣೆ ಸೈನಿಕರು, ಜನತೆಗೆ ನೋವು ತಂದಿದೆ

**ಮಾಲೂರು:** ಪಾಕಿಸ್ತಾನದ ಮೇಲೆ ಭಯೋತ್ಪಾದನೆ ನಿಗ್ರಹಕ್ಕಾಗಿ ಭಾರತ ದೇಶವು ಕೈಗೊಂಡ ಯುದ್ಧಕ್ಕೆ ದೇಶದಲ್ಲಿ ಕಾಂಗ್ರೆಸ್ ಪಕ್ಷ ಸೇರಿದಂತೆ ಸರ್ವಪಕ್ಷಗಳು ಪಕ್ಷಾತೀತವಾಗಿ ಸಹಕಾರ ನೀಡಲಾಗಿತ್ತು ಆದರೆ ಅಮೆರಿಕದ ಅಧ್ಯಕ್ಷರ ಮಾತಿಗೆ ಮನ್ನಣೆ ನೀಡಿ ಕದನ ವಿರಾಮ ಘೋಷಣೆ ಮಾಡಿರುವುದು ದೇಶದ ಸೈನಿಕರು ಹಾಗೂ ಜನತೆಗೆ ನೋವು ತಂದಿದೆ ಎಂದು ಶಾಸಕ ಕೆ.ವೈ. ನಂಜೇಗೌಡ ಹೇಳಿದರು.

42 ವರ್ಷಗಳ ಕಾಲ ಸೈನಿಕ ವೃತ್ತಿಯನ್ನು ನಿರ್ವಹಿಸಿ ನಿವೃತ್ತಿಯಾದ ತಾಲೂಕಿನ ಜಯಮಂಗಲ ನಿವಾಸಿ ವಿ. ಗುರುಮೂರ್ತಿ ಅವರಿಗೆ ನಿವೃತ್ತ ಯೋದರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಗತ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರನ್ನು ಅಭಿನಂದಿಸಿ ಮಾತನಾಡಿದರು.

ಇತ್ತೀಚಿಗೆ ಕಾಶ್ಮೀರದ ಪಹಲ್ ಗಾಮ್‌ನಲ್ಲಿ ಪಾಕಿಸ್ತಾನದ ಭಯೋತ್ಪಾದಕರು ಪ್ರವಾಸಿಗರ ಮೇಲೆ ನಡೆಸಿದ ಗುಂಡಿನ ದಾಳಿಯಿಂದ 26 ಮಂದಿ ಪ್ರವಾಸಿಗರನ್ನು ಹತ್ಯೆಗಯುತಿದ್ದರು. ಈ ಸೇಡನ್ನು ತೀರಿಸಿಕೊಳ್ಳಲು ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಪಾಕಿಸ್ತಾನದ ಮೇಲೆ ಯುದ್ಧ ಸಾರಿದ್ದರು. ಯುದ್ಧಕ್ಕೆ ಪಕ್ಷಾತೀತವಾಗಿ ಕಾಂಗ್ರೆಸ್ ಪಕ್ಷ ಸೇರಿದಂತೆ ಎಲ್ಲಾ ಪಕ್ಷಗಳು ಸಹಕಾರ ನೀಡಿದ್ದರು. ಆದರೆ ಮಧ್ಯದಲ್ಲಿ ಅಮೆರಿಕ ಅಧ್ಯಕ್ಷರ ಮಾತಿಗೆ ಮನ್ನಣೆ ನೀಡಿ ಯುದ್ಧದ ಕದನ ವಿರಾಮ ಘೋಷಣೆ ಮಾಡಿರುವುದು ಜನತೆಗೆ ನೋವು ತಂದಿದೆ. ದೇಶದ ಸೈನಿಕರು ತಮ್ಮ ಕುಟುಂಬಗಳನ್ನು ತೊರೆದು ಹಗಲಿರುಳು ದೇಶವನ್ನು ಕಾಯುವ ಕೆಲಸ ಮಾಡುತ್ತಾರೆ ನಮ್ಮ ದೇಶದ ಸೈನಿಕರಿಗೆ ದೇಶಪ್ರೇಮ ಹಾಗೂ ಧೈರ್ಯ ಹೆಚ್ಚಾಗಿದ್ದು, ಕದನ ವಿರಾಮ ಘೋಷಿಸದೆ ಸೈನಿಕರಿಗೆ ಪೂರ್ಣ ಪ್ರಮಾಣದ ಸ್ವಾತಂತ್ರ್ಯ ನೀಡಿದ್ದಾರೆ. ಪಾಕಿಸ್ತಾನದಲ್ಲಿರುವ ಭಯೋತ್ಪಾದಕರನ್ನು ಮಟ್ಟ ಹಾಕುತ್ತಿದ್ದರು ದೇಶದ ಸೈನಿಕರಿಗೂ ಸಹ ಕದನ ವಿರಾಮದಿಂದ ಸ್ವಾತಂತ್ರ್ಯ ಕಿತ್ತುಕೊಂಡಂತಾಗಿದೆ ಎಂದರು.

ಇಂದಿರಾ ಗಾಂಧಿಯವರ ಅಧಿಕಾರಾವಧಿಯಲ್ಲಿ ಪಾಕಿಸ್ತಾನದ ಮೇಲೆ ಯುದ್ಧವನ್ನು ಸಾರಿ ಗೆಲುವು ಸಿಕ್ಕಂತೆ ಕದನ ವಿರಾಮ ಘೋಷಣೆ ಮಾಡದಿದ್ದಲ್ಲಿ ನಮ್ಮ ದೇಶಕ್ಕೆ ಗೆಲುವು ಸಿಗುತ್ತಿತ್ತು ನಮ್ಮ ದೇಶವು ಬಲಿಷ್ಠವಾಗಿದೆ ಯೋಧರ ಧೈರ್ಯ ಕುಗ್ಗಿಸಲು ಸಾಧ್ಯವಾಗುವುದಿಲ್ಲ ಯಾವುದೇ ದೇಶದ ಮೇಲೆ ನಾವು ಅವಲಂಬನೆಯಾಗಿಲ್ಲ ಸೈನಿಕರು ಕುಟುಂಬಗಳನ್ನು ತೊರೆದು ನಿರ್ಭೀತಿಯಿಂದ ಪಾಕಿಸ್ತಾನದ ವಿರುದ್ಧ ಹೋರಾಟ ಮಾಡಿದ್ದಾರೆ. ಈ ಹೋರಾಟದಲ್ಲಿ ತಾಲೂಕಿನ ಜಯಮಂಗಲ ಗ್ರಾಮದ ಗುರುಮೂರ್ತಿಯವರು ಸಹ ಭಾಗವಹಿಸಿರುವುದು ತಾಲೂಕಿಗೆ ಹೆಮ್ಮೆಯಾಗಿದೆ.



42 ವರ್ಷಗಳ ಕಾಲ ಸೈನಿಕ ವೃತ್ತಿಯನ್ನು ನಿರ್ವಹಿಸಿರುವ ಗುರುಮೂರ್ತಿಯವರು ದೇಶ ಕಾಯುವ ಕೆಲಸ ಮಾಡಿ ವಾಪಸ್ ಆಗಿದ್ದಾರೆ. ಸೈನಿಕರಂದರೇ ದೇಶದ ರಕ್ಷಕರು ಸೈನಿಕರಾಗಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಡಿ ದೇಶವನ್ನು ಕಟ್ಟುವ ಜವಾಬ್ದಾರಿ ಆಡಳಿತ ನಡೆಸಿದ ಸರ್ಕಾರ ದೇಶದ ಶಾಂತಿ ಕಾಪಾಡಿಕೊಂಡು ಬರುವುದು ಸೈನಿಕರ ಪಾತ್ರ ಅತ್ಯಂತ ಮಹತ್ವವಾದದು

42 ವರ್ಷಗಳ ಕಾಲ ಸಾಮಾನ್ಯವಾಗಿ ಯಾರು ಸಹ ಸೈನಿಕ ವೃತ್ತಿಯನ್ನು ನಿರ್ವಹಿಸುವುದಿಲ್ಲ 20 ವರ್ಷಗಳಿಗೆ ಸ್ವಯಂ ನಿವೃತ್ತಿ ಒಂದು ಮೂಲಕ ವಾಪಸ್ ಆಗುತ್ತಾರೆ ಸೈನಿಕರು ಅವರ ಕುಟುಂಬವನ್ನು ತೊರೆದು ದೇಶ ಕಟ್ಟುವ ಕಾಯುವ ಕೆಲಸ ಮಾಡುವುದು ನಮ್ಮೆಲ್ಲರ ಭಾಗ್ಯ ಗುರುಮೂರ್ತಿಯವರು ದೇಶ ಕಾಯುವ ಕೆಲಸ ಮಾಡಿದ್ದಾರೆ. ಜಯಮಂಗಲ ಗ್ರಾಮದವರಾಗಿದ್ದು ಈ ಗ್ರಾಮದಲ್ಲಿ5 ಮಂದಿ ಸೈನಿಕರು ಪ್ರಸ್ತುತ ಸಹ ದೇಶ ಕಾಯುವ ಕೆಲಸ ಮಾಡುತ್ತಿದ್ದಾರೆ ಅಲ್ಲದೆ ಈ ಗ್ರಾಮದಲ್ಲಿ ದಲಿತ ಚಳುವಳಿ ಹಾಗೂ ಹೋರಾಟಗಳು ಪ್ರಾರಂಭವಾಗಿದ್ದು, ಸಹ ಇದೇ ಗ್ರಾಮದಲ್ಲಿ 60 ಕ್ಕೂ ಹೆಚ್ಚು ಶಿಕ್ಷಕರು ಸಹ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಸೈನಿಕ ವೃತ್ತಿಗೆ ಹೋಗುವರು ಕಷ್ಟದ ತೀರ್ಮಾನ ತೆಗೆದುಕೊಳ್ಳುತ್ತಾರೆ. ದೇಶದ ಕಾಯುವುದು ದೇಶ ಸೇವೆಗಾಗಿ ಸೈನಿಕ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳುತ್ತಾರೆ. ನಿವೃತ್ತ ಯೋಧರಿಗೆ ಸರ್ಕಾರದಿಂದ ಸಿಗುವ ಸೌಲತ್ತುಗಳನ್ನು ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಜೊತೆಗೆ ನಿವೃತ್ತ ಯೋದರಿಗೆ ಭೂ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ ತಾಲೂಕು ಆಡಳಿತ ವತಿಯಿಂದ ಭೂ ಮಂಜೂರು ಮಾಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ವಿಜಯಲಕ್ಷ್ಮಿ, ಉಪಾಧ್ಯಕ್ಷ ವಿಜಯಲಕ್ಷ್ಮಿ, ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ಡಾ. ಕಿರಣ್ ಸೋಮಣ್ಣ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಂಜಿನಪ್ಪ, ಯೋಜನಾ ಪ್ರಾಧಿಕಾರ ಅಧ್ಯಕ್ಷ ನಹಿಮುಲ್ಲಾ ಖಾನ್, ಕಸಾಪ ಅಧ್ಯಕ್ಷ ಹನುಮಂತಯ್ಯ, ತಾಪಂ. ಮಾಜಿ ಅಧ್ಯಕ್ಷ ಸಂಪಂಗೆರೆ ಮುನಿರಾಜು, ಸಾಹಿತಿ ಜಮುಚಂದ್ರ, ದೇಶಾಭಿಮಾನಿ ಬಳಗದ ಸಂಘದ ಅಧ್ಯಕ್ಷ ರೇವಣ್ಣ, ನಿವೃತ್ತ ಯೋಧರ ಸಂಘದ ಅಧ್ಯಕ್ಷ ಗಣೇಶ್, ಸದಸ್ಯರುಗಳಾದ ಆರ್.ಸಿ. ಗಂಗರಾಜು, ಕೃಷ್ಣಪ್ಪ, ನಾಗರಾಜ್, ಮುರುಗೇಶ್, ಸೋಮಶೇಖರ್, ರಾಮಪ್ಪ, ಮುನಿಸ್ವಾಮಿ, ವೆಂಕಟೇಶ್, ವಿಶ್ವನಾಥ್, ಇನ್ನಿತರರು ಹಾಜರಿದ್ದರು.

17 ಮಾಲೂರು ಫೋಟೊ 1. ಮಾಲೂರು ತಾಲೂಕಿನ ಜಯಮಂಗಲ ವಿ.ಗುರುಮೂರ್ತಿ 42ವರ್ಷಗಳ ಕಾಲ ಸೈನಿಕ ವೃತ್ತಿಯನ್ನು ನಿರ್ವಹಿಸಿ ನಿವೃತ್ತಿಯಾದ ಅವರಿಗೆ ನಿವೃತ್ತ ಯೋದರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಗತ ಕಾರ್ಯಕ್ರಮದಲ್ಲಿ ಅವರನ್ನು ಶಾಸಕ ಕೆ.ವೈ.ನಂಜೇಗೌಡ ಅಭಿನಂದಿಸಿದರು.

## ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ಮೈಸೂರು:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮೈಸೂರು ಜಿಲ್ಲೆಯಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆರು 68 ಹಾಗೂ ಸಹಾಯಕಿಯರ 251 ಹುದ್ದೆಗೆ ಗೌರವಧನ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಹೆಣ್ಣು ಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪ ಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನಾಂಕವಾಗಿರುತ್ತದೆ.

ಟಿ.ನರಸೀಪುರ ಅಂಗನವಾಡಿ ಕಾರ್ಯಕರ್ತೆ 03 ಹಾಗೂ ಸಹಾಯಕಿಯರ 28 ಹುದ್ದೆಗಳು, ಬಿಳಿಕೆರೆ ಅಂಗನವಾಡಿ ಕಾರ್ಯಕರ್ತೆ 06 ಹಾಗೂ ಸಹಾಯಕಿಯರ 32 ಹುದ್ದೆಗಳು, ನಂಜನಗೂಡು ಅಂಗನವಾಡಿ ಕಾರ್ಯಕರ್ತೆ 10 ಹಾಗೂ ಸಹಾಯಕಿಯರ 31 ಹುದ್ದೆಗಳು, ಮೈಸೂರು ನಗರ ಅಂಗನವಾಡಿ ಕಾರ್ಯಕರ್ತೆ 01 ಹಾಗೂ ಸಹಾಯಕಿಯರ 14 ಹುದ್ದೆಗಳು, ಮೈಸೂರು ಗ್ರಾಮಾಂತರ ಅಂಗನವಾಡಿ ಕಾರ್ಯಕರ್ತೆ 06 ಹಾಗೂ ಸಹಾಯಕಿಯರ 12 ಹುದ್ದೆಗಳು, ಪಿರಿಯಾಪಟ್ಟಣ ಅಂಗನವಾಡಿ ಕಾರ್ಯಕರ್ತೆ 11 ಹಾಗೂ ಸಹಾಯಕಿಯರ 57 ಹುದ್ದೆಗಳು, ಹೆಚ್.ಡಿ ಕೋಟೆ ಅಂಗನವಾಡಿ ಕಾರ್ಯಕರ್ತೆ 22 ಹಾಗೂ ಸಹಾಯಕಿಯರ 29 ಹುದ್ದೆಗಳು, ಕೆ.ಆರ್ .ನಗರ ಅಂಗನವಾಡಿ ಕಾರ್ಯಕರ್ತೆ 04 ಹಾಗೂ ಸಹಾಯಕಿಯರ 22 ಹುದ್ದೆಗಳು, ಹುಣಸೂರು ಅಂಗನವಾಡಿ ಕಾರ್ಯಕರ್ತೆ 05 ಹಾಗೂ ಸಹಾಯಕಿಯರ 26 ಹುದ್ದೆಗಳು ಖಾಲಿ ಇದ್ದು, ಒಟ್ಟು ಅಂಗನವಾಡಿ ಕಾರ್ಯಕರ್ತೆರು 68 ಹಾಗೂ ಸಹಾಯಕಿಯರ 251 ಹುದ್ದೆಗಳು ಖಾಲಿಯಿದೆ.

ಆನ್‌ಲೈನ್‌ನಲ್ಲಿ ಲಗತ್ತಿಸಬೇಕಾದ ದಾಖಲಾತಿಗಳು: ಆನ್ ಲೈನ್‌ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುತ್ತದೆ. ಅರ್ಜಿಗಳನ್ನು ಭರ್ತಿಮಾಡಿ ಅವಶ್ಯಕ ಧೃಢಿಕೃತ ದಾಖಲೆಗಳನ್ನು ಸ್ಪಷ್ಟವಾಗಿ ಕಾಣಿಸುವಂತೆ ಸ್ಕ್ಯಾನ್ ಮಾಡಿ ಅರ್ಜಿ ಸಲ್ಲಿಸಬೇಕು, ಆನ್ ಲೈನ್ ಮೂಲಕವೇ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು, ಆಫ್ ಲೈನ್‌ನಲ್ಲಿ ಸಲ್ಲಿಸುವ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. 19 ವರ್ಷ ದಿಂದ 35 ವರ್ಷ ಮೀರಿರವಾರದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಾನ ಸಡಿಲಿಕೆ ಇರುತ್ತದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ 4 ಹಂತಗಳಿದ್ದು, ಸೂಕ್ಷ್ಮವಾಗಿ ಓದಿ 4 ಹಂತಗಳನ್ನು ಪೂರೈಸಿ ಅರ್ಜಿ ಸಲ್ಲಿಸಬೇಕು. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಪಿ.ಯು.ಸಿ ತೇರ್ಗಡೆ ಹೊಂದಿರಬೇಕು ಹಾಗೂ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು. ಅಂಗನವಾಡಿ ಸಹಾಯಕಿ ಹುದ್ದೆಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡಭಾಷೆಯನ್ನು ಪ್ರಥಮ ಭಾಷೆ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ದೂ.ಸಂ:08227-261267 ನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಕ್ರೀಡಾಪಟುಗಳಿಗೆ ವಿಶೇಷ ಬಹುಮಾನ ವಿತರಣೆ

**ಮಾಲೂರು:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಾಲೂರು ಸಂಘದ ವತಿಯಿಂದ ಕೋಲಾರ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾಗಿ ರಾಜ್ಯಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಲಿರುವ ಸ್ಪರ್ಧಾಳುಗಳನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಸಂಘದ ಅಧ್ಯಕ್ಷ ವಿ. ಮುನೇಗೌಡ ಕ್ರೀಡಾ ಪಟುಗಳನ್ನು ಕುರಿತು ಮಾತನಾಡಿ ಪ್ರತಿನಿತ್ಯ ಕೆಲಸದ ಒತ್ತಡ ನಡುವೆ ಕಾರ್ಯ ನಿರ್ವಹಿಸುವ ಸರ್ಕಾರಿ ನೌಕರರು ವೃತ್ತಿಯ ಜೊತೆಗೆ ಕ್ರೀಡೆಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅಭ್ಯಾಸ ಮಾಡಿಕೊಂಡು ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಗಳನ್ನು ಪ್ರದರ್ಶಿಸುವ ಮೂಲಕ ರಾಜ್ಯಮಟ್ಟದ ಕ್ರೀಡಾಕೂಟಗಳಲ್ಲಿಯು ಸಹ ಯಶಸ್ವಿಯಾಗಿ ಭಾಗವಹಿಸಿ ವಿಜೇತರಾಗಿ ಬಹುಮಾನಗಳನ್ನು ಪಡೆದು ತಾಲೂಕಿಗೆ ಕೀರ್ತಿಯನ್ನು ತರುವಂತೆ ಹೇಳಿದವರು ಸರ್ಕಾರಿ ನೌಕರ ಸಂಘದ ವತಿಯಿಂದ ಕ್ರೀಡೆಗಳಲ್ಲಿ ಭಾಗವಹಿಸಿದ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಿಜೇತರಾಗಿ ಬಹುಮಾನಗಳನ್ನು ಪಡೆದ ನೌಕರರನ್ನು ಪ್ರೋತ್ಸಾಹಿಸುವ ಸಲುವಾಗಿ ಅಭಿನಂದಿಸಲಾಗುತ್ತಿದೆ ಅಂತರಾಷ್ಟ್ರೀಯಮಟ್ಟ, ರಾಜ್ಯ ಮಟ್ಟದಲ್ಲಿ ವಿಜೇತರಾಗಿ ಬರುವ ಕ್ರೀಡಾಪಟುಗಳಿಗೆ ವಿಶೇಷ ಬಹುಮಾನವನ್ನು ನೀಡಿ ಅಭಿನಂದಿಸಲಾಗುವುದು ಎಂದರು.

ತಾಲ್ಲೂಕು ಸಂಘದ ಖಜಾಂಚಿ ಆರ್.ನರಸಿಂಹ, ಮಾಜಿ ಅಧ್ಯಕ್ಷ ಆಂಜಿನಪ್ಪ, ಕಾರ್ಯದರ್ಶಿ ಎಂ.ರವಿ, ಸಂಘದ ಕ್ರೀಡಾ ಕಾರ್ಯದರ್ಶಿ ಅಂಬಿಕಾ, ಸಂಘಟನಾ ಕಾರ್ಯದರ್ಶಿಗಳಾದ ಶರತ್, ಚಂದ್ರಶೇಖರ್, ಆಂತರಿಕ ಲೆಕ್ಕಪರಿಶೋಧಕಿ ಲೀಲಾವತಿ, ನಿರ್ದೇಶಕರಾದ ಭಾನುಪ್ರಸಾದ್, ರಾಜ್ಯಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳು ಹಾಜರಿದ್ದರು.



ಮಾಲೂರು ತಾಲೂಕಿನಿಂದ ರಾಜ್ಯಮಟ್ಟದಲ್ಲಿ ಭಾಗವಹಿಸುವ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳು ವಿಜೇತರಾಗಲಿ ಎಂದು ತಾಲೂಕು ಸರ್ಕಾರಿ ನೌಕರ ಸಂಘದ ಅಧ್ಯಕ್ಷ ವಿ. ಮುನೇಗೌಡ ಶುಭ ಹಾರೈಸಿದರು.

## ವಿದ್ಯಾರ್ಥಿನಿಲಯ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಮೈಸೂರು:** ಹುಣಸೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನ ಮೆಟ್ರಿಕ್ ನಂತರದ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹೊಸದಾಗಿ ಖಾಲಿ ಇರುವ ಸ್ಥಾನಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳಿಗೆ ಉಚಿತ ವಸತಿ, ಊಟ, ಲೇಖನ ಸಾಮಾಗ್ರಿ, ನೋಟ್ ಪುಸ್ತಕ, ಲೈಬ್ರರಿ ವ್ಯವಸ್ಥೆ, ಕಂಪ್ಯೂಟರ್ ಲ್ಯಾಬ್, ಎರಡು ಜೊತೆ ಸಮವಸ್ತ್ರ, ಪತ್ರಿ ತಿಂಗಳು ಬಟ್ಟೆ ಸೋಪು, ಮೈಸೋಪು, ಕೊಬ್ಬರಿ ಎಣ್ಣೆ, ಟೂತ್ ಬ್ರಸ್ ಮತ್ತು ಪೇಸ್ಟ್ ಇತ್ಯಾದಿ ಸೌಲಭ್ಯಗಳನ್ನು ನೀಡಲಾಗುವುದು.

ಆಸಕ್ತ ವಿದ್ಯಾರ್ಥಿನಿಲಯಗಳು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬಿಳಿಕೆರೆ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಗೆರೆಸನಹಳ್ಳಿ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹನಗೋಡು, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹಿರಿಕ್ಯಾತನಹಳ್ಳಿ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹುಣಸೂರು ಟೌನ್, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ತಟ್ಟೆಕೆರೆ, ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಹುಣಸೂರು ಟೌನ್ ಕಾರ್ಯನಿರ್ವಸುತ್ತಿರು ಸ್ಥಳಗಳು.

ವಿದ್ಯಾರ್ಥಿನಿಯಗಳಿಗೆ ಪ್ರವೇಶ ಪಡೆಯಲು ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.1.00 ಲಕ್ಷ/- ಗಳಿರುವ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ಕ್ಕೆ ಸೇರಿದ ಮತ್ತು ಎಸ್.ಸಿ ಮತ್ತು ಎಸ್.ಟಿ ಪಂಗಡಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ರೂ. 2.50 ಲಕ್ಷ ಆದಾಯ ಮಿತಿ ಇರಬೇಕು. https://shp.karnataka.gov.in/bcwd ಅನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು. ಜೂನ್ 16 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುತ್ತದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕರ ಸ್ವಗ್ರಾಮದಲ್ಲಿ ವಿಜೃಂಭಣೆ ಕರಗ

**ಮಾಲೂರು:** ತಾಲೂಕಿನ ಕೊಮ್ಮನಹಳ್ಳಿ ಗ್ರಾಮದಲ್ಲಿ 2ವರ್ಷದ ದ್ರೌಪದಮ್ಮ ಕರಗ ಜಾತ್ರಾ ಮಹೋತ್ಸವ ಶಾಸಕ ಕೆ.ವೈ.ನಂಜೇಗೌಡ ನೇತೃತ್ವದಲ್ಲಿ ಅದ್ದೂರಿಯಾಗಿ ನೆರವೇರಿಸಲಾಯಿತು.

ತಾಲೂಕಿನ ಟೇಕಲ್ ಹೋಬಳಿಯ ನೋಟುವೆ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಕೊಮ್ಮನಹಳ್ಳಿ ಗ್ರಾಮದಲ್ಲಿ ಶ್ರೀ ದ್ರುಪದಮ್ಮ ಜಾತ್ರಾ ಮಹೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶಾಸಕ ನಂಜೇಗೌಡ ಅವರು ತಮ್ಮ ಗ್ರಾಮದಲ್ಲಿ 2 ವರ್ಷ ಶ್ರೀ ದ್ರೌಪದಮ್ಮ ಜಾತ್ರಾ ಮಹೋತ್ಸವವನ್ನು ಏರ್ಪಡಿಸಿದ್ದು ಗ್ರಾಮದ ಎಲ್ಲಾ ಮುಖಂಡರು ತಾಯಂದಿರಗಳು ಶ್ರೀ ದ್ರೌಪದ ಜಾತ್ರಾ ಗ್ರಾಮದಲ್ಲಿ ಪಾಲ್ಗೊಂಡು ಬಹಳ ಯಶಸ್ವಿಯಾಗಿ ನಡೆಸಿಕೊಂಡು ಬಂದಿರುತ್ತಾರೆ. ಗ್ರಾಮಗಳಲ್ಲಿ ಎಲ್ಲಾ ಜಾತಿ ಧರ್ಮಗಳ ನಡುವೆ ಇಂಥ ಕಾರ್ಯಕ್ರಮಗಳು ನಡೆಯುವುದರಿಂದ ಗ್ರಾಮಗಳಲ್ಲಿ ಒಳ್ಳೆಯ ವಾತಾವರಣ ನಿರ್ಮಾಣವಾಗುತ್ತದೆ. ದ್ರೌಪದಮ್ಮ ಕರಗ ನಮ್ಮ ಗ್ರಾಮದಲ್ಲಿ ಬಹಳ ಯಶಸ್ವಿಯಾಗಿ ನಡೆಯುತ್ತಿರುವುದರಿಂದ ನಮಗೆ ಬಹಳ ಸಂತೋಷವಾಗಿರುತ್ತದೆ. ಸುತ್ತಮುತ್ತ ಗ್ರಾಮಸ್ಥರಿಗೂ ಹಾಗೂ ಗ್ರಾಮದ ಭಕ್ತಾದಿಗಳಿಗೂ ನನ್ನ ವೈಯಕ್ತಿಕವಾಗಿ ಸಂತೋಷ ವ್ಯಕ್ತಪಡಿಸಿದರು.ಇದೇ ವೇಳೆ ಕರಗ ಹೊತ್ತ ಪೂಜಾರಿ ಪ್ರಶಾಂತ್‌ರವರು ಗ್ರಾಮದ ರಾಜ ಬೀದಿಗಳಲ್ಲಿ ತಾಳಕ್ಕೆ ತಕ್ಕಂತೆ ಹೆಜ್ಜೆ ಹಾಕುತ್ತಾ ಪ್ರತಿಮನೆಯಲ್ಲಿ ಪೂಜೆ ಸಲ್ಲಿಸಿದರು, ಇದಕ್ಕೂ ಮುಂಚೆ ಗ್ರಾಮದೇವತೆಗಳ ಪಲ್ಲಕ್ಕಿ ಉತ್ಸವವು ಬಹಳ ವಿಜೃಂಭಣೆಯಿಂದ ನಡೆಯಿತು.



ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಅಧ್ಯಕ್ಷೆ ರತ್ನಮ್ಮ ನಂಜೇಗೌಡ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಳಿಗಾನಹಳ್ಳಿ ಶ್ರೀನಿವಾಸ್, ಕ್ಷೇತ್ರನಹಳ್ಳಿ ವೆಂಕಟೇಶ್ ಗೌಡ, ಶೆಟ್ಟಿಹಳ್ಳಿ ರಾಮಮೂರ್ತಿ, ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಕೆ.ವೈ.ಈರೇಗೌಡ, ಹರೀಶ್ ನಂಜೇಗೌಡ, ಸುನಿಲ್ ನಂಜೇಗೌಡ, ಗ್ರಾಪ ಮಾಜಿ ಅಧ್ಯಕ್ಷರಾದ ಲಿಂಗಪುರ ಎಂ.ಕೃಷ್ಣಪ್ಪ ಕಿಟ್ಟಿ, ಹುಂಗೇನಹಳ್ಳಿ ಸಂಪತ್ ಕುಮಾರ್, ದೊಡ್ಡಕಡತೂರು ವಾಸುದೇವ, ಪ್ರಗತಿ ಶ್ರೀನಿವಾಸ್, ಸತೀಶ್‌ಬಾಬು, ಸತೀಶ್ ರಾಜಣ್ಣ, ಯೋಜನಾ ಪ್ರಾಕಾರದ ಮಾಜಿ ಅಧ್ಯಕ್ಷ ಸಿ.ಪಿ.ವೆಂಕಟೇಶ್, ಸಿ.ಪಿ.ಹರೀಶ್, ಯಾದವ ಸಂಘದ ಜಿಲ್ಲಾ ಉಪಾಧ್ಯಕ್ಷ ಚಂದ್ರಶೇಖರ್ ಯಾದವ್, ಓಬಲರೆಡ್ಡಿ, ತಿಮ್ಮಾರೆಡ್ಡಿ ,ಪೆಟ್ರೋಲ್ ಬಂಕ್ ಚಿಟ್ಟಿ, ಫಿಲ್ಟರ್ ಪ್ರಕಾಶ್ ಹಾಜರಿದ್ದರು.

## ಡಿಪ್ಲೊಮಾ ತರಬೇತಿಗೆ ಅರ್ಜಿ

**ಮೈಸೂರು:** ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಅಪರೇಟಿವ್ ಮ್ಯಾನೇಜ್ ಮೆಂಟ್, ಮೈಸೂರು ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್ ಮೆಂಟ್ ಹಾಗೂ ಸಹಕಾರ ಸಂಘ ಸಂಸ್ಥೆಗಳ ಸಿಬ್ಬಂದಿಗಳಿಗೆ ದೂರ ಶಿಕ್ಷಣ ಡಿಪ್ಲೊಮಾ ಇನ್ ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಸಹಕಾರ ತರಬೇತಿಯನ್ನು ಪ್ರಾರಂಭಿಸಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಎಲ್ಲಾ ಸಹಕಾರ ಸಂಘ ಸಂಸ್ಥೆ/ಬ್ಯಾಂಕ್ ಗಳಲ್ಲಿನ ಉದ್ಯೋಗ ನೇಮಕಾತಿಗಾಗಿ ಕಡ್ಡಾಯವಾಗಿರುತ್ತದೆ. ತರಬೇತಿ ಪಡೆಯಲು ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 600 ಶಿಷ್ಯವೇತನ ಹಾಗೂ ಇತರೆ ಎಲ್ಲಾ ಅಭ್ಯರ್ಥಿಗಳಿಗೆ 500 ಶಿಷ್ಯವೇತನವನ್ನು ಪ್ರತಿ ತಿಂಗಳು ನೀಡಲಾಗುತ್ತದೆ. ದೂರ ಶಿಕ್ಷಣ ಡಿಪ್ಲೋಮೋ ಇನ್ ಕೋ-ಆಪರೇಟಿವ್ ಮ್ಯಾನೇಜ್ ಮೆಂಟ್ ತರಬೇತಿಯು ಸಹಕಾರ ಸಂಘ/ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ ಕಡ್ಡಾಯವಾಗಿರುತ್ತದೆ.

ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್ ಮೆಂಟ್ ಸಹಕಾರ ಭವನ ಚಾಮರಾಜ ಜೋಡಿ ರಸ್ತೆ ಮೈಸೂರು ಇಲ್ಲಿ ಪಡೆದು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜೂನ್ 10 ಕೊನೆಯ ದಿನಾಂಕವಾಗಿರುತ್ತದೆ.

ಅರ್ಜಿಗಳು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ-ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ಭವನ, ಮೈಸೂರು. ಜಿಲ್ಲಾ ಸಹಕಾರ ಯೂನಿಯನ್ ನಿ., ಸಹಕಾರ ಭವನ, ಮೈಸೂರು. ಜಿಲ್ಲಾ ಸಹಕಾರ ಯೂನಿಯನ್ ನಿ., ಅಶೋಕ ನಗರ, 1 ನೇ ಕ್ರಾಸ್, ಮಂಡ್ಯ. ಜಿಲ್ಲಾ ಸಹಕಾರ ಯೂನಿಯನ್ ನಿ., ಜಿಲ್ಲಾಡಳಿತ ಭವನ, ಚಾಮರಾಜನಗರ ಇಲ್ಲಿ ದೊರೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ದೂ. ಸಂ: 0821-2520563, ಮೊ. ನಂ: 9902189872, 9845918519, 9535250704 ನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಕರ್ನಾಟಕ ಇನ್ ಸ್ಟಿಟ್ಯೂಟ್ ಆಫ್ ಕೋ- ಆಪರೇಟಿವ್ ಮ್ಯಾನೇಜ್‌ಮೆಂಟ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ಖಐಐ ಕಾರ್ಡ್ ಪಾಲುದಾರರು ಅಪೊಲೊ ಹೆಲ್ತ್ಕೋ; ''ಅಪೊಲೊ ಖಐಐ ಕಾರ್ಡ್ ಸೆಲೆಕ್ ಕಾರ್ಡನ್ನು'' ಪರಿಚಯ

ಭಾರತದ ಅತಿದೊಡ್ಡ ಪ್ಯೂರ್-ಪ್ಲೇ ಕ್ರೆಡಿಟ್ ಕಾರ್ಡ್ ವಿತರಕರಾದ SBI ಕಾರ್ಡ್ ಮತ್ತು ಭಾರತದ ಅತಿದೊಡ್ಡ ರಿಟೇಲ್ ಫಾರ್ಮಸಿ ಜಾಲವಾದ ಅಪೊಲೊ ಫಾರ್ಮಸಿ ಮತ್ತು ದೇಶದ ಪ್ರಮುಖ ಓಮ್ನಿ-ಚಾನೆಲ್ ಡಿಜಿಟಲ್ ಹೆಲ್ತ್ ಪ್ಲಾಟ್‌ಫಾರ್ಮ್ ಆದ ಅಪೊಲೊ 2417 ಅನ್ನು ನಿರ್ವಹಿಸುವ ಅಪೊಲೊ ಹೆಲ್ತ್ಕೋ, ವಿಶಿಷ್ಟ, ಆರೋಗ್ಯ ಮತ್ತು ಕ್ಷೇಮ ಕೇಂದ್ರಿತ ಸಹ-ಬ್ರಾಂಡೆಡ್ ಕ್ರೆಡಿಟ್ ಕಾರ್ಡ್ ''ಅಪೊಲೊ SBI ಕಾರ್ಡ್ ಸೆಲೆಕ್ಟ್ ಕಾರ್ಡ್'' ಅನ್ನು ಪರಿಚಯಿಸಲು ತಮ್ಮ ಕಾರ್ಯತಂತ್ರದ ಪಾಲುದಾರಿಕೆಯನ್ನು ವಿಸ್ತರಿದೆ. ಈ ರೀತಿಯ ಪ್ರೀಮಿಯಂ ಕ್ರೆಡಿಟ್ ಕಾರ್ಡನ್ನು ಇಂದಿನ ಆರೋಗ್ಯದ ಬಗ್ಗೆ ಕಾಳಜಿಯುಳ್ಳ ಗ್ರಾಹಕರ ವಿಕಸನಗೊಳ್ಳುತ್ತಿರುವ ಅಗತ್ಯಗಳನ್ನು ಪೂರೈಸಲು ಚೆನ್ನಾಗಿ ಯೋಚಿಸಿ ವಿನ್ಯಾಸಗೊಳಿಸಲಾಗಿದೆ, ಇದು ಆರೋಗ್ಯ, ಉಳಿತಾಯ ಮತ್ತು ಆರ್ಥಿಕ ಪ್ರತಿಫಲಗಳ ಬಲವಾದ ಮಿಶ್ರಣವನ್ನು ನೀಡುತ್ತದೆ. ಗ್ರಾಹಕರು ಅಪೊಲೊ 2417 ಅಪ್ಲಿಕೇಶನ್‌ನಲ್ಲಿ ಈ ಕಾರ್ಡ್ಗಾಗಿ ಸುಲಭವಾಗಿ ಡಿಜಿಟಲ್ ಆಗಿ ಅರ್ಜಿ ಸಲ್ಲಿಸಬಹುದು ಮತ್ತು SBI ಕಾರ್ಡ್ ವೆಬ್‌ಸೈಟ್ ಆದ SBI Card.com ಗೆ ಭೇಟಿ ನೀಡುವ ಮೂಲಕ SBI Card SPRINT ಮೂಲಕ ಅರ್ಜಿ ಸಲ್ಲಿಸಬಹುದು. ಗ್ರಾಹಕರು ಆಯ್ದ ಅಪೊಲೊ ಫಾರ್ಮಸಿ ಮಳಿಗೆಗಳಲ್ಲಿಯೂ ಕಾರ್ಡ್ಗಾಗಿ ಅರ್ಜಿಯನ್ನು ಸಲ್ಲಿಸಬಹುದು.

ಅಪೊಲೊ SBI ಕಾರ್ಡ್ ಸೆಲೆಕ್ಟ್ ಕಾರ್ಡ್ದಾರರು ಅಪೊಲೊ 2417 ಅಪ್ಲಿಕೇಶನ್ ಮತ್ತು ಅಪೊಲೊ ಫಾರ್ಮಸಿ ಮಳಿಗೆಗಳ ಮೂಲಕ ಫಾರ್ಮಸಿ ಉತ್ಪನ್ನಗಳು, ಆರೋಗ್ಯ ತಪಾಸಣೆ ಪ್ಯಾಕೇಜ್‌ಗಳು, ರಕ್ತ ಪರೀಕ್ಷೆಗಳು ಮತ್ತು ಹೆಚ್ಚಿನವುಗಳನ್ನು ಒಳಗೊಂಡಂತೆ ವಹಿವಾಟುಗಳಲ್ಲಿ ಲಾಭದಾಯಕ ಶಾಪಿಂಗ್ ಅನುಭವವನ್ನು ಆನಂದಿಸುತ್ತಾರೆ. ಕಾರ್ಡ್ ಹೊಂದಿರುವವರು 10% ಅನ್ನು ರಿವಾರ್ಡ್ ಪಾಯಿಂಟ್‌ಗಳಾಗಿ ಪಡೆಯುತ್ತಾರೆ, ಮತ್ತು ಹೆಚ್ಚುವರಿಯಾಗಿ 15%ವರೆಗೆ ಆರೋಗ್ಯ ಕ್ರೆಡಿಟ್‌ಗಳಾಗಿ ಪಡೆಯುತ್ತಾರೆ, ಇದು ಅವರಿಗೆ ಒಟ್ಟು 25%ವರೆಗೆ ಮೌಲ್ಯದ ರಿಯಾಯಿತಿಯನ್ನು ನೀಡುತ್ತದೆ. ರಿವಾರ್ಡ್ ಪಾಯಿಂಟ್‌ಗಳನ್ನು ಹೆಲ್ತ್ ಕ್ರೆಡಿಟ್‌ಗಳಾಗಿ ಪರಿವರ್ತಿಸಬಹುದು, ಇದನ್ನು ಅಪೊಲೊ 2417 ಅಪ್ಲಿಕೇಶನ್ ಮತ್ತು ಅಪೊಲೊ ಫಾರ್ಮಸಿ ಸ್ಟೋರ್‌ಗಳ ಸಂಪೂರ್ಣ ಉತ್ಪನ್ನ ಶ್ರೇಣಿಯಲ್ಲಿ ರಿಡೀಮ್ ಮಾಡಬಹುದು.

## ಉದ್ದಿನಬೇಳೆ ಕೂಟು

### ಪಾಕ ಶಾಲೆ



**ಬೇಕಿರುವ ಸಾಮಗ್ರಿ**

ಉದ್ದಿನಬೇಳೆ-2 ಟೀ ಚಮಚ, ತೆಂಗಿನಕಾಯಿ- 1 ಬಟ್ಟಲು, ಅಕ್ಕಿ- 1 ಟೀ ಚಮಚ, ಮೆಣಸು- 8, ಎಣ್ಣೆ- 1 ಟೀ ಚಮಚ, ಸಾಸಿವೆ- 1 ಟೀ ಚಮಚ, ಉಪ್ಪು- 1 1/2 ಟೀ ಚಮಚ

### ಮಾಡುವ ವಿಧಾನ

**ಬಳಸಬಹುದಾದ ತರಕಾರಿ:** ಯಾವುದಾದರೊಂದು- ಪಡವಲಕಾಯಿ, ದಂಟಿನಸೊಪ್ಪು, ಬಾಳೆಕಾಯಿ, ಹೀರೆಕಾಯಿ.
ಉದ್ದಿನಬೇಳೆಯನ್ನು ಸ್ವಲ್ಪ ಕೆಂಪು ಬಣ್ಣ ಬರುವವರೆಗೂ ಹುರಿಯಿರಿ. ಅಕ್ಕಿಯನ್ನು ನೀರಿನಲ್ಲಿ 10 ನಿಮಿಷ ನೆನೆಸಿ ಮೆಣಸನ್ನು ತುಪ್ಪದಲ್ಲಿ ಪಟಪಟ ಹುರಿಯಿರಿ. ಅಕ್ಕಿ, ತೆಂಗಿನತುರಿ, ಮೆಣಸು, ಉದ್ದಿನಬೇಳೆಯನ್ನು ಮಿಕ್ಸಿಗೆ ಹಾಕಿ ರುಬ್ಬಿ. ಇದಕ್ಕೆ ಬೇಕಾಗುವಷ್ಟು ಉಪ್ಪು ಹಾಕಿ ರುಬ್ಬಿ. 1 ಟೀ ಚಮಚ ಎಣ್ಣೆ ಕಾಯಿಸಿ ಸಾಸಿವೆ ಹಾಕಿ ಒಗ್ಗರಣೆ ಮಾಡಿ, ತರಕಾರಿಯನ್ನು ಅದರಲ್ಲೆ ಬೇಯಿಸಿ. ಬೆಂದ ತರಕಾರಿಗೆ ಎಷ್ಟು ಉಪ್ಪು ಬೇಕೋ ಅಷ್ಟು ಹಾಕಿ. ಮಿಕ್ಸಿಗೆ ಹಾಕಿದ್ದ ಪೇಸ್ಟ್, ಬೆಂದ ತರಕಾರಿ, ಸ್ವಲ್ಪ ನೀರು ಹಾಕಿ ಕುದಿಸಿ. ಇದು ಹುಳಿಯ ಹದ ಬಂದಾಗ ಕೆಳಗೆ ಇಳಿಸಿ.

## ಆಲೂಗಡ್ಡೆ ಹೇಗೆ ಬಳಸಬೇಕು ಗೊತ್ತೇ

### ಹೆಲ್ತ್ ಟಿಪ್ಸ್



ಆಲೂಗಡ್ಡೆ ಹಾಳಾಗದಂತೆ ಸುರಕ್ಷಿತವಾಗಿಡಲು ಕೆಲವರು ಅದನ್ನು ಫ್ರಿಜ್‌ನಲ್ಲಿ ಇಡುತ್ತಾರೆ. ಆಲೂಗಡ್ಡೆಯನ್ನು ಫ್ರಿಜ್‌ನಲ್ಲಿ ಇಟ್ಟು ತಿನ್ನುವುದು ಅನೇಕ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಿದೆ. ಇದು ಆರೋಗ್ಯದ ಮೇಲೆ ಸಾಕಷ್ಟು ಅಡ್ಡಪರಿಣಾಮಗಳನ್ನ ಬೀರುತ್ತದೆ.

ಆಲೂಗಡ್ಡೆಯನ್ನು ರೆಫ್ರಿಜರೇಟರ್‌ನಲ್ಲಿ ಇಡುವುದು ಅಪಾಯಕಾರಿ ಎಂದು ಅನೇಕ ಸಂಶೋಧನೆಗಳು ಸ್ಪಷ್ಟಪಡಿಸಿವೆ. ಆಲೂಗಡ್ಡೆಯಲ್ಲಿ ಪಿಷ್ಟವಿರುತ್ತದೆ ಮತ್ತು ಅದನ್ನು ಫ್ರೀಜ್‌ನಲ್ಲಿ ಇಡುವುದರಿಂದ, ಈ ಪಿಷ್ಟವು ಸಕ್ಕರೆಯಾಗಿ ಪರಿವರ್ತನೆಗೊಳ್ಳುತ್ತದೆ. ಇದೆಲ್ಲವೂ ಫ್ರೀಜರ್‌ನ ತಂಪಾದ ತಾಪಮಾನದಿಂದಾಗಿ ಸಂಭವಿಸುತ್ತದೆ. ಇದು ಪಿಷ್ಟವನ್ನು ಸಕ್ಕರೆಯಾಗಿ ಪರಿವರ್ತಿಸುತ್ತದೆ. ಈ ಸಕ್ಕರೆ ಅಪಾಯಕಾರಿ ರಾಸಾಯನಿಕಗಳಾಗಿ ಪರಿವರ್ತನೆಗೊಂಡು ಕ್ಯಾನ್ಸರ್‌ಗೆ ಕಾರಣವಾಗಬಹುದು.

ರೆಫ್ರಿಜರೇಟರ್‌ನಲ್ಲಿ ಇಟ್ಟ ಆಲೂಗಡ್ಡೆಯನ್ನು ಮಧುಮೇಹಿಗಳು ತಿನ್ನುವುದು ತುಂಬಾ ಅಪಾಯಕಾರಿಯಾಗಿದೆ. ಆಲೂಗಡ್ಡೆಯನ್ನು ಫ್ರಿಜ್‌ನಲ್ಲಿಟ್ಟು ತಿನ್ನುವುದರಿಂದ ಶುಗರ್ ಮಟ್ಟ ಹೆಚ್ಚಾಗವುದು. ಆಲೂಗಡ್ಡೆಯನ್ನು ಫ್ರಿಡ್ಜ್ ನಲ್ಲಿ ಇಟ್ಟಾಗ ಅದರಲ್ಲಿರುವ ಸಕ್ಕರೆಯ ಪ್ರಮಾಣವು ಏರಿಕೆಯಾಗುವುದೇ ಇದಕ್ಕೆ ಕಾರಣ.

ಆಲೂಗಡ್ಡೆಯಲ್ಲಿರುವ ಅಮೈನೋ ಆಮ್ಲ ಆಸ್ಪ್ಯಾರಜಿನ್‌ನೊಂದಿಗೆ ಸೇರಿಕೊಂಡು ಅಕ್ರಿಲಾಮೈಡ್ ರಾಸಾಯನಿಕವನ್ನು ರೂಪಿಸುತ್ತದೆ ಎಂದು ಸಂಶೋಧನೆ ತೋರಿಸಿದೆ, ಇದು ಆರೋಗ್ಯಕ್ಕೆ ಮಾರಕವೆಂದು ಸಾಬೀತುಪಡಿಸುತ್ತದೆ. ಇದು ಕಾಗದ ಮತ್ತು ಪ್ಲಾಸ್ಟಿಕ್ ತಯಾರಿಸಲು ಬಳಸುವ ರಾಸಾಯನಿಕವೂ ಹೌದು. ಆಲೂಗಡ್ಡೆಯನ್ನು ಫ್ರೀಜರ್‌ನಲ್ಲಿ ಇಡುವುದರಿಂದ ನೀವು ಎಷ್ಟು ದೊಡ್ಡ ತಪ್ಪು ಮಾಡುತ್ತಿದ್ದೀರಿ ಎಂಬುದನ್ನು ಇದರಿಂದ ನೀವು ಅರ್ಥಮಾಡಿಕೊಳ್ಳಬಹುದು.

ಆಲೂಗಡ್ಡೆಯನ್ನು ಫ್ರಿಡ್ಜ್‌ನಲ್ಲಿ ಇಡುವ ಬದಲು ಅವು ಹಾಳಾಗದಂತೆ ಒಣ ಸ್ಥಳದಲ್ಲಿ ಇರಿಸಿ. ಏಕೆಂದರೆ ನೀವು ಫ್ರೀಜ್‌ನಲ್ಲಿ ಇಟ್ಟ ಆಲೂಗಡ್ಡೆಯನ್ನು ಶೇಖರಿಸಿದಾಗ, ಅದರಲ್ಲಿರುವ ಸಕ್ಕರೆ ಅಕ್ರಿಲಾಮೈಡ್ ರಾಸಾಯನಿಕವಾಗಿ ಬದಲಾಗುತ್ತದೆ ಮತ್ತು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಯನ್ನು ನಿಮಗೆ ನೀಡುತ್ತದೆ.

## ವಿಶ್ವ ಸುಂದರಿ ಐಶ್ವರ್ಯ ರೈ ಅವರ ಕುತೂಹಲಕಾರಿ ಸಂಗತಿಗಳು ಗೊತ್ತೇ



ಅಭಿಷೇಕ್ ಬಚ್ಚನ್ ಮತ್ತು ಐಶ್ವರ್ಯಾ ರೈ ನಡುವೆ ಭಿನ್ನಾಭಿಪ್ರಾಯಗಳಿವೆ ಎಂದು ತಿಂಗಳಿನಿಂದ ವರದಿಗಳು ಬಂದಿವೆ. ಬಚ್ಚನ್ ಕುಟುಂಬ ಐಶರ್ಯ ರೈ ಅವರನ್ನು ಸೈಡ್ ಲೈನ್ ಮಾಡುತ್ತಿದೆ ಎಂಬ ಊಹಾಪೋಹಗಳು ಹರಿದಾಡುತ್ತಿವೆ. ಐಶ್ವರ್ಯಾ ಇಲ್ಲದೆ ಬಚ್ಚನ್ ಕುಟುಂಬ ಕಾಣಿಸಿಕೊಂಡಿರುವುದು ಚರ್ಚೆಗೆ ಕಾರಣವಾಗಲಿದೆ. ಮಾಧ್ಯಮಗಳು ಮತ್ತು ಸಮಾಜವು ಬಚ್ಚನ್ ಕುಟುಂಬದ ಸದಸ್ಯರ ನಡವಳಿಕೆಯನ್ನು ಗಮನಿಸುತ್ತದೆ. ಈ ಪ್ರಕ್ರಿಯೆಯಲ್ಲಿ ಐಶ್ವರ್ಯಗೆ ಸಂಬಂಧಿಸಿದ ಹಲವು ಕುತೂಹಲಕಾರಿ ಸಂಗತಿಗಳು ಬೆಳಕಿಗೆ ಬರುತ್ತಿವೆ.

ವಿಶ್ವ ಸುಂದರಿ ಐಶ್ವರ್ಯಾ ರೈ ಅವರು ಜನಪ್ರಿಯ ನಿರ್ದೇಶಕ ಮಣಿರತ್ನಂ ನಿರ್ದೇಶನದ ತಮಿಳು ಚಿತ್ರ ಇರುವರ್ (1997) ನಲ್ಲಿ ಪಾದಾರ್ಪಣೆ ಮಾಡಿದರು. ಈ ಚಿತ್ರದಲ್ಲಿ, ಅವರು ಮಲಯಾಳಂ ಸೂಪರ್‌ಸ್ಟಾರ್ ಮೋಹನ್‌ಲಾಲ್ ಅವರೊಂದಿಗೆ ನಟಿಸಿದ್ದಾರೆ.. ಅವರು ಐಶ್ವರ್ಯಾ ರೈ ಅವರ ಮೊದಲ ಸಿನಿಮಾ ನಾಯಕ.. ಎಂದರೇ ಐಶ್ವರ್ಯಾ ಅವರೊಂದಿಗೆ ರೊಮ್ಯಾನ್ಸ್ ಮಾಡಿದ ಮೊದಲ ನಟ ಅವರು. ಎಂ.ಜಿ.ರಾಮಚಂದ್ರನ್, ಎಂ. ಕರುಣಾನಿಧಿ, ಜೆ. ಇರುವರ್ ಚಿತ್ರವು ಜಯಲಲಿತಾ ಜೀವನಾಧಾರಿತ ರಾಜಕೀಯ ನಾಟಕವಾಗಿದೆ. ಸಿನಿಮಾ ಮತ್ತು ರಾಜಕೀಯದ ಹಿನ್ನೆಲೆಯಲ್ಲಿ ತಯಾರಾದ ಈ ಚಿತ್ರದಲ್ಲಿ ಎಂಜಿಆರ್ ಪಾತ್ರವನ್ನು ಮೋಹನ್ ಲಾಲ್ ನಿರ್ವಹಿಸಿದ್ದಾರೆ. ಐಶ್ವರ್ಯಾ ರೈ ಅವರು ಪುಷ್ಪವಲ್ಲಿ ಮತ್ತು ಕಲ್ಪನಾ ಎಂಬ ಎರಡು ಪಾತ್ರಗಳನ್ನು ನಿರ್ವಹಿಸಿದ್ದಾರೆ.

ನಿರ್ದೇಶಕ ಮಣಿರತ್ನಂ ಅವರ ಬಗ್ಗೆ ಐಶ್ವರ್ಯಾ ರೈ ಬಚ್ಚನ್ ಆಗಾಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಆಕೆ ತನ್ನ ಮೊದಲ ಚಿತ್ರದ ನಾಯಕ ಮೋಹನ್ ಲಾಲ್ ಅವರನ್ನು ಕೂಡ ಫಾಲೋ ಮಾಡುತ್ತಿದ್ದರು.. ಪೌರಾಣಿಕ ನಟನೊಂದಿಗೆ ಕೆಲಸ ಮಾಡುವ ಬಗ್ಗೆ ಕೇಳಿದಾಗ, ಐಶ್ವರ್ಯಾ ನಟನೆ ಮೋಹನ್‌ಲಾಲ್ ಗೆ ದೇವರ ಕೊಡುಗೆ ಎಂದು ಹೇಳಿದರು. ಈ ಮಾತುಗಳು ಅವನ ಅದ್ಭುತ ಪ್ರತಿಭೆಗೆ ಗೌರವವನ್ನು ತೋರಿಸುತ್ತವೆ.

ಮಣಿರತ್ನಂ ಅವರು ಇರುವರ್ ಚಿತ್ರದಲ್ಲಿ ಮಾಜಿ ವಿಶ್ವ ಸುಂದರಿ ಐಶ್ವರ್ಯಾ ರೈ ಅವರ ಅಭಿನಯವನ್ನು ಹೊಗಳಿದರು, ಇದರಲ್ಲಿ ಅವರು ಎರಡು ವಿಭಿನ್ನ ಪಾತ್ರಗಳನ್ನು ನಿರ್ವಹಿಸಿದ್ದಾರೆ.. ನಟಿ-ರಾಜಕಾರಣಿ ಜೆ. ಜಯಲಲಿತಾ ಅವರಿಂದ ಸ್ಫೂರ್ತಿ ಪಡೆದವರ ಪಾತ್ರದಲ್ಲಿ ನಟಿಸಿದ್ದರು.. ಅವರನ್ನು ಅದ್ಭುತ ನೃತ್ಯಗಾರ್ತಿ ಎಂದು ಬಣ್ಣಿಸಿದ ಮಣಿರತ್ನಂ, ಐಶ್ವರ್ಯ ಅದ್ಭುತ ನಟಿ ಎಂದು ಹೇಳಿದರು.

ಬಹಳ ಹಿಂದೆಯೇ ಆನ್‌ಲೈನ್ ಸಂದರ್ಶನವೊಂದರಲ್ಲಿ ಮೋಹನ್ ಲಾಲ್ ಐಶ್ವರ್ಯಾ ಅವರ ಸೌಂದರ್ಯದ ಬಗ್ಗೆ ಮಾತನಾಡಿದ್ದಾರೆ. ಅವಳು ತುಂಬಾ ಡೌನ್ ಟು ಅರ್ಥ್ ಹುಡುಗಿ ಎಂದು ನಾನು ಅರ್ಥಮಾಡಿಕೊಂಡಿದ್ದೇನೆ. ಅವಳು ನಟಿಯಾಗಿ ತುಂಬಾ ಪ್ರತಿಭಾವಂತಳು. ನಾನು ಅವಳೊಂದಿಗೆ ನಟಿಸುತ್ತಿದ್ದೇನೆ ಎಂಬ ಕಾರಣಕ್ಕೆ ನಾನು ಈ ವಿಷಯಗಳನ್ನು ಹೇಳುತ್ತಿಲ್ಲ ಎಂದು ಅವರು ಹೇಳಿದರು.

ಮತ್ತೊಂದೆಡೆ, ಪತಿ ಅಭಿಷೇಕ್ ಬಚ್ಚನ್ ಜೊತೆಗಿನ ವಿಚ್ಛೇದನದ ಸುದ್ದಿಗೆ ಐಶ್ವರ್ಯಾ ರೈ ಯಾವುದೇ ಪ್ರತಿಕ್ರಿಯೆ ನೀಡುತ್ತಿಲ್ಲ. ನಟಿ ಮೌನವಾಗಿಯೇ ಉಳಿದಿದ್ದಾರೆ... ಐಶರ್ಯ ರೈ ಮೌನವೂ ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಅನಂತ್ ಅಂಬಾನಿ ಅವರ ವಿವಾಹ ಸಮಾರಂಭದಲ್ಲಿ ಐಶ್ವರ್ಯ ಮತ್ತು ಅಮಿತಾಬ್ ಕುಟುಂಬ ಪ್ರತ್ಯೇಕವಾಗಿ ಭಾಗವಹಿಸಿತ್ತು. ನಂತರ ಈ ವಿಚ್ಛೇದನದ ವದಂತಿಗಳು ಬಲಗೊಂಡವು.

## ಪುದೀನ ಚಹಾ ನಮ್ಮ ಸೌಂದರ್ಯಕ್ಕೂ ಹಿತ

### ಬ್ಯೂಟಿ ಟಿಪ್ಸ್



ಅರಿಶಿನ-ಪುದೀನ ಚಹಾ ಕುಡಿಯುವುದರಿಂದ ತೂಕ ಕಡಿಮೆಯಾಗುತ್ತದೆ. ಅರಿಶಿನ ಮತ್ತು ಪುದೀನ ಕೊಬ್ಬನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ಜೀರ್ಣಾಂಗ ವ್ಯವಸ್ಥೆಯನ್ನು ಬಲವಾಗಿಡಲು ಸಹ ಸಹಾಯ ಮಾಡುತ್ತದೆ.

ನಿದ್ರೆಯ ತೊಂದರೆ ಇರುವವರಿಗೆ ಅರಿಶಿನ-ಪುದೀನ ಚಹಾ ಪ್ರಯೋಜನಕಾರಿಯಾಗಿದೆ. ಮತ್ತೊಂದೆಡೆ, ಪುದೀನಾ ನಿದ್ರೆಯನ್ನು ಉತ್ತೇಜಿಸುವ ಮೂಲಕ ನಿದ್ರಾಹೀನತೆಯ ಸಮಸ್ಯೆಯನ್ನು ಸುಲಭವಾಗಿ ನಿವಾರಿಸಲು ಸಹಾಯ ಮಾಡುತ್ತದೆ.

ಅರಿಶಿನ-ಪುದೀನ ಚಹಾ ಕುಡಿಯುವುದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ. ಏಕೆಂದರೆ ಅರಿಶಿನದಲ್ಲಿ ನಿಮ್ಮ ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಕೆಲಸ ಮಾಡುವ ಅನೇಕ ಗುಣಗಳಿವೆ. ಇದರಿಂದಾಗಿ ಶೀತ ಮತ್ತು ಕೆಮ್ಮಿನಂತಹ ಸಮಸ್ಯೆಗಳು ದೂರವಾಗುತ್ತವೆ. ಈ ಚಹಾ ಕುಡಿಯುವುದರಿಂದ ದೇಹದಲ್ಲಿನ ಸೋಂಕಿನ ಸಮಸ್ಯೆಯೂ ನಿವಾರಣೆಯಾಗುತ್ತದೆ.

ಅರಿಶಿನ ಮತ್ತು ಪುದೀನ ಚಹಾ ಕೂಡ ಬಾಯಿಯ ದುರ್ವಾಸನೆಯನ್ನು ಹೋಗಲಾಡಿಸುವಲ್ಲಿ ಬಹಳ ಪ್ರಯೋಜನಕಾರಿಯಾಗಿದೆ. ಈ ಚಹಾ ಕುಡಿಯುವುದರಿಂದ ಬಾಯಿಯಲ್ಲಿ ಒತ್ತಡ ದೀರ್ಘಕಾಲ ಉಳಿಯುತ್ತದೆ. ಆದ್ದರಿಂದ, ಬಾಯಿಯ ದುರ್ವಾಸನೆಯನ್ನು ತೊಡೆದುಹಾಕಲು, ನೀವು ಪುದೀನ ಚಹಾವನ್ನು ಕುಡಿಯಬಹುದು.

ಪುದೀನಾ ಚಹಾ ಸೇವನೆಯಿಂದ ಅಧಿಕ ಕೊಲೆಸ್ಟ್ರಾಲ್ ಸಹ ಕಡಿಮೆಯಾಗುವುದು. ಇದರಿಂದ ಹೃದಯದ ಆರೋಗ್ಯ ಸುಧಾರಿಸುವುದು. ಮಧುಮೇಹದ ಅಪಾಯ ಕಡಿಮೆಯಾಗುವುದು.

ಮಾಡುವ ವಿಧಾನ- ಪುದೀನಾ ಚಹಾ ಮಾಡಲು ಮೊದಲು ಒಂದು ಪಾತ್ರೆಯಲ್ಲಿ ಒಂದು ಗ್ಲಾಸ್ ನೀರು ತೆಗೆದುಕೊಳ್ಳಿ. ಇದಕ್ಕೆ ಚಿಟಿಕೆ ಅರಿಶಿನ ಪುಡಿ ಮತ್ತು 5 ಪುದೀನಾ ಎಲೆ ಬೆರೆಸಿ ಚೆನ್ನಾಗಿ ಕುದಿಸಿ. ಇದನ್ನು ಸೋಸಿ ಉಗುರು ಬೆಚ್ಚಗಿರುವಾಗ ಕುಡಿಯಿರಿ. ಬೇಕಿದ್ದರೆ ಇದಕ್ಕೆ ನೀವು ಜೇನುತುಪ್ಪ ಸೇರಿಸಬಹುದು.

## ಮಿಸ್ ಯುನಿವರ್ಸ್ ಕರ್ನಾಟಕ ನಮ್ಮ ಬೆಂಗಳೂರಿನಲ್ಲಿ ಭವ್ಯ ಪ್ರಾರಂಭ





ರಾಷ್ಟ್ರಪ್ರಮುಖ ಮಿಸ್ ಯುನಿವರ್ಸ್ ಕರ್ನಾಟಕ ಸ್ಪರ್ಧೆಯು ಬೆಂಗಳೂರಿನ ಪ್ಯಾಲಸ್ ಗ್ರೌಂಡ್‌ನ ಕಿಂಗ್ಸ್ ಕೋರ್ಟ್‌ನಲ್ಲಿ ಮೊದಲ ಬಾರಿಗೆ ಅದ್ದೂರಿಯಾಗಿ ನೆರವೇರಿತು. ಈ ವಿಶಿಷ್ಟ ಕಾರ್ಯಕ್ರಮವನ್ನು ಕರ್ನಾಟಕದ ಸ್ಟೇಟ್ ಡೈರೆಕ್ಟರ್ ಹಾಗೂ ಖ್ಯಾತ ಕ್ವೀನ್ ಮೇಕರ್ ನಂದಿನಿ ನಾಗರಾಜ್ ಅವರು ರೂಪಿಸಿದರು ಮತ್ತು ಆಯೋಜಿಸಿದರು.

ಈ ಭವ್ಯವಾದ ಕಾರ್ಯಕ್ರಮಕ್ಕೆ ಶಕ್ತಿ ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕರಾದ ವೆಂಕಟೇಶ್ ತಟುಸ್ಕರ್ ಪ್ರಧಾನ ಪ್ರಾಯೋಜಕರಾಗಿದ್ದು, ಟಾರಾ ಡೆಕೋಸ್‌ನ ದೇವನ್ ಪಾಲ್ ಸಹ ಪ್ರಾಯೋಜಕರಾಗಿ ಸಹಭಾಗಿಯಾದರು.ರಾಜ್ಯದ ವಿವಿಧ ಭಾಗಗಳಿಂದ 27 ಪ್ರತಿಭಾವಂತ ಸ್ಪರ್ಧಿಗಳು ಈ ಕೂಟದಲ್ಲಿ ಪಾಲ್ಗೊಂಡು ತಮ್ಮ ಸೌಂದರ್ಯ, ಆತ್ಮವಿಶ್ವಾಸ ಮತ್ತು ಮೆರುಗು ತೋರಿಸಿ ಮೂಡು ಹಂತಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು:

ಮೊದಲ ಹಂತ ಪಾರಂಪರಿಕ ಉಡುಪುಗಳು ಡಿಸೈನರ್ ರೋಹನ್ ಪರಿಯಾರ್ ಅವರ ವಿನ್ಯಾಸಗಳು ಮತ್ತು ಸುಧಾ ಫ್ಯಾಷನ್ಸ್ ಆಯ್ಕೆ ಮಾಡಿದ ಆಭರಣಗಳಲ್ಲಿ ಸ್ಪರ್ಧಿಗಳು ಮೆರುಗಾಗಿದ್ದರು. ಎರಡನೇ ಹಂತ ರೆಸಾರ್ಟ್ ವಿಯರ್ ಆಧುನಿಕ ಶೈಲಿ ಮತ್ತು ನಡವಳಿಕೆಗೆ ಮೆರಗು ನೀಡಿದ ಹಂತ. ಮೂರನೇ ಹಂತ ಇವಿನಿಂಗ್ gown ಖ್ಯಾತ ಡಿಸೈನರ್ ಚಂದನ್ ಗೌಡ ಅವರ ಶೈಲಿಯಲ್ಲಿ ಸ್ಪರ್ಧಿಗಳು ಮೆರುಗಾಗಿದ್ದರು.

ಈ ತೀವ್ರ ಸ್ಪರ್ಧೆಯ ಬಳಿಕ, ವಾಂಶಿ ಉದಯ್ ಅವರು ಮಿಸ್ ಯುನಿವರ್ಸ್ ಕರ್ನಾಟಕ 2025 ಆಗಿಧಾರಿಯಾಗಿ ಹೊರಹೊಮ್ಮಿದರು. ಅಸ್ಮಿತಾ ಚೌಧುರಿ ಮೊದಲ ರನ್ನರ್-ಅಪ್ ಆಗಿ ಮತ್ತು ಲೇಕನಾ ಹೆಗಡೆ ಎರಡನೇ ರನ್ನರ್-ಅಪ್ ಆಗಿ ಆಯ್ಕೆಯಾದರು.

**ಜಜ್‌ಮಂಡಳಿಯಲ್ಲಿ ಭಾಗವಹಿಸಿದ ಗಣ್ಯರು:** - ನಿಖಿಲ್ ಆನಂದ್ ನ್ಯಾಷನಲ್ ಡೈರೆಕ್ಟರ್, ಮಿಸ್ ಯುನಿವರ್ಸ್ ಇಂಡಿಯಾ - ರಿಯಾ ಸಿಂಗಾ ಮಿಸ್ ಯುನಿವರ್ಸ್ ಇಂಡಿಯಾ 2024 - ಅಮ್ಜದ್ ಖಾನ್ ಡೈರೆಕ್ಟರ್, ಫ್ರಾಂಚೈಸ್ ಆಪರೇಷನ್ಸ್, ಮಿಸ್ ಯುನಿವರ್ಸ್ ಇಂಡಿಯಾ - ಅವನಿ ಕಾಕೆಕೋಚ್ಚಿ ಮಿಸ್ ಯುನಿವರ್ಸ್ ಕರ್ನಾಟಕ 2024 ಈ ಮೊದಲ ಆವೃತ್ತಿಯ ಮಿಸ್ ಯುನಿವರ್ಸ್ ಕರ್ನಾಟಕ ಸ್ಪರ್ಧೆ ಅದ್ಭುತ ಯಶಸ್ಸು ಕಂಡಿದ್ದು, ಶೈಲಿ, ಸಂಸ್ಕೃತಿ ಮತ್ತು ಸಬಲೀಕರಣಕ್ಕೆ ಹೊಸ ಮೆಟ್ಟಿಲುಗಳನ್ನು ಹೆಜ್ಜೆ ಹಾಕಿದೆ. ಈಗ ವಾಂಶಿ ಉದಯ್ ಅವರು ಕರ್ನಾಟಕವನ್ನು ರಾಷ್ಟ್ರಮಟ್ಟದ ಮಿಸ್ ಯುನಿವರ್ಸ್ ಇಂಡಿಯಾ ಸ್ಪರ್ಧೆಯಲ್ಲಿ ಪ್ರತಿನಿಧಿಸಲಿದ್ದಾರೆ, ರಾಜ್ಯದ ಗೌರವ ಮತ್ತು ಕನಸುಗಳನ್ನು ರಾಷ್ಟ್ರಮಟ್ಟಕ್ಕೆ ಹೊತ್ತುಕೊಂಡು ಹೋಗುತ್ತಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಧನ ಲಾಭ, ಮಕ್ಕಳ ಪ್ರಗತಿಯಿಂದ ಸಂತೋಷ, ನಿಮ್ಮ ಇಷ್ಟದಂತೆ ಕಾರ್ಯಗಳು ನೆರವೇರುತ್ತವೆ.

**ವೃಷಭ:** ಕುಟುಂಬ ಸದಸ್ಯರ ಸಹಾಯ, ಸುಖ ಭೋಜನ, ಮನಶಾಂತಿ,ವ್ಯಾಪಾರ ವ್ಯವಹಾರದಲ್ಲಿ ಎಚ್ಚರ.

**ಮಿಥುನ:** ಪರಿಶ್ರಮಕ್ಕೆ ತಕ್ಕ ಫಲ, ಉದ್ಯೋಗದಲ್ಲಿ ಬಡ್ತಿ, ಹಣಕಾಸು ಒದಗಿ ಬರಲಿದೆ.

**ಕಟಕ:** ಕೆಲಸ ಕಾರ್ಯಗಳಲ್ಲಿ ಜಯ, ಮಾತನಾಡುವಾಗ ಎಚ್ಚರ, ವಿದ್ಯಾಭ್ಯಾಸದಲ್ಲಿ ಹಿನ್ನಡೆ, ಆರೋಗ್ಯದ ಕಡೆ ಗಮನ ಹರಿಸಿ.

**ಸಿಂಹ:** ಈ ದಿನ ಕುಟುಂಬ ಸೌಖ್ಯ, ದ್ರವ್ಯ ಲಾಭ, ಶತ್ರುನಾಶ, ಪ್ರಯಾಣದಿಂದ ತೊಂದರೆ, ಮನೋವ್ಯಥೆ, ರೋಗಭಾದೆ.

**ಕನ್ಯಾ:** ದೇವತಾ ಕಾರ್ಯಗಳಲ್ಲಿ ಭಾಗಿ, ದಾನ ಮಾಡುವಿರಿ, ಶುಭ ಸಮಯ ನಿಮ್ಮ ಜೊತೆ ಇದೆ

**ತುಲಾ:** ಬಂಧುಗಳ ಭೇಟಿ, ಸುಖ ಭೋಜನ, ಮಿತ್ರರ ಸಹಾಯ, ಶತ್ರು ನಾಶ, ಸ್ಥಗಿತ ಕಾರ್ಯಗಳು ಮುಂದುವರೆಯುವುದು.

**ವೃಶ್ಚಿಕ:** ವಿಪರೀತ ವ್ಯಸನ, ಮಾತಿನಲ್ಲಿ ಹಿಡಿತವಿರಲಿ, ಸ್ತ್ರೀಯರಿಗೆ ಶುಭ, ನಾನು ವಿಚಾರಗಳಲ್ಲಿ ಆಸಕ್ತಿ, ಧನ ಲಾಭ.

**ಧನಸ್ಸು:** ವಿದೇಶ ವ್ಯಾಪಾರಿಗಳಲ್ಲಿ ಲಾಭ, ಉದ್ಯೋಗದಲ್ಲಿ ಸದಾ ತಿರುಗಾಟ, ಅಧಿಕ ಖರ್ಚು, ಹೊಸ ಪ್ರಯತ್ನದಿಂದ ಜಯ.

**ಮಕರ:** ಸ್ವಂತ ಪರಿಶ್ರಮದಿಂದ ಅನುಕೂಲ, ಕೋಪ ಜಾಸ್ತಿ, ಆಲಸ್ಯ ಮನೋಭಾವ, ಎಷ್ಟೇ ಹಣ ಬಂದರೂ ಸಾಕಾಗುವುದಿಲ್ಲ.

**ಕುಂಭ:** ನಾನಾ ವಿಚಾರಗಳಲ್ಲಿ ಆಸಕ್ತಿ, ಧನ ಲಾಭ, ಭಾಗ್ಯ ವೃದ್ಧಿ, ದೂರ ಪ್ರಯಾಣ, ರಾಜಕೀಯ ಕ್ಷೇತ್ರದಲ್ಲಿ ಮನ್ನಣೆ.

**ಮೀನ:** ಯತ್ನ ಕಾರ್ಯಗಳಲ್ಲಿ ವಿಳಂಬ, ದುಷ್ಟಬುದ್ಧಿ, ಋಣಭಾದೆ, ಮನಕ್ಲೇಶ, ಅನಾರೋಗ್ಯ, ವ್ಯಾಪಾರದಲ್ಲಿ ಅಲ್ಪ ಲಾಭ.

## ವಿಶ್ವ ಜೇನುನೊಣಗಳ ದಿನ

ಮೇ 20 ರಂದು ವಿಶ್ವ ಜೇನುನೊಣ ದಿನವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. ಈ ದಿನದಂದು, ಜೇನುನೊಣಗಳು ಮತ್ತು ಜೇನುಸಾಕಣೆಯ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಜೇನುಸಾಕಣೆ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಪರಾಗಸ್ಪರ್ಶಕಗಳಾಗಿ ಜೇನುನೊಣಗಳ ಪಾತ್ರ ಮತ್ತು ಅವು ಅರಣ್ಯ ಪ್ರದೇಶವನ್ನು ಪುನರುಜ್ಜೀವನಗೊಳಿಸಲು ಹೇಗೆ ಸಹಾಯ ಮಾಡುತ್ತವೆ ಎಂಬುದರ ಬಗ್ಗೆ ವಿಶೇಷ ಒತ್ತು ನೀಡಲಾಗುತ್ತದೆ. ಜೇನುನೊಣಗಳ ಸಂಖ್ಯೆ ಅಪಾಯದಲ್ಲಿರುವುದರಿಂದ, ಜೇನುನೊಣಗಳು ಮತ್ತು ಇತರ ಪರಾಗಸ್ಪರ್ಶಕಗಳನ್ನು ಹೇಗೆ ರಕ್ಷಿಸಬೇಕು ಎಂದು ವಿಶ್ವ ಜೇನುನೊಣ ದಿನವು ನಮಗೆ ತಿಳಿಸುತ್ತದೆ. ಸ್ಲೊವೇನಿಯನ್ ಜೇನುಸಾಕಣೆದಾರರ ಸಂಘವು ವಿಶ್ವ ಜೇನುನೊಣ ದಿನಕ್ಕಾಗಿ ಉಪಕ್ರಮವನ್ನು ತೆಗೆದುಕೊಂಡಿತು, ಇದನ್ನು ಈಗ ಪ್ರಪಂಚದಾದ್ಯಂತ ಪರಿಸರವಾದಿಗಳು ಆಚರಿಸುತ್ತಾರೆ.

ಜೇನುನೊಣಗಳು ಮತ್ತು ಇತರ ಪರಾಗಸ್ಪರ್ಶಕಗಳನ್ನು ರಕ್ಷಿಸಲು, ಸ್ಲೊವೇನಿಯನ್ ಜೇನುಸಾಕಣೆದಾರರ ಸಂಘವು 2014 ರಲ್ಲಿ ಮೇ 20 ಅನ್ನು ವಿಶ್ವ ಜೇನುನೊಣ ದಿನವೆಂದು ಗೊತ್ತುಪಡಿಸಲು ಕರೆ ನೀಡುವ ಅಭಿಯಾನವನ್ನು ಪ್ರಾರಂಭಿಸಿತು. ಈ ಉಪಕ್ರಮವನ್ನು ಸ್ಲೊವೇನಿಯನ್ ಸರ್ಕಾರ ಬೆಂಬಲಿಸಿತು. 2015 ರಲ್ಲಿ, ಈ ಉಪಕ್ರಮವನ್ನು ಅತಿದೊಡ್ಡ ಅಂತರರಾಷ್ಟ್ರೀಯ ಜೇನುಸಾಕಣೆದಾರರ ಸಂಘಟನೆಯಾದ ಎಪಿಮೊಂಡಿಯಾ ಸಹಕರಿಸಿತು. ಸ್ಲೊವೇನಿಯಾದ ಕೃಷಿ, ಅರಣ್ಯ ಮತ್ತು ಆಹಾರ ಸಚಿವಾಲಯವು ಬೀ ವರ್ಲ್ಡ್ ಎಂಬ ಮಂಟಪದೊಂದಿಗೆ ಪ್ರಪಂಚದಾದ್ಯಂತ ಪ್ರಯಾಣಿಸಿತು, ಯೋಜನೆಗಳನ್ನು ಸಕ್ರಿಯವಾಗಿ ಪ್ರಚಾರ ಮಾಡಿತು. ಪರಿಸರ ಯೋಜನೆಗಳಲ್ಲಿ ತೊಡಗಿರುವ ಇತರ ದೇಶಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆಗಳನ್ನು ಸಹ ಸಚಿವಾಲಯ ಆಯೋಜಿಸಿತ್ತು. 2017 ರಲ್ಲಿ, ವಿಶ್ವಸಂಸ್ಥೆಯ ಆರ್ಥಿಕ ಮತ್ತು ಹಣಕಾಸು ಸಮಿತಿಯು ವಿಶ್ವ ಜೇನುನೊಣ ದಿನವನ್ನು ಘೋಷಿಸುವ ನಿರ್ಣಯವನ್ನು ಅಂಗೀಕರಿಸಿತು. ಈ ನಿರ್ಣಯವನ್ನು ಯುಎನ್ ಸಾಮಾನ್ಯ ಸಭೆಯು ಸರ್ವಾನುಮತದಿಂದ ಬೆಂಬಲಿಸಿತು ಮತ್ತು ಮೇ 20 ಅನ್ನು ವಿಶ್ವ ಜೇನುನೊಣ ದಿನವೆಂದು ಘೋಷಿಸಲಾಯಿತು. ಯುನೈಟೆಡ್ ಸ್ಟೇಟ್ಸ್, ಕೆನಡಾ, ಚೀನಾ, ರಷ್ಯಾ, ಭಾರತ, ಬ್ರೆಜಿಲ್, ಅರ್ಜೆಂಟೀನಾ, ಆಸ್ಟ್ರೇಲಿಯಾ ಮತ್ತು ಎಲ್ಲಾ ಯುರೋಪಿಯನ್ ಒಕ್ಕೂಟದ ಸದಸ್ಯ ರಾಷ್ಟ್ರಗಳು ಸೇರಿದಂತೆ 115 ದೇಶಗಳು ಪ್ರಮುಖ ಪ್ರಾಯೋಜಕರಾಗಿ ಸಹಿ ಹಾಕಿದವು.ಜೇನುನೊಣಗಳು, ಪ್ರಮುಖ ಪರಾಗಸ್ಪರ್ಶಕಗಳಲ್ಲಿ ಒಂದಾಗಿ, ಆಹಾರ ಮತ್ತು ಆಹಾರ ಭದ್ರತೆ, ಸುಸ್ಥಿರ ಕೃಷಿ ಮತ್ತು ಜೀವವೈವಿಧ್ಯತೆಗೆ ಕೊಡುಗೆ ನೀಡುತ್ತವೆ. ಹವಾಮಾನ ಬದಲಾವಣೆ ತಗ್ಗಿಸುವಿಕೆ ಮತ್ತು ಪರಿಸರ ಸಂರಕ್ಷಣೆಯಲ್ಲಿ ಜೇನುನೊಣಗಳು ಸಹ ಪ್ರಮುಖ ಪಾತ್ರವಹಿಸುತ್ತವೆ. ಬಡತನ ಮತ್ತು ಹಸಿವನ್ನು ಎದುರಿಸಲು ಜೇನುನೊಣಗಳು ಮತ್ತು ಜೇನುಸಾಕಣೆ ಉದ್ಯಮವನ್ನು ರಕ್ಷಿಸುವುದು ಮುಖ್ಯ, ಪರಿಸರ ಆರೋಗ್ಯ ಮತ್ತು ಜೀವವೈವಿಧ್ಯತೆಯ ಮೇಲೆ ಗಮನಾರ್ಹ ಪರಿಣಾಮವನ್ನು ನಮೂದಿಸಬಾರದು. ಸರಳವಾಗಿ ಹೇಳುವುದಾದರೆ, ಜೇನುನೊಣಗಳಿಲ್ಲದೆ, ಹಸಿವು ಮತ್ತು ಬಡತನದ ವ್ಯಾಪಕ ಸಮಸ್ಯೆಗಳನ್ನು ನಾವು ಎಂದಿಗೂ ಪರಿಹರಿಸಲು ಸಾಧ್ಯವಾಗದಿರಬಹುದು. ಈ ಸಣ್ಣ ಕೀಟಗಳು ನಮ್ಮ ಉಳಿವಿಗೆ ನಿರ್ಣಾಯಕವಾಗಿವೆ. ಜೇನುನೊಣಗಳು ಹೆಚ್ಚು ಅಳಿವಿನಂಚಿನಲ್ಲಿವೆ ಎಂದು ವೈಜ್ಞಾನಿಕ ಅಧ್ಯಯನಗಳು ಸಾಬೀತುಪಡಿಸಿವೆ.

## NH 66ರಲ್ಲಿ ನಿರ್ಮಾಣ ಹಂತದಲ್ಲಿರುವ ಫ್ಲೈ ಓವರ್ ಕುಸಿತ



**ಮಲಪ್ಪುರಂ:** ಕೇರಳದ ರಾಷ್ಟ್ರೀಯ ಹೆದ್ದಾರಿ 66ರ ತಿರುರಂಗಡಿ ಬಳಿಯ ಕೂರಿಯಾಡ್ ನಲ್ಲಿ ನಿರ್ಮಾಣ ಹಂತದಲ್ಲಿರುವ ಫ್ಲೈ ಓವರ್ ಒಂದರ ಭಾಗ ಸೋಮವಾರ ಮಧ್ಯಾಹ್ನ ಕುಸಿದಿದ್ದು, ಹಲವಾರು ವಾಹನ ಸವಾರರಿಗೆ ಗಾಯಗಳಾಗಿದೆ. ಫ್ಲೈ ಓವರ್ ಕುಸಿತದಿಂದ ಕಾಕ್ಕಡ್ ಮತ್ತು ತಲಪ್ಪರ ನಡುವಿನ ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ ಎಂದು ತಿಳಿದು ಬಂದಿದೆ.

ಕೂರಿಯಾಡ್ನ ಭತ್ತದ ಗದ್ದೆಗಳಿಗೆ ಅಡ್ಡಲಾಗಿ ನಿರ್ಮಾಣ ಮಾಡಲಾಗಿರುವ ಫ್ಲೈ ಓವರ್ ನ ಒಂದು ಭಾಗವು ಸುಮಾರು 30 ಅಡಿ ಆಳಕ್ಕೆ ಕುಸಿದಿದ್ದರಿಂದ ಸರ್ವಿಸ್ ರಸ್ತೆಯಲ್ಲಿ ಸಂಚರಿಸುತ್ತಿದ್ದ ಮೂರು ಕಾರುಗಳಿಗೆ ಹಾನಿಯಾಗಿದೆ. ಫ್ಲೈ ಓವರ್ ಕುಸಿಯುತ್ತಿದ್ದಂತೆ ಬಂಡೆ ಕ್ಲಲುಗಳು ಎತ್ತರದಿಂದ ಕೆಳಗೆ ಬಿದ್ದಿದ್ದರಿಂದ ಪ್ರಯಾಣಿಕರು ತಮ್ಮ ಕಾರುಗಳನ್ನು ಬಿಟ್ಟು ರಕ್ಷಣೆಗಾಗಿ ಓಡಿ ಪ್ರಾಣಾಪಾಯದಿಂದ ಪಾರಾಗಿದ್ದರೆ. ಈ ಸಂದರ್ಭ ಕನಿಷ್ಠ ಆರು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ.

## ಪ.ಬಂಗಾಳದ ಸೂಕ್ಷ್ಮ ಪ್ರದೇಶಗಳಿಗೂ ಭೇಟಿ ನೀಡಿದ್ದ ಬಂಧಿತ ಜ್ಯೋತಿ

**ಪಾಕಿಸ್ತಾನ:** ಪಾಕಿಸ್ತಾನ ಪರ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಬಂಧಿತರಾಗಿರುವ ಹರಿಯಾಣದ ಜನಪ್ರಿಯ ಮಹಿಳಾ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಾ, ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತ್ತಾ ಸೇರಿದಂತೆ ವಿವಿಧ ಜನನಿಬಿಡ ಹಾಗೂ ಪ್ರಸಿದ್ಧ ಸ್ಥಳಗಳಿಗೆ ಭೇಟಿ ನೀಡಿದ್ದಷ್ಟೇ ಅಲ್ಲದೇ ವ್ಲಾಗ್ ಕೂಡ ಮಾಡಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಹರಿಯಾಣದ ತನಿಖಾಧಿಕಾರಿಗಳು, ಪಶ್ಚಿಮ ಬಂಗಾಳದಲ್ಲಿ ಆರೋಪಿ ಜ್ಯೋತಿ ಭೇಟಿ ನೀಡಿದ ಸ್ಥಳಗಳ ಬಗ್ಗೆ ರಾಜ್ಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಭೇಟಿ ನೀಡಿದಾಗ ಕೆಲವು ವ್ಲಾಗ್ ಗಳನ್ನು ಚಿತ್ರೀಕರಣ ಮಾಡಿರುವ ಜ್ಯೋತಿ, ಅವುಗಳನ್ನು ಜಾಲತಾಣದಲ್ಲಿ ಅಪ್‌ಲೋಡ್‌ಮಾಡಿದ್ದು, ಅವುಗಳ ಜಾಡು ಹಿಡಿದ ತನಿಖಾಧಿಕಾರಿಗಳು ಇದೀಗ ಕೋಲ್ಕತ್ತಾಕ್ಕೂ ಬಂದಿದ್ದಾರೆ. ಟ್ರಾವೆಲ್ ವಿತ್-ಜೋ ಎಂಬ ಟ್ರಾವೆಲ್ ವ್ಲಾಗರ್ ನಡೆಸುತ್ತಿದ್ದ ಜ್ಯೋತಿ, ಪ್ರವಾಸದ ಸಮಯದಲ್ಲಿ ಸೀಲ್ಡಾ, ಬ್ಯಾರಕ್‌ಪೋರ್, ಸಿಲಿಗುರಿ, ಹೌರಾ ಮತ್ತು ಡಮ್‌ಡಮ್‌ನಂತಹ ಜನನಿಬಿಡ ನಿಲ್ದಾಣ ಅಷ್ಟೇ ಅಲ್ಲದೇ ಗಡಿ ಪ್ರದೇಶದಂತಹ ಸೂಕ್ಷ್ಮ ಪ್ರದೇಶಗಳಿಗೂ ಭೇಟಿ ನೀಡಿದ್ದು ಇದೀಗ ಸಾಕಷ್ಟು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ. ಮಹಿಳಾ ಯೂಟ್ಯೂಬರ್, ಕೋಲ್ಕತ್ತಾ ಸೇರಿ ಪಕ್ಕದ ಜಿಲ್ಲೆಗಳಿಗೆ ಭೇಟಿ ನೀಡಿರುವ ಬಗ್ಗೆ ನಮಗೆ ಮಾಹಿತಿ ಇದೆ. ಜಿಲ್ಲಾ ಪೊಲೀಸ್ ಗುಪ್ತಚರದೊಂದಿಗೆ ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ನಾವು ಇತರ ರಾಜ್ಯಗಳ ಪೊಲೀಸರು ಮತ್ತು ಕೇಂದ್ರ ತನಿಖಾ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿದ್ದೇವೆ ಎಂದು ಕೋಲ್ಕತ್ತಾ ಪೊಲೀಸರ ವಿಶೇಷ ಕಾರ್ಯಪಡೆಯ ಉಸ್ತುವಾರಿ ವಹಿಸಿರುವ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. ಆರೋಪಿ ಜ್ಯೋತಿ ಕೋಲ್ಕತ್ತಾಗೆ ಭೇಟಿ ನೀಡಿದ್ದ ವೇಳೆ ವಿವಿಧ ಜನನಿಬಿಡ ಪ್ರದೇಶ ಮತ್ತು ನಗರದ ಕೆಲವು ಪ್ರಸಿದ್ಧ ಸ್ಥಳಗಳ ವಿಡಿಯೋಗಳನ್ನು ಚಿತ್ರೀಕರಿಸಿರುವುದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ಸೀಲ್ಡಾ ನಿಲ್ದಾಣದಿಂದ ರೈಲು ಪ್ರಯಾಣದ ಒಂದು ವಿಡಿಯೋ, ಬರಾಕ್‌ಪೋರ್‌ನಲ್ಲಿರುವ ಪ್ರಸಿದ್ಧ ಬಿರಿಯಾನಿ ಅಂಗಡಿಗೆ ಭೇಟಿ ನೀಡಿದ ಮತ್ತೊಂದು ವಿಡಿಯೋ ಚಿತ್ರೀಕರಿಸಿದ್ದಾಳೆ.

## ಟರ್ಕಿಶ್ ಬ್ರ್ಯಾಂಡ್‌ಗಳ ಮಾರಾಟ ಸ್ಥಗಿತಗೊಳಿಸಿದ ಅಜಿಯೋ, ಮಿಂತ್ರಾ

**ನವದೆಹಲಿ:** ಅಭಾರತದ ಪ್ರಮುಖ ಇ-ಕಾಮರ್ಸ್ ಪ್ಲಾಟ್‌ಫಾರ್ಮ್‌ಗಳಾದ ಅಜಿಯೋ ಮತ್ತು ಮಿಂತ್ರಾ, ಟರ್ಕಿಯ ಬಟ್ಟೆ ಬ್ರಾಂಡ್‌ಗಳನ್ನು ತಮ್ಮ ಪೋರ್ಟಲ್ ಗಳಿಂದ ತೆಗೆದುಹಾಕಿವೆ. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ಕೇಂದ್ರಗಳನ್ನು ಧ್ವಂಸಗೊಳಿಸಲು ಭಾರತ ನಡೆಸಿದ 'ಆಪರೇಷನ್ ಸಿಂಧೂರ್'ಗೆ ಟರ್ಕಿಯು ಪಾಕಿಸ್ತಾನಕ್ಕೆ ಬೆಂಬಲ ಸೂಚಿಸಿದ ನಂತರ ಆ ದೇಶದ ಉತ್ಪನ್ನಗಳಿಗೆ ಜನರು ಬಹಿಷ್ಕಾರ ಹಾಕುವಂತೆ ಕರೆ ನೀಡಿದ್ದಾರೆ. ಮಿಂತ್ರಾ ತನ್ನ ಪ್ಲಾಟ್‌ಫಾರ್ಮ್‌ನಿಂದ ಭಾರತದಲ್ಲಿ ಜನಪ್ರಿಯ ಮಹಿಳಾ ಫ್ಯಾಷನ್ ಬ್ರಾಂಡ್ ಟ್ರೆಂಡಿಯೋಲ್ ಅನ್ನು ತೆಗೆದುಹಾಕಿದೆ. ಇದರ ಜೊತೆಗೆ ಕೋಟನ್, ಮಾವಿ, ಮತ್ತು ಎಲ್‌ಸಿ ವೈಕಿಕಿ ಮುಂತಾದ ಇತರ ಟರ್ಕಿಶ್ ಬ್ರಾಂಡ್‌ಗಳು ಕೂಡ ಮಿಂತ್ರಾ ಮತ್ತು ಅಜಿಯೋದಿಂದ ಸಂಪೂರ್ಣವಾಗಿ ಕಣ್ಮರೆಯಾಗಿವೆ ಅಥವಾ 'ಸ್ಟಾಕ್ ಖಾಲಿಯಾಗಿದೆ' ಎಂದು ತೋರಿಸುತ್ತಿವೆ. ''ಕಳೆದ ವಾರಾಂತ್ಯದಿಂದ ಟರ್ಕಿಶ್ ಬ್ರಾಂಡ್ ಗಳು ಮಿಂತ್ರಾದಲ್ಲಿ ಅಷ್ಟಾಗಿ ಲಭ್ಯವಿರಲಿಲ್ಲ. ಗುರುವಾರದಂದು ಅವುಗಳನ್ನು ಸಂಪೂರ್ಣವಾಗಿ ತೆಗೆದುಹಾಕಲಾಯಿತು'' ಎಂದು ಒಬ್ಬ ಅಧಿಕಾರಿ ತಿಳಿಸಿದ್ದಾರೆ. ''ದೇಶದ ಮೌಲ್ಯಗಳು ಮತ್ತು ಭಾವನೆಗಳನ್ನು ಪ್ರತಿಬಿಂಬಿಸುವಂತೆ ನಮ್ಮ ಎಲ್ಲಾ ಪ್ಲಾಟ್ ಫಾರ್ಮ್‌ಗಳಲ್ಲಿ ಉತ್ಪನ್ನಗಳನ್ನು ಮರುಪರಿಶೀಲಿಸುತ್ತಿದ್ದೇವೆ'' ಎಂದು ರಿಲಯನ್ಸ್ ವಕ್ತಾರರು ಹೇಳಿದ್ದಾರೆ. ಇತ್ತ ಸಾಮಾಜಿಕ ಮಾಧ್ಯಮಗಳಲ್ಲಿ 'ಭಾರತೀಯ ಉತ್ಪನ್ನಗಳನ್ನು ಖರೀದಿಸಿ' ಎಂಬ ದೇಶಭಕ್ತಿಯ ಕರೆ ಜನಪ್ರಿಯವಾಗುತ್ತಿದ್ದು, ಗ್ರಾಹಕರು ಟರ್ಕಿ ಮತ್ತು ಅಜೆರ್‌ಬೈಜಾನ್‌ನ ಉತ್ಪನ್ನಗಳನ್ನು ತ್ಯಜಿಸಲು ಮುಂದಾಗಿದ್ದಾರೆ.

Myntra AJIO

## ಅಮೆರಿಕದ ಮಾಜಿ ಅಧ್ಯಕ್ಷ ಜೋ ಬೈಡನ್‌ಗೆ ಪ್ರಾಸ್ಟೇಟ್ ಕ್ಯಾನ್ಸರ್



**ವಾಷಿಂಗ್ಟನ್:** ಅಮೆರಿಕದ ಮಾಜಿ ಅಧ್ಯಕ್ಷ ಜೋ ಬೈಡನ್ ಅವರಿಗೆ ಗಂಭೀರ ಸ್ವರೂಪದ ಪ್ರಾಸ್ಟೇಟ್ ಕ್ಯಾನ್ಸರ್ ದೃಢವಾಗಿದೆ ಎಂದು ಅವರ ಕಚೇರಿ ಅಧಿಕೃತವಾಗಿ ತಿಳಿಸಿದೆ. 82 ವರ್ಷದ ಬೈಡನ್‌ಅವರಿಗೆ ಇತ್ತೀಚೆಗೆ ಮೂತ್ರದ ಸಮಸ್ಯೆ ಕಾಣಿಸಿಕೊಂಡಿದ್ದು, ಪರೀಕ್ಷೆಗೆ ಒಳಗಾದಾಗ ಕ್ಯಾನ್ಸರ್‌ಇರುವುದು ಕಂಡುಬಂದಿದೆ. ದೇಹದ ಮೂಳೆಗಳಿಗೆ ಕ್ಯಾನ್ಸರ್ ಹರಡಿದೆ ಎಂದು ವರದಿ ಹೇಳಿದೆ.

ಪ್ರಾಸ್ಟೇಟ್ ಕ್ಯಾನ್ಸರ್‌ಲಕ್ಷಣಗಳು ಗಂಭೀರವಾಗಿದ್ದರೂ ಕೂಡ ಅದರ ಹಾರ್ಮೋನ್‌ಸೂಕ್ಷ್ಮವಾಗಿರುವುದರಿಂದ ಪರಿಣಾಮಕಾರಿ ಚಿಕಿತ್ಸೆ ನೀಡಲು ಅವಕಾಶವಿದೆ ಎಂದು ವೈದ್ಯರು ತಿಳಿಸಿದ್ದಾರೆ. ಸದ್ಯ ಬೈಡನ್ ತಮ್ಮ ಕುಟುಂಬದೊಂದಿಗೆ ವೈದ್ಯರ ಬಳಿ ಚಿಕಿತ್ಸೆ ಕುರಿತಂತೆ ಚರ್ಚೆ ನಡೆಸುತ್ತಿದ್ದಾರೆ ಎಂದು ವರದಿಯಾಗಿದೆ.

ಪ್ರಾಸ್ಟೇಟ್ ಕ್ಯಾನ್ಸರ್‌ನ ಗಂಭೀರತೆಯನ್ನು ತಿಳಿಯಲು ಗ್ಲೀಸನ್ ಸ್ಕೋರ್ ಅನ್ನು ಪರಿಗಣಿಸಲಾಗುತ್ತದೆ. ಈ ಕ್ಯಾನ್ಸರ್‌ನ ತೀವ್ರತೆಯನ್ನು 6ರಿಂದ 10 ಸ್ಕೋರ್‌ಗಳ ಮೂಲಕ ಪರೀಕ್ಷಿಸಲಾಗುತ್ತದೆ. ಸ್ಕೋರ್ ಹೆಚ್ಚಾಗಿದ್ದರೆ, ಕ್ಯಾನ್ಸರ್ ಹಂತವೂ ಕೂಡ ಗಂಭೀರವಾಗಿದೆ ಎಂದರ್ಥವಾಗಿದೆ. 8, 9 ಮತ್ತು 10 ಗ್ಲೀಸನ್ ಸ್ಕೋರ್‌ಗಳು ಕಂಡುಬಂದರೆ ಅದು ಆತಂಕಕಾರಿ ಲಕ್ಷಣಗಳಾಗಿದೆ. ಸದ್ಯ ಬೈಡನ್‌ಅವರಿಗೆ 9 ಸ್ಕೋರ್‌ಇದ್ದು, ತೀವ್ರ ಸ್ವರೂಪ ಹೊಂದಿದೆ ಎಂದು ತಿಳಿದುಬಂದಿದೆ.

ಪ್ರಾಸ್ಟೇಟ್ ಕ್ಯಾನ್ಸರ್ ದೇಹದ ಇತರ ಭಾಗಗಳಿಗೆ ಆವರಿಸಿದಾಗ ಅದು ಹೆಚ್ಚಾಗಿ ಮೂಳೆಗಳಿಗೆ ಹರಡುತ್ತದೆ. ಮೆಟಾಸ್ಟಾಸ್ಟೆಸ್ಡ್‌ಕ್ಯಾನ್ಸರ್‌ಗೆ ಇತರ ಕ್ಯಾನ್ಸರ್ ರೀತಿಯಲ್ಲಿ ಚಿಕಿತ್ಸೆ ನೀಡುವುದು ತುಂಬಾ ಕಷ್ಟಕರ. ಏಕೆಂದರೆ ಔಷಧಿಯು ಎಲ್ಲಾ ಗೆಡ್ಡೆಗಳನ್ನು ತಲುಪಲು ಮತ್ತು ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವಲ್ಲಿ ಅಡ್ಡಿಯಾಗುವ ಸಾಧ್ಯತೆಗಳಿರುತ್ತದೆ. ಬೈಡನ್‌ಗೆ ಕ್ಯಾನ್ಸರ್ ದೃಢಪಟ್ಟ ಸುದ್ದಿ ಅಧಿಕೃತಗೊಳ್ಳುತ್ತಿದ್ದಂತೆ, ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್‌ಸಾಮಾಜಿಕ ಜಾಲತಾಣದ ಮೂಲಕ ಬೇಸರ ವ್ಯಕ್ತಪಡಿಸಿದ್ದಾರೆ. ಬೈಡನ್‌ಅವರಿಗೆ ಕ್ಯಾನ್ಸರ್‌ಇರುವ ಸುದ್ದಿ ಕೇಳಿ ಬೇಸರ ಉಂಟಾಯಿತು. ಅವರು ಶೀಘ್ರ ಮತ್ತು ಯಶಸ್ವಿಯಾಗಿ ಗುಣಮುಖವಾಗಲಿ ಎಂದು ಹಾರೈಸುತ್ತೇನೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ.

## ಡ್ಯಾಮ್ ಕಟ್ಟಲು ಆಫ್ಘಾನಿಸ್ತಾನಕ್ಕೆ ನೆರವು ನೀಡಲು ಮುಂದಾದ ಭಾರತ



**ನವದೆಹಲಿ:** ಭಾರತ ಮತ್ತು ಅಫ್ಘಾನಿಸ್ತಾನದ ನಡುವಿನ ಬೆಳೆಯುತ್ತಿರುವ ಸ್ನೇಹ ಸಂಬಂಧ, ವಿಶೇಷವಾಗಿ ಜಲ ಸಂಪನ್ಮೂಲಕ್ಷೇತ್ರದಲ್ಲಿ ಹೆಚ್ಚುತ್ತಿರುವ ಸಹಕಾರ, ಪಾಕಿಸ್ತಾನಕ್ಕೆ ಗಂಭೀರ ಆತಂಕವನ್ನುಂಟು ಮಾಡಿದೆ. ಭಾರತವು ಈ ಹಿಂದೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಇಂಡಸ್ ವಾಟರ್ಸ್ ಟ್ರೀಟಿಯನ್ನು ರದ್ದುಗೊಳಿಸಿದ್ದು, ಪಾಕಿಸ್ತಾನದಲ್ಲಿ ಆತಂಕಕ್ಕೆ ಕಾರಣವಾಗಿತ್ತು. ಈಗ, ಅಫ್ಘಾನಿಸ್ತಾನವು ಕಾಬೂಲ್ ಮತ್ತು ಕುನಾರ್ ನದಿಗಳ ಮೇಲೆ ಜಲಾಶಯಗಳನ್ನು ನಿರ್ಮಿಸಲು ಸಿದ್ಧತೆ ನಡೆಸುತ್ತಿದ್ದು, ಈ ಎರಡೂ ನದಿಗಳು ಪಾಕಿಸ್ತಾನಕ್ಕೆ ಹರಿಯುತ್ತವೆ. ಈ ಬೆಳವಣಿಗೆಯು ಇಸ್ಲಾಮಾಬಾದ್‌ನಲ್ಲಿ ಒತ್ತಡವನ್ನು ಗಣನೀಯವಾಗಿ ಹೆಚ್ಚಿಸಿದೆ.

ಕಾಬೂಲ್ ನದಿಯ ಮೇಲಿನ ಶಾಹೂತ್ (ಲಾಲಾಂದರ್) ಜಲಾಶಯ ಯೋಜನೆಗೆ ಭಾರತವು ಆರ್ಥಿಕ ನೆರವು ಒದಗಿಸಲು ಒಪ್ಪಿಕೊಂಡಿದೆ. ಇದರ ಜೊತೆಗೆ, ಅಫ್ಘಾನಿಸ್ತಾನವು ಕುನಾರ್ ನದಿಯ ಮೇಲೆ ಸ್ವತಂತ್ರವಾಗಿ ಜಲಾಶಯವನ್ನು ನಿರ್ಮಿಸಲು ಯೋಜಿಸಿದೆ. ಈ ನದಿಗಳು ಪಾಕಿಸ್ತಾನದ ಖೈಬರ್ ಪಖ್ತೂನ್‌ಖ್ವಾ ಮತ್ತು ಪಂಜಾಬ್ ಪ್ರಾಂತ್ಯಗಳಿಗೆ ಕುಡಿಯುವ ನೀರು ಮತ್ತು ಕೃಷಿಗೆ ಅತ್ಯಂತ ಮುಖ್ಯವಾಗಿವೆ. ಈ ನದಿಗಳಿಂದ ಪಾಕಿಸ್ತಾನಕ್ಕೆ ವಾರ್ಷಿಕವಾಗಿ ಸುಮಾರು 17-18 ಶತಕೋಟಿ ಘನ ಮೀಟರ್ ನೀರು ದೊರೆಯುತ್ತದೆ. ಈ ನೀರಿನ ಹರಿವನ್ನು ತಡೆಯುವುದು ಅಥವಾ ನಿಯಂತ್ರಿಸುವುದು ಪಾಕಿಸ್ತಾನದಲ್ಲಿ ಕುಡಿಯುವ ನೀರಿನ ಕೊರತೆ, ಬೆಳೆ ವೈಫಲ್ಯ ಮತ್ತು ಕಾಬೂಲ್-ಇಸ್ಲಾಮಾಬಾದ್ ನಡುವಿನ ರಾಜಕೀಯ ಒತ್ತಡವನ್ನು ಉಂಟುಮಾಡಬಹುದು.

ಭಾರತವು ಪಾಕಿಸ್ತಾನದೊಂದಿಗೆ ನೀರಿನ ಹಂಚಿಕೆ ಒಪ್ಪಂದವನ್ನು ಹೊಂದಿದ್ದರೆ, ಅಫ್ಘಾನಿಸ್ತಾನಕ್ಕೆ ಅಂತಹ ಯಾವುದೇ ಒಪ್ಪಂದವಿಲ್ಲ. ಆದ್ದರಿಂದ, ಈ ಯೋಜನೆಗಳಿಗೆ ಪಾಕಿಸ್ತಾನದ ಅನುಮತಿಯನ್ನು ಕಾಬೂಲ್ ಪಡೆಯುವ ಅಗತ್ಯವಿಲ್ಲ. ಭಾರತವು ಅಫ್ಘಾನಿಸ್ತಾನದ ಜಲಾಶಯ ಯೋಜನೆಗಳಿಗೆ ನೀಡುತ್ತಿರುವ ನವೀಕೃತ ಬೆಂಬಲವು ಪಾಕಿಸ್ತಾನದ ಮೇಲೆ ಒತ್ತಡ ಹೆಚ್ಚಿಸುವ ಕಾರ್ಯತಂತ್ರದ ಕ್ರಮವಾಗಿ ಕಂಡುಬಂದಿದೆ.

ತಜ್ಞರಪ್ರಕಾರ, ಭಾರತಮತ್ತು ಅಫ್ಘಾನಿಸ್ತಾನದ ಸಂಘಟಿತ ನೀರಿನ ದಾಳಿಯು ಪಾಕಿಸ್ತಾನವನ್ನು ಗಂಭೀರ ಬಿಕ್ಕಟ್ಟಿಗೆ ತಳ್ಳಬಹುದು. ಇದಕ್ಕೆ ಪೂರಕವಾಗಿ, ಭಾರತವು ಪಾಕಿಸ್ತಾನದೊಂದಿಗಿನ ಎಲ್ಲಾ ವ್ಯಾಪಾರವನ್ನು ಸ್ಥಗಿತಗೊಳಿಸಿದ್ದು, ಅದೇ ಸಮಯದಲ್ಲಿ ಅಫ್ಘಾನಿಸ್ತಾನದೊಂದಿಗಿನ ಸಹಕಾರವನ್ನು ಗಣನೀಯವಾಗಿ ವೃದ್ಧಿಸಿದೆ. ಝೀ ನ್ಯೂಸ್‌ನ ವ್ಯವಸ್ಥಾಪಕ ಸಂಪಾದಕ ರಾಹುಲ್ ಸಿನ್ಹಾ ಅವರು ತಮ್ಮ ಇತ್ತೀಚಿನ ಡಿಎನ್‌ಎ ವಿಶ್ಲೇಷಣೆಯಲ್ಲಿ, ಭಾರತ-ಅಫ್ಘಾನಿಸ್ತಾನದ ಈ ಬೆಳೆಯುತ್ತಿರುವ ಸ್ನೇಹವು ಇಸ್ಲಾಮಾಬಾದ್‌ನಲ್ಲಿ ಉಂಟುಮಾಡಿರುವ ಆತಂಕವನ್ನು ಎತ್ತಿ ತೋರಿಸಿದ್ದಾರೆ.

## ಬಲೂಚಿಸ್ತಾನ: ಬಾಂಬ್ ಸ್ಫೋಟ: 4 ಮಂದಿ ಬಲಿ

**ಪೇಷಾವರ:** ಪಾಕಿಸ್ತಾನದ ಪ್ರಕ್ಷುಬ್ಧ ಬಲೂಚಿಸ್ತಾನದ ಖಿಲಾ ಅಬ್ದುಲ್ಲಾ ಜಿಲ್ಲೆಯ ಜಬ್ಬಾರ್ ಮಾರ್ಕೆಟ್ ಬಳಿ ನಡೆದ ಬಾಂಬ್ ಸ್ಫೋಟದಲ್ಲಿ 4 ಮಂದಿ ಮೃತಪಟ್ಟಿದ್ದು ಕನಿಷ್ಠ 20 ಮಂದಿ ಗಾಯಗೊಂಡಿರುವುದಾಗಿ ಹಿರಿಯ ಅಧಿಕಾರಿಗಳು ಸೋಮವಾರ ಹೇಳಿದ್ದಾರೆ. ಗಡಿ ಭದ್ರತಾ ಪಡೆಯ ಕೇಂದ್ರ ಕಚೇರಿಯ ಹಿಂಭಾಗದ ಗೋಡೆಯ ಪಕ್ಕ ಇರುವ ಮಾರ್ಕೆಟ್ ಬಳಿ ರವಿವಾರ ರಾತ್ರಿ ನಡೆದ ಸ್ಫೋಟದಲ್ಲಿ ಕಟ್ಟಡಗಳಿಗೆ ತೀವ್ರ ಹಾನಿಯಾಗಿದ್ದು ಆತಂಕದ ಸ್ಥಿತಿ ನಿರ್ಮಾಣವಾಗಿದೆ. ಮಾರ್ಕೆಟ್ ನಲ್ಲಿದ್ದ ಹಲವು ಕಟ್ಟಡಗಳು ಕುಸಿದು ಬಿದ್ದಿದ್ದು ಬೆಂಕಿ ಮತ್ತು ದಟ್ಟ ಹೊಗೆ ಆವರಿಸಿಕೊಂಡಿತ್ತು. ಬಾಂಬ್ ಸ್ಫೋಟದ ಬಳಿಕ ಗುರುತಿಸಲಾಗದ ದುಷ್ಕರ್ಮಿಗಳು ಮತ್ತು ಭದ್ರತಾ ಸಿಬ್ಬಂದಿ ನಡುವೆ ಸಂಕ್ಷಿಪ್ತ ಗುಂಡಿನ ಚಕಮಕಿ ನಡೆದಿದೆ ಎಂದು ಜಿಲ್ಲಾಧಿಕಾರಿ ರಿಯಾಝ್ ಖಾನ್ ಹೇಳಿದ್ದಾರೆ. ಕಾನೂನು ಜಾರಿ ಅಧಿಕಾರಿಗಳು ಪ್ರದೇಶವನ್ನು ಮುಚ್ಚಿ ಸಮಗ್ರ ಶೋಧ ಮತ್ತು ತೆರವು ಕಾರ್ಯಾಚರಣೆ ನಡೆಸಿದ್ದಾರೆ. ಯಾವುದೇ ಸಂಘಟನೆ ಸ್ಫೋಟದ ಹೊಣೆ ವಹಿಸಿಕೊಂಡಿಲ್ಲ ಎಂದು ಮೂಲಗಳನ್ನು ಉಲ್ಲೇಖಿಸಿ 'ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್' ಪತ್ರಿಕೆ ವರದಿ ಮಾಡಿದೆ.

## ಆಪರೇಷನ್ ಸಿಂಧೂರ್ ಕಾರ್ಯಾಚರಣೆ: ಮೋದಿ ಸರ್ಕಾರವನ್ನ ಅಭಿನಂದಿಸಿದ ಸೂಫಿ ಮುಖ್ಯಸ್ಥರು

**ಅಜ್ಮೀರ್ (ರಾಜಸ್ಥಾನ) :** ರಾಜಸ್ಥಾನದ ಅಜ್ಮೀರ್ ದರ್ಗಾ ದಿವಾನ್ ಅವರ ಪುತ್ರ ಮತ್ತು ಅಖಿಲ ಭಾರತ ಸೂಫಿ ಸಜ್ಜದನಾಶೀನ್ ಕೌನ್ಸಿಲ್ ಅಧ್ಯಕ್ಷ ಸೈಯದ್ ನಾಸಿರುದ್ದೀನ್ ಚಿಸ್ತಿ ನೇತೃತ್ವದ ನಿಯೋಗವು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮತ್ತು ಕಾನೂನು ಸಚಿವ ಅರ್ಜುನ್ ಮೇಘವಾಲ್ ಅವರನ್ನು ಅವರ ನವದೆಹಲಿಯ ನಿವಾಸದಲ್ಲಿ ಭೇಟಿ ಮಾಡಿ, ಆಪರೇಷನ್ ಸಿಂಧೂರ್ ಕಾರ್ಯಾಚರಣೆಗಾಗಿ ಸಶಸ್ತ್ರ ಪಡೆಗಳು ಮತ್ತು ಮೋದಿ ಸರ್ಕಾರಕ್ಕೆ ಕೃತಜ್ಞತೆಗಳನ್ನು ಸಲ್ಲಿಸಿತು. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ಮೂಲಕ, ನಮ್ಮ ಕೆಚ್ಚೆದೆಯ ಪಡೆಗಳು ಪಾಕ್ ಬೆಂಬಲಿತ ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವ ಮೂಲಕ ಪ್ರತಿಯೊಬ್ಬ ಭಾರತೀಯನನ್ನು ಹೆಮ್ಮೆ ಪಡುವಂತೆ ಮಾಡಿದೆ. ಸಿಂಧೂರವನ್ನು ಗೌರವಿಸುವುದು ಭಾರತದ ಪವಿತ್ರ ಸಾಂಸ್ಕೃತಿಕ ಮೌಲ್ಯಗಳ ಭಾಗವಾಗಿದೆ ಎಂದು ನಿಯೋಗದಲ್ಲಿದ್ದ ಮುಖ್ಯಸ್ಥರು ಹೇಳಿದ್ದಾರೆ. ಅಜ್ಮೀರ್ ದರ್ಗಾದ ಉತ್ತರಾಧಿಕಾರಿ ಸೈಯದ್ ನಾಸಿರುದ್ದೀನ್ ಚಿಸ್ತಿ ಅವರು, ಅಜ್ಮೀರ್ ದರ್ಗಾದ ಪರವಾಗಿ ಕೇಂದ್ರ ಸಚಿವರಾದ ರಾಜನಾಥ್ ಸಿಂಗ್ , ಕಿರಣ್ ರಿಜಿಜು ಮತ್ತು ಅರ್ಜುನ್ ಮೇಘವಾಲ್ ಅವರಿಗೆ ಪೇಟ ಮತ್ತು ತಬರ್‍ರುಕ್ ನೀಡಿ ಗೌರವಿಸಿದರು. ನಿಯೋಗದಲ್ಲಿದ್ದ ಗುಲಾಮ್ ನಜ್ಮಿ ಫಾರೂಕಿ ಅಜ್ಮೀರ್, ಕಮಾಲುದ್ದೀನ್ ಜುಂಜುನು, ಅರ್ಷದ್ ಫರೀದಿ ಫತೇಪುರ್ ಸಿಕ್ರಿ, ಶಾ ಅಲಿ ಐಜಾಜ್ ಖುದ್ದುಸಿ ಸಾಬ್ರಿ, ಸೈಯದ್ ಅಬ್ದುಲ್ ಖಾದಿರ್ ಖಾದ್ರಿ ಹೈದರಾಬಾದ್, ಸೈಯದ್ ನಿಜಾಮುದ್ದೀನ್ ಖುಸ್ರೋ ಮಿಯಾನ್, ಸೈಯದ್ ನಿಜಾಮುದ್ದೀನ್ ಖುಸ್ರೋ ಮಿಯಾನ್, ಸೈಯದ್ ಚಿಶ್ಮದ್ದೀನ್, ಸುಫೀಲ್ ಸುಫಿಲ್, ಸುಫೀಲ್, ಸುಫಿದೀನ್, ಚಿಶ್ತಿ, ಚಿಶ್ತಿ ವಾಸಿಂ ಮಿಯಾ ಯುಪಿ, ಸೈಯದ್ ಷಾ ಜಕಾವುದ್ದೀನ್ ಹುಸೇನಿ, ಅಂಜುಮ್ ಫರೀದ್ ಶಾ, ಜಾವೇದ್ ಖಾನ್ ಸಂಭಾರ್, ಬಾಬ್ಲಿ ಪರ್ವೀನ್ ಮುಂತಾದವರು ಭಾರತದ ಪರವಾಗಿ ಪಾಕಿಸ್ತಾನಕ್ಕೆ ತಕ್ಕ ಪ್ರತ್ಯುತ್ತರ ನೀಡಿದ್ದಕ್ಕಾಗಿ ಎಲ್ಲಾ ಮೂವರು ಮಂತ್ರಿಗಳನ್ನು ಅಭಿನಂದಿಸಿದರು.

## ನಾವು ಕಳೆದುಕೊಂಡ ವಿಮಾನಗಳೆಷ್ಟು ಜೈಶಂಕರ್‌ಗೆ ರಾಹುಲ್‌ಪ್ರಶ್ನೆ



**ನವದೆಹಲಿ:** ಭಾರತೀಯ ಸೇನೆ ನಡೆಸಿದ 'ಆಪರೇಷನ್‌ಸಿಂಧೂರ' ಕಾರ್ಯಾಚರಣೆಯ ಕುರಿತು ರಾಜಕೀಯ ಶುರುವಾಗಿದೆ. ಸೇನಾ ದಾಳಿಗೂ ಮೊದಲು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಲಾಗಿತ್ತು ಎಂದು ವಿದೇಶಾಂಗ ಸಚಿವ ಜೈಶಂಕರ್‌ನೀಡಿದ ಹೇಳಿಕೆಯನ್ನು ವಿಪಕ್ಷ ನಾಯಕ ರಾಹುಲ್‌ಗಾಂಧಿ ಟೀಕಿಸಿದ್ದಾರೆ. ಇದರಿಂದ ಭಾರತಕ್ಕೆ ಆದ ಹಾನಿಯೇನು ಎಂಬುದನ್ನು ತಿಳಿಸಲು ಆಗ್ರಹಿಸಿದ್ದಾರೆ.

ತಮ್ಮ ಎಕ್ಸ್‌ಖಾತೆಯಲ್ಲಿ ಜೈಶಂಕರ್ ಅವರ ಹೇಳಿಕೆಯ ವಿಡಿಯೋವನ್ನು ಹಂಚಿಕೊಂಡಿರುವ ರಾಹುಲ್‌ಗಾಂಧಿ, ಆಪರೇಷನ್ ಸಿಂಧೂರ ಮಿಲಿಟರಿ ಕಾರ್ಯಾಚರಣೆಯ ಕುರಿತು ಪಾಕಿಸ್ತಾನಕ್ಕೆ ಪೂರ್ವಸೂಚನೆ ನೀಡಲಾಗಿತ್ತು ಎಂದಾದರೆ, ನಮ್ಮ ಸೇನೆಯು ಕಳೆದುಕೊಂಡ ವಿಮಾನಗಳ ಸಂಖ್ಯೆ ಎಷ್ಟು ಎಂಬುದನ್ನು ತಿಳಿಸಬೇಕು. ಈ ಮೌನ ಖಂಡನೀಯ ಎಂದು ಕಿಡಿಕಾರಿದ್ದಾರೆ.

ಪಾಕಿಸ್ತಾನದ ಮೇಲೆ ದಾಳಿಗೂ ಮೊದಲು ಪೂರ್ವ ಎಚ್ಚರಿಕೆ ನೀಡಲಾಗಿದ್ದರೆ ಅದು ಅಪರಾಧ. ಇದರಿಂದ ನಾವು ಹಾನಿಗೆ ತುತ್ತಾಗುತ್ತೇವೆ. ಕೇಂದ್ರ ಸರ್ಕಾರ ಮಾಹಿತಿ ನೀಡಿದ ಬಗ್ಗೆ ಸಾರ್ವಜನಿಕವಾಗಿ ಒಪ್ಪಿಕೊಂಡಿದೆ. ಇದಕ್ಕೆ ಅನುಮತಿ ನೀಡಿದ್ದು ಯಾರು?. ಇದರ ಪರಿಣಾ ನಮ್ಮ ವಾಯುಪಡೆ ಎಷ್ಟು ವಿಮಾನಗಳನ್ನು ಕಳೆದುಕೊಂಡಿದೆ ಎಂದು ರಾಹುಲ್‌ಗಾಂಧಿ ಪ್ರಶ್ನಿಸಿದ್ದಾರೆ.

ವಿಪಕ್ಷ ನಾಯಕರ ಪ್ರಶ್ನೆಗೆ ಸ್ಪಷ್ಟನೆ ನೀಡಿರುವ ವಿದೇಶಾಂಗ ಸಚಿವಾಲಯ, ದಾಳಿ ನಡೆಸುವ ಮುನ್ನ ಪೂರ್ವ ಮಾಹಿತಿ ನೀಡಲಾಗಿತ್ತು ಎಂಬ ರಾಹುಲ್‌ಗಾಂಧಿ ಅವರ ಆರೋಪ ಸುಳ್ಳು. ಮೇ 7 ರಂದು ಆಪರೇಷನ್‌ಸಿಂಧೂರ ಕಾರ್ಯಾಚರಣೆಯ ಆರಂಭಿಕ ಹಂತದಲ್ಲಿ ಭಾರತವು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿತ್ತೇ ಹೊರತು, ಮುಂಚಿತವಾಗಿ ನೀಡಿದ ಮಾಹಿತಿ ಅಲ್ಲ ಎಂದು ಸಚಿವಾಲಯ ಹೇಳಿದೆ.

## ವೊಡಾಫೋನ್ ಐಡಿಯಾ ಕಾರ್ಯಾಚರಣೆ ಸ್ಥಗಿತ?




**ನವದೆಹಲಿ:** ವೊಡಾಫೋನ್ ಐಡಿಯಾ 2026 ರ ಹಣಕಾಸು ವರ್ಷದ ನಂತರವೂ ಕಾರ್ಯನಿರ್ವಹಿಸುವುದು ಕಷ್ಟಕರವಾಗುತ್ತಿದೆ. ಏಪ್ರಿಲ್ 17, 2025 ರಂದು, ಸಂಕಷ್ಟದಲ್ಲಿರುವ ಟೆಲ್ಕೋ ಟೆಲಿಕಾಂ ಇಲಾಖೆಗೆ ಪತ್ರವೊಂದನ್ನು ಕಳುಹಿಸಿತು. ತುರ್ತು ಬೆಂಬಲಕ್ಕಾಗಿ ಬಲವಾದ ಪ್ರಕರಣವನ್ನು ಮಂಡಿಸಿತು.

ಯಾವುದೇ ಬೆಂಬಲವು ಹಿಂತಿರುಗಿಸಲಾಗದ ಹಂತಕ್ಕೆ ಕಾರಣವಾಗುವುದಿಲ್ಲ ಎಂದು ಅವರು ಎಚ್ಚರಿಸಿದರು. ಇತ್ತೀಚಿನ AGR ತೀರ್ಪು ಕಂಪನಿಯ ಆರ್ಥಿಕ ಸ್ಥಿರತೆ ಮತ್ತು ಒಟ್ಟಾರೆ ವ್ಯವಹಾರ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರಿದೆ. AGR ಹೊಣೆಗಾರಿಕೆಯ ಮೂಲಕ ಅನ್ಯಾಯದ ಹೊರೆಯನ್ನು ಸೇರಿಸಿದೆ. ಈ ಪರಿಸ್ಥಿತಿಯು AGR ಹೊಣೆಗಾರಿಕೆಯ ಸಮಸ್ಯೆಯನ್ನು ಪರಿಹರಿಸದೆ ವೊಡಾಫೋನ್ ಐಡಿಯಾವನ್ನು ಬದುಕಲು ಸಾಧ್ಯವಾಗದ ಸ್ಥಿತಿಯಲ್ಲಿ ಬಿಟ್ಟಿದೆ. ಸಮಸ್ಯೆಯನ್ನು ಇನ್ನಷ್ಟು ಹೆಚ್ಚಿಸುತ್ತಾ, ಸುಪ್ರೀಂ ಕೋರ್ಟ್ ಮೇ 19 ರಂದು ಹೊಂದಾಣಿಕೆಯ ಒಟ್ಟು ಆದಾಯ (AGR ) ಬಾಕಿಗಳಲ್ಲಿ ಸುಮಾರು 30,000 ಕೋಟಿ ರೂ.ಗಳ ಮನ್ನಾಕ್ಕಾಗಿ ವೊಡಾಫೋನ್ ಐಡಿಯಾ ಸಲ್ಲಿಸಿದ ಮನವಿಯನ್ನು ತಿರಸ್ಕರಿಸಿತು.

ಸರ್ಕಾರವು ಬೆಂಬಲವನ್ನು ನೀಡದಿದ್ದರೆ ಮತ್ತು VIL ತನ್ನ AGR ಬಾಧ್ಯತೆಗಳನ್ನು ಇತ್ಯರ್ಥಪಡಿಸಲು ಸಾಧ್ಯವಾಗದಿದ್ದರೆ, ಕಂಪನಿಯು ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿ (NCLT) ಪ್ರಕ್ರಿಯೆಯನ್ನು ಪ್ರವೇಶಿಸಬೇಕಾಗಬಹುದು. ಇದು ಸುಮಾರು 20 ಕೋಟಿ ಬಳಕೆದಾರರ ಮೇಲೆ ಪರಿಣಾಮ ಬೀರಬಹುದು. ಅವರು ತಮ್ಮ ಸಂಖ್ಯೆಯನ್ನು ಬೇರೆಡೆಗೆ ಪೋರ್ಟ್ ಮಾಡುವಂತೆ ಒತ್ತಾಯಿಸುತ್ತದೆ. ಅಂತಹ ಫಲಿತಾಂಶವು ಮಾರುಕಟ್ಟೆ ಸ್ಪರ್ಧೆ ಮತ್ತು ಗ್ರಾಹಕರ ಆಯ್ಕೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ, ಏಕೆಂದರೆ Vi ನಿರ್ಗಮನವು ಭಾರತೀಯ ದೂರಸಂಪರ್ಕ ವಲಯದಲ್ಲಿ ಡ್ಯುಪೊಲಿಗೆ ಕಾರಣವಾಗಬಹುದು.

## ರಾಜತಾಂತ್ರಿಕ ಕಾರಣಗಳಿಗಾಗಿ ಇಸ್ರೇಲ್ ಗಾಝಾ ಕ್ಷಾಮವನ್ನು ತಡೆಯಬೇಕು: ನೆತನ್ಯಾಹು



**ಟೆಲ್‌ಅವೀವ್:** ರಾಜತಾಂತ್ರಿಕ ಕಾರಣಗಳಿಗಾಗಿ ಗಾಝಾದಲ್ಲಿ ಕ್ಷಾಮವನ್ನು ತಡೆಯುವುದು ಇಸ್ರೇಲ್ ಗೆ ಅಗತ್ಯವಾಗಿದೆ ಎಂದು ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೋಮವಾರ ಹೇಳಿದ್ದಾರೆ.

ಪ್ರಾಯೋಗಿಕ ಮತ್ತು ರಾಜಕೀಯ ಎರಡೂ ಕಾರಣಗಳಿಗಾಗಿ ಗಾಝಾದ ಜನಸಂಖ್ಯೆ ಕ್ಷಾಮದಲ್ಲಿ ಮುಳುಗಲು ನಾವು ಬಿಡಬಾರದು. ಇಸ್ರೇಲ್ ನ ಮಿತ್ರರೂ ಕೂಡಾ ಸಾಮೂಹಿಕ ಹಸಿವಿನ ಕಲ್ಪನೆಯನ್ನು ಸಹಿಸುವುದಿಲ್ಲ ಎಂದು ನೆತನ್ಯಾಹು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ಸುಮಾರು 3 ತಿಂಗಳ ದಿಗ್ಬಂಧನವನ್ನು ಭಾಗಶಃ ತೆರವುಗೊಳಿಸುವ ನಿರ್ಧಾರವನ್ನು ಪ್ರಧಾನಿ ಸಮರ್ಥಿಸಿಕೊಂಡಿರುವುದಕ್ಕೆ ಇಸ್ರೇಲ್ ಸಚಿವ ಸಂಪುಟದ ಕಟ್ಟಾ ಬಲಪಂಥೀಯ ಸಚಿವರ ತೀವ್ರ ಟೀಕೆ ಮತ್ತು ವಿರೋಧ ಎದುರಾಗಿದೆ.

ನೆರವು ಪುನರಾರಂಭದ ಕುರಿತ ಟೀಕೆ ' ಸಹಜ' ಎಂದು ಪ್ರತಿಪಾದಿಸಿದ ಅವರು, ಇದು ಕಠಿಣ, ಆದರೆ ಅಗತ್ಯದ ನಿರ್ಧಾರವಾಗಿತ್ತು ಎಂದಿದ್ದಾರೆ. ಆದರೆ ಅಂತರಾಷ್ಟ್ರೀಯ ಸಮುದಾಯದ ತೀವ್ರ ಒತ್ತಡ ಮತ್ತು ಗಾಝಾದಲ್ಲಿ ಆಹಾರ, ಶುದ್ಧ ನೀರು, ಇಂಧನ ಮತ್ತು ಔಷಧಗಳ ತೀವ್ರ ಕೊರತೆಯಿದೆ ಎಂದು ವಿಶ್ವಸಂಸ್ಥೆ ಏಜೆನ್ಸಿಗಳು ಎಚ್ಚರಿಕೆ ನೀಡಿರುವುದು ಇಸ್ರೇಲ್ ನಿಲುವಿನಲ್ಲಿ ಬದಲಾವಣೆಗೆ ಮೂಲ ಕಾರಣವಾಗಿದೆ ಎಂದು ವಿಶ್ಲೇಷಿಸಲಾಗಿದೆ.

## ಭಾರತ ಪ್ರಪಂಚದಾದ್ಯಂತದ ನಿರಾಶ್ರಿತರಿಗೆ ಆಶ್ರಯ ನೀಡುವ ಧರ್ಮಶಾಲೆಯಲ್ಲ ಸುಪ್ರೀಂ



**ನವದೆಹಲಿ:** ಭಾರತವು ಪ್ರಪಂಚದಾದ್ಯಂತದ ನಿರಾಶ್ರಿತರಿಗೆ ಆಶ್ರಯ ನೀಡುವ ಧರ್ಮಶಾಲೆಯಲ್ಲ ಎಂದು ಹೇಳುವ ಮೂಲಕ ಸುಪ್ರೀಂ ಕೋರ್ಟ್ ಶ್ರೀಲಂಕಾದ ತಮಿಳು ಪ್ರಜೆಯೊಬ್ಬರ ಬಂಧನದಲ್ಲಿ ಮಧ್ಯಪ್ರವೇಶಿಸಲು ನಿರಾಕರಿಸಿದೆ.

ಯುಎಪಿಎ ಪ್ರಕರಣದಲ್ಲಿ ವಿಧಿಸಲಾದ 7 ವರ್ಷಗಳ ಶಿಕ್ಷೆ ಮುಗಿದ ತಕ್ಷಣ ಅರ್ಜಿದಾರ ಶ್ರೀಲಂಕಾ ಪ್ರಜೆಯು ಭಾರತವನ್ನು ತೊರೆಯಬೇಕು ಎಂದು ನಿರ್ದೇಶಿಸಿದ ಮದ್ರಾಸ್ ಹೈಕೋರ್ಟ್‌ನ ಆದೇಶವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನಲ್ಲಿ ನ್ಯಾಯಮೂರ್ತಿ ದೀಪಂಕರ್ ದತ್ತ ಮತ್ತು ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಅವರಿದ್ದ ದ್ವಿಸದಸ್ಯ ಪೀಠ ವಿಚಾರಣೆ ನಡೆಸಿತು.

ಈ ವೇಳೆ ಭಾರತವು ಪ್ರಪಂಚದಾದ್ಯಂತದ ನಿರಾಶ್ರಿತರಿಗೆ ಆಶ್ರಯ ನೀಡಬೇಕೇ? ನಾವು 140 ಕೋಟಿ ಜನಸಂಖ್ಯೆ ಹೊಂದಿದ್ದು ಕಷ್ಟಪಡುತ್ತಿದ್ದೇವೆ. ಇದು ಎಲ್ಲೆಡೆಯಿಂದ ಬಂದ ವಿದೇಶಿ ಪ್ರಜೆಗಳಿಗೆ ಆಶ್ರಯ ನೀಡಬಹುದಾದ ಧರ್ಮ ಛತ್ರವಲ್ಲ ಎಂದು ಕೋರ್ಟ್ ಹೇಳಿತು.

**ಏನಿದು ಪ್ರಕರಣ?:** ಈ ಹಿಂದೆ ಶ್ರೀಲಂಕಾದಲ್ಲಿ ಸಕ್ರೀಯವಾಗಿದ್ದ ಭಯೋತ್ಪಾದಕ ಸಂಘಟನೆಯಾದ ಲಿಬರೇಶನ್ ಟೈಗರ್ಸ್ ಆಫ್ ತಮಿಳು ಈಳಂ (ಎಲ್‌ಟಿಟಿಇ) ಜೊತೆ ಸಂಪರ್ಕ ಹೊಂದಿದ್ದಾರೆ ಎಂಬ ಅನುಮಾನದ ಮೇಲೆ ವಿದೇಶಿ ಪ್ರಜೆಯನ್ನು 2015 ರಲ್ಲಿ ಬಂಧಿಸಲಾಗಿತ್ತು. 2018 ರಲ್ಲಿ ಕಾನೂನುಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯ್ದೆಯ (ಯುಎಪಿಎ) ಸೆಕ್ಷನ್-10ರ ಅಡಿಯಲ್ಲಿ ಅಪರಾಧಕ್ಕಾಗಿ ವಿಚಾರಣಾ ನ್ಯಾಯಾಲಯವು ಅರ್ಜಿದಾರನನ್ನ ದೋಷಿ ಎಂದು ಘೋಷಿಸಿತು, 10 ವರ್ಷಗಳ ಕಾಲ ಜೈಲು ಶಿಕ್ಷೆಯನ್ನೂ ವಿಧಿಸಿತ್ತು. ಕೊನೆಗೆ 2022 ರಲ್ಲಿ, ಮದ್ರಾಸ್ ಹೈಕೋರ್ಟ್ ಆತನ ಶಿಕ್ಷೆಯನ್ನು 7 ವರ್ಷಗಳಿಗೆ ಇಳಿಸಿತು. ಶಿಕ್ಷೆ ಅವಧಿ ಮುಗಿದ ಬಳಿಕ ಅವನು ಭಾರತವನ್ನ ತೊರೆಯಬೇಕು, ಅಲ್ಲಿಯವರೆಗೆ ನಿರಾಶ್ರಿತರ ಶಿಬಿರದಲ್ಲೇ ಇರಬೇಕು ಎಂದು ನಿರ್ದೇಶನ ನೀಡಿತ್ತು.

ಇದಾದ ಬಳಿಕ ವೀಸಾದಲ್ಲಿ ಭಾರತಕ್ಕೆ ಬಂದಿದ್ದ ಅರ್ಜಿದಾರ, ಅವರ ತಾಯ್ನಾಡಿನಲ್ಲಿ ಜೀವಕ್ಕೆ ಅಪಾಯವಿದೆ ಎಂದು ಅರ್ಜಿದಾರನ ಪರ ವಕೀಲರು ತಿಳಿಸಿದ್ದರು. ಅಲ್ಲದೇ ಅವರು ಕಳೆದ ಮೂರು ವರ್ಷಗಳಿಂದ ಬಂಧನದಲ್ಲಿದ್ದಾರೆ, ಗಡೀಪಾರು ಪ್ರಕ್ರಿಯೆ ಕೂಡ ಆರಂಭವಾಗಿಲ್ಲ ಎಂದು ನ್ಯಾಯಾಲಯದ ಗಮನ ಸೆಳೆದರು. ಅಲ್ಲದೇ ಬಹು ಕಾಯಿಲೆಗಳಿಂದ ಬಳಲುತ್ತಿರುವ ಅರ್ಜಿದಾರನ ಪತ್ನಿ ಮತ್ತು ಹೃದಯ ಸಂಬಂಧಿ ಕಾಯಿಲೆ ಹೊಂದಿರುವ ಅವರ ಮಗ ಭಾರತದಲ್ಲಿ ನೆಲೆಸಿದ್ದಾರೆ ಎಂದು ಕೋರ್ಟ್ ಗಮನಕ್ಕೆ ತಂದರು.

ಇದಕ್ಕೆ ಮಧ್ಯಪ್ರವೇಶಿಸಿದ ನ್ಯಾ. ದತ್ತ ಅವರು, ಇಲ್ಲಿ ನೆಲೆಸಲು ನಿಮಗೆ ಏನು ಹಕ್ಕಿದೆ ಎಂದು ಪ್ರಶ್ನಿಸಿದರು.. ಜೊತೆಗೆ ಅರ್ಜಿಯನ್ನು ವಜಾಗೊಳಿಸಿದ ನ್ಯಾ. ದತ್ತ ಅವರಿದ್ದ ಪೀಠ ಬಂಧನವು ಕಾನೂನಿಗೆ ಅನುಸಾರವಾಗಿರುವುದರಿಂದ ಆರ್ಟಿಕಲ್ 21 ಉಲ್ಲಂಘಿಸಲಾಗಿಲ್ಲ. ಆರ್ಟಿಕಲ್-19ರ ಪ್ರಕಾರ ಭಾರತದಲ್ಲಿ ನೆಲೆಸುವ ಮೂಲಭೂತ ಹಕ್ಕು ನಾಗರಿಕರಿಗೆ ಮಾತ್ರ ಇದೆ ಎಂದು ಹೇಳಿದರು

## ಉಕ್ರೇನ್ ಸಂಘರ್ಷ ಕೊನೆಗೊಳಿಸಲು ರಷ್ಯಾ ಸಿದ್ಧ 2 ಗಂಟೆಗೂ ಹೆಚ್ಚುಕಾಲ ಟ್ರಂಪ್-ಪುಟಿನ್ ಮಾತುಕತೆ



**ಮಾಸ್ಕೋ:** ಉಕ್ರೇನ್ ಜೊತೆಗಿನ ಸಂಘರ್ಷ ಕೊನೆಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡಲು ರಷ್ಯಾ ಸಿದ್ಧವಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಜೊತೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದೂರವಾಣಿ ಮೂಲಕ ಮಾತುಕತೆ ನಡೆಸಿ ಯುದ್ಧ ನಿಲ್ಲಿಸುವಂತೆ ಮನವಿ ಮಾಡಿದರು. ಈ ವಿಚಾರವಾಗಿ ಇಬ್ಬರ ನಡುವೆ ಸುಮಾರು 2 ಗಂಟೆಗೂ ಹೆಚ್ಚು ಕಾಲ ಮಾತುಕತೆ ನಡೆಯಿತು. ಇದೇ ವೇಳೆ ಇಬ್ಬರೂ ಸಹ ಯುದ್ಧ ಸೂಕ್ಷ್ಮತೆಗಳ ಕುರಿತು ಚರ್ಚಿಸಿದರು. ಮಾಸ್ಕೋ ಮತ್ತು ಕೈವ್ ನಡುವಿನ ಸಂಘರ್ಷವನ್ನು ಪರಿಹರಿಸುವ ಮಾರ್ಗಗಳು ಹಾಗೂ ಕದನ ವಿರಾಮ ಸಂಭವಿಸದಿದ್ದರೆ ಮುಂದೇನು ಮಾಡಬೇಕು ಎಂಬ ಬಗ್ಗೆಯೂ ಚರ್ಚಿಸಿದ್ರು.

ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಪುಟಿನ್, ಟ್ರಂಪ್ ಅವರ ಜೊತೆಗಿನ ಇಂದಿನ ಮಾತುಕತೆ ತುಂಬಾ ಉಪಯುಕ್ತವಾಗಿತ್ತು. ಮಾಸ್ಕೋ ಮತ್ತು ಕೈವ್ ನಡುವಿನ ನೇರ ಸಂವಾದವನ್ನು ಪುನರಾರಂಭಿಸಲು ಸಹಾಯ ಮಾಡಿದ್ದಕ್ಕಾಗಿ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು.

ಉಕ್ರೇನ್‌ನೊಂದಿಗೆ ಭವಿಷ್ಯದ ಶಾಂತಿ ಒಪ್ಪಂದಕ್ಕೆ ಸಂಬಂಧಿಸಿದಂತೆ ಕೆಲಸ ಮಾಡಲು ರಷ್ಯಾ ಸಿದ್ಧವಾಗಿದೆ. ರಷ್ಯಾ ಮತ್ತು ಉಕ್ರೇನ್ ಎರಡೂ ಕಡೆಯವರು ಸ್ವೀಕಾರಾರ್ಹವಾದ ಹೊಂದಾಣಿಕೆ ಕಂಡುಕೊಳ್ಳಬೇಕು. ನಿರೀಕ್ಷಿತ ಒಪ್ಪಂದಗಳನ್ನ ತಲುಪಿದ್ರೆ, ಉಕ್ರೇನ್‌ನೊಂದಿಗೆ ಕದನ ವಿರಾಮ ಸಾಧ್ಯ. ಉಕ್ರೇನ್ ನಮ್ಮ ಷರತ್ತುಗಳಿಗೆ ಒಪ್ಪಿದ್ರೆ ಕದನ ವಿರಾಮ ಸಾಧ್ಯವಾಗಲಿದೆ ಎಂದು ಎಂದು ತಿಳಿಸಿದ್ದಾರೆ.

ಇನ್ನೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್‌ನಲ್ಲಿ ಸಂಘರ್ಷವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡಲು ಮಾಸ್ಕೋ ಸಿದ್ಧವಾಗಿದೆ ಎಂದು ಹೇಳಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಮುದ್ದು ರಾಕ್ಷಸಿ' ಹಾಡಿಗೆ ಪತ್ನಿ ಕೈಹಿಡಿದು ದರ್ಶನ್ ರೊಮ್ಯಾಂಟಿಕ್ ಡ್ಯಾನ್ಸ್





ನಟ ದರ್ಶನ್ ಮತ್ತು ವಿಜಯಲಕ್ಷ್ಮಿ ಮದುವೆಯಾಗಿ 22 ವರ್ಷಗಳು ಕಳೆದಿವೆ. ಇದೇ ಖುಷಿಯಲ್ಲಿ ಪತ್ನಿ ಕೈಹಿಡಿದು 'ಮುದ್ದು ರಾಕ್ಷಸಿ' ಹಾಡಿಗೆ ರೊಮ್ಯಾಂಟಿಕ್ ಆಗಿ ಡ್ಯಾನ್ಸ್ ಮಾಡಿದ್ದಾರೆ. ಈ ಮುದ್ದಾದ ಜೋಡಿಯ ವಿಡಿಯೋ ಈಗ ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ.

ಮದುವೆ ಆನಿವರ್ಸರಿ ವಿಶೇಷವಾಗಿ ಆಚರಿಸಲು ಇಂಡೋನೇಷ್ಯಾದ ಬಾಲಿಗೆ ದರ್ಶನ್ ದಂಪತಿಗೆ ತೆರಳಿದ್ದಾರೆ. ಈ ಸಂಭ್ರಮಕ್ಕೆ ನಟ ಚಿಕ್ಕಣ್ಣ ಕೂಡ ಸಾಥ್ ನೀಡಿದ್ದಾರೆ. ಪತ್ನಿಗಾಗಿ ದರ್ಶನ್ ಹಿಂದಿ ಹಾಡೊಂದನ್ನು ಹಾಡಿದ್ದಾರೆ. ಅದಷ್ಟೇ ಅಲ್ಲ, ವಿಜಯಲಕ್ಷ್ಮಿ ಕೂಡ ಹಾಡು ಹಾಡುತ್ತಾ ಎಂಜಾಯ್ ಮಾಡಿದ್ದಾರೆ.

'ವಾಮನ' ಸಿನಿಮಾದ 'ಮುದ್ದು ರಾಕ್ಷಸಿ' ಚಿತ್ರದ ಹಾಡಿಗೆ ಪತ್ನಿ ಕೈಹಿಡಿದು ದರ್ಶನ್ ರೊಮ್ಯಾಂಟಿಕ್ ಹೆಜ್ಜೆ ಹಾಕಿದ್ದಾರೆ. ಇಬ್ಬರ ಖುಷಿ ನೋಡಿ ಡಿಬಾಸ್ ಅಭಿಮಾನಿಗಳು ಸಂಭ್ರಮಿಸುತ್ತಿದ್ದಾರೆ. ಇವರಿಬ್ಬರ ಮೇಲೆ ಯಾರ ಕೆಟ್ಟ ಕಣ್ಣು ಬೀಳದಿರಲಿ ಎಂದು ಫ್ಯಾನ್ಸ್ ಹಾರೈಸುತ್ತಿದ್ದಾರೆ.

ಕಳೆದ ವರ್ಷ ಮದುವೆ ಆನಿವರ್ಸರಿಯನ್ನು ದುಬೈಯಲ್ಲಿ ಅದ್ಧೂರಿಯಾಗಿ ದರ್ಶನ್ ದಂಪತಿ ಆಚರಿಸಿದ್ದರು. ಈ ವರ್ಷ ಬಾಲಿಯಲ್ಲಿ ಈ ಜೋಡಿ ಕಾಲ ಕಳೆಯುತ್ತಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನು ಮೇಲೆ ದರ್ಶನ್ ಹೊರಬಂದ್ಮೇಲೆ ಪತಿಯ ವ್ಯವಹಾರವನ್ನು ವಿಜಯಲಕ್ಷ್ಮಿ ಅವರೇ ನೋಡಿಕೊಳ್ಳಿದ್ದಾರೆ. ದರ್ಶನ್‌ಗೆ ಎಲ್ಲೇ ಶೂಟಿಂಗ್ ಇದ್ರೂ ಅಥವಾ ಯಾವುದೇ ಕಾರ್ಯಕ್ರಮ ಆಗಿದ್ರೂ ಪತ್ನಿ ಜೊತೆಯಾಗಿರುತ್ತಾರೆ. ಇದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ.

'ಡೆವಿಲ್' ಸಿನಿಮಾದ ಚಿತ್ರೀಕರಣವು ಭರದಿಂದ ನಡೆಯುತ್ತಿದೆ. ದರ್ಶನ್ ಜೊತೆ ರಚನಾ ರೈ, ವಿನಯ್ ಗೌಡ, ಶರ್ಮಿಳಾ ಮಾಂಡ್ರೆ ಸೇರಿದಂತೆ ಅನೇಕರು ನಟಿಸುತ್ತಿದ್ದಾರೆ. 'ತಾರಕ್' ಡೈರೆಕ್ಟರ್ ಮಿಲನಾ ಪ್ರಕಾಶ್ 'ಡೆವಿಲ್'ಗೆ ನಿರ್ದೇಶನ ಮಾಡುತ್ತಿದ್ದಾರೆ.

# ಅಜಯ್ ರಾವ್ ನಟನೆಯ 'ಸರಳ ಸುಬ್ಬರಾವ್' ಚಿತ್ರದ ಸಾಂಗ್ ರಿಲೀಸ್



'ಯುದ್ಧಕಾಂಡ' ಚಿತ್ರದ ಬಳಿಕ ಅಜಯ್ ರಾವ್ ನಟನೆಯ 'ಸರಳ ಸುಬ್ಬರಾವ್' ಸಿನಿಮಾದ 'ರಂಗೋಲಿ' ಹಾಡು ಬಿಡುಗಡೆ ಆಗಿದೆ. ನಾಯಕಿ ಮಿಶಾ ಜೊತೆ ರೆಟ್ರೋ ಸ್ಟೈಲಿನಲ್ಲಿ 'ಕೃಷ್ಣ' ಅಜಯ್ ರಾವ್ ಹೆಜ್ಜೆ ಹಾಕಿದ್ದಾರೆ.

ಮಂಜು ಸ್ವರಾಜ್ ನಿರ್ದೇಶನದಲ್ಲಿ ಅಜಯ್ ರಾವ್ ಹಾಗೂ ಮಿಶಾ ನಾರಂಗ್ ನಾಯಕ, ನಾಯಕಿಯಾಗಿ ನಟಿಸಿರುವ 'ಸರಳ ಸುಬ್ಬರಾವ್' ಚಿತ್ರದ ಸಾಂಗ್ ರಿಲೀಸ್ ಆಗಿದೆ. ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ಈ ಹಾಡನ್ನು ಕವಿರಾಜ್ ಅವರು ಬರೆದಿದ್ದು, ಸಂಚಿತ್ ಹೆಗ್ಡೆ ಹಾಡಿದ್ದಾರೆ. ಈ ಸಾಂಗ್ ಯೂಟ್ಯೂಬ್‌ನಲ್ಲಿ ಭರ್ಜರಿ ವಿವ್ಸ್ ಆಗ್ತಿದೆ.

ಸರಳ ಸುಬ್ಬರಾವ್' ಎಂಬುದು ಚಿತ್ರದ ನಾಯಕ, ನಾಯಕಿಯ ಹೆಸರಾಗಿದೆ. ಇದು 1971ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಕನ್ನಡದಲ್ಲಿ ತೀರ ಅಪರೂಪ ಎನ್ನಬಹುದಾದ ರೆಟ್ರೊ ಶೈಲಿಯಲ್ಲಿ ಸಿನಿಮಾ ಮೂಡಿ ಬಂದಿದೆ. ಈ ಚಿತ್ರದ ಬಿಡುಗಡೆ ಸಮಾರಂಭದಲ್ಲಿ ನಿರ್ದೇಶಕ ಮಂಜು ಸ್ವರಾಜ್ ಮಾತನಾಡಿ, ಅಜಯ್ ರಾವ್ ಅವರ ಅಭಿನಯಕ್ಕೆ ಅವರೇ ಸಾಟಿ. ಪಂಜಾಬಿ ಹುಡುಗಿ ಮಿಶಾ ಕನ್ನಡ ಅರ್ಥ ಮಾಡಿಕೊಂಡು ಅಭಿನಯಿಸಿದ್ದು, ನಿಜಕ್ಕೂ ಖುಷಿಯ ವಿಚಾರ. ರಂಗಾಯಣ ರಘು, ವೀಣಾ ಸುಂದರ್, ವಿಜಯ್ ಚಂಡೂರ್ ಹೀಗೆ ದೊಡ್ಡ ತಾರಾಬಳಗವೇ ನಮ್ಮ ಚಿತ್ರದಲ್ಲಿದೆ. ಅಜನೀಶ್ ಲೋಕನಾಥ್ ಸಂಗೀತ ನೀಡಿದ್ದಾರೆ. ಪ್ರದೀಪ್ ಪದ್ಮಕುಮಾರ್ ಛಾಯಾಗ್ರಹಣ, ಬಸವರಾಜ್ ಅರಸ್ ಸಂಕಲನವಿದೆ ಎಂದು ಸಿನಿಮಾ ಬಗ್ಗೆ ಮಾತನಾಡಿದ್ದಾರೆ.

ಅಜಯ್ ರಾವ್ ಮಾತನಾಡಿ, ಈ ಚಿತ್ರದಲ್ಲಿ ನಟಿಸಿರುವುದು ನನ್ನ ವೈಯಕ್ತಿಕ ಹಾಗೂ ವೃತ್ತಿಜೀವನದ ಹೆಮ್ಮೆ. ಅಂತಹ ಒಂದು ಸುಂದರ ಸಾಂಸಾರಿಕ ಚಿತ್ರ ಸರಳ ಸುಬ್ಬರಾವ್. ಈ ಚಿತ್ರ ಭಾರತೀಯ ಚಿತ್ರರಂಗದ ಸುವರ್ಣ ಯುಗಕ್ಕೆ ಟ್ರಿಬ್ಯುಟ್ ಎಂದರು ತಪ್ಪಾಗಲಾರದು. ನಾನು ಚಿಕ್ಕವಯಸ್ಸಿನಲ್ಲಿ ಸೂಪರ್ ಮ್ಯಾನ್ ಮುಂತಾದ ಚಿತ್ರಗಳನ್ನು ಹೆಚ್ಚು ನೋಡುತ್ತಿದ್ದೆ. ನಾನೇ ಸೂಪರ್ ಹೀರೋ ಅಂದುಕೊಳ್ಳುತ್ತಿದೆ. ಈ ಚಿತ್ರದಲ್ಲೂ ನಾನು ಸೂಪರ್ ಹೀರೊ. ಏಕೆಂದರೆ ಇದು 50 ವರ್ಷಗಳ ಹಿಂದೆ ನಡೆಯುವ ಕಥೆ. ಈ ಚಿತ್ರದಲ್ಲಿ ರೆಟ್ರೊ ಶೈಲಿಯ ಉಡುಗೆಗಳನ್ನು ಹಾಕಿದಾಗ ನಾನು ನನ್ನ ಪಾತ್ರದಲ್ಲಿ ವರನಟ ರಾಜಕುಮಾರ್, ವಿಷ್ಣುವರ್ಧನ್, ಅಂಬರೀಶ್, ಅನಂತನಾಗ್ ಅವರನ್ನು ನೋಡಿದ್ದೇನೆ. ಎಷ್ಟು ಜನಕ್ಕೆ ಸಿಗುತ್ತದೆ ಇಂತಹ ಅವಕಾಶ. ಇಂತಹ ಅವಕಾಶ ನೀಡಿದ ನಿರ್ಮಾಪಕ ಹಾಗೂ ನಿರ್ದೇಶಕರಿಗೆ ಧನ್ಯವಾದಗಳು ಎಂದಿದ್ದಾರೆ. ಮೊದಲ ಬಾರಿಗೆ ಇಂತಹ ಉತ್ತಮ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ನಟಿಸಿದ್ದು, ಬಹಳ ಖುಷಿಯಾಗಿದೆ. ನನ್ನ ಪಾತ್ರ ಕೂಡ ಚೆನ್ನಾಗಿದೆ ಎಂದರು ನಾಯಕಿ ಮಿಶಾ ನಾರಂಗ್. ಮಂಜು ಸ್ವರಾಜ್ ಅವರು ಹೇಳಿದ ಕಥೆ ಇಷ್ಟವಾಗಿ ನಿರ್ಮಾಣಕ್ಕೆ ಮುಂದಾದೆ. ಅಜಯ್ ರಾವ್ ಅವರ ಸಹಕಾರ ಅಪಾರ. ಇಡೀ ಚಿತ್ರತಂಡ ನನಗೆ ಪ್ರೋತ್ಸಾಹ ನೀಡಿದ್ದಾರೆ. ಅದರಿಂದ ಒಂದೊಳ್ಳೆ ಕೌಟುಂಬಿಕ ಚಿತ್ರ ನಿಮ್ಮ ಮುಂದೆ ಬರುತ್ತಿದೆ ಎಂದು ನಿರ್ಮಾಪಕ ಲೋಹಿತ್ ನಂಜುಂಡಯ್ಯ ತಿಳಿಸಿದರು.

ಒಟ್ನಲ್ಲಿ 'ಯುದ್ಧಕಾಂಡ' ಸಿನಿಮಾ ಬಳಿಕ 'ಸರಳ ಸುಬ್ಬರಾವ್' ಚಿತ್ರದ ಟೈಟಲ್‌ನಿಂದ ಮತ್ತು ಹಾಡಿನಿಂದ ಗಮನ ಸೆಳೆಯುತ್ತಿದೆ. ರೆಟ್ರೋ ಗೆಟಪ್‌ನಲ್ಲಿ ಅಜಯ್ ಅವರನ್ನು ನೋಡಲು ಫ್ಯಾನ್ಸ್ ಕಾಯ್ತಿದ್ದಾರೆ.

# ರೆಡ್ಡಿ ಮಗನ ಜೊತೆ ಶ್ರೀಲೀಲಾ ಡ್ಯುಯೆಟ್ ಜೂನಿಯರ್' ಚಿತ್ರದ ಸಾಂಗ್ ಔಟ್




ಕನ್ನಡತಿ ಶ್ರೀಲೀಲಾಗೆ ಸೌತ್‌ನಲ್ಲಿ ಭಾರೀ ಬೇಡಿಕೆಯಿದೆ. ಇದೀಗ 3 ವರ್ಷಗಳ ಬಳಿಕ ಕನ್ನಡಕ್ಕೆ ಶ್ರೀಲೀಲಾ ಬರುತ್ತಿದ್ದಾರೆ. ಜನಾರ್ದನ ರೆಡ್ಡಿ ಮಗ ಕಿರೀಟಿಗೆ ನಾಯಕಿಯಾಗಿ 'ಜೂನಿಯರ್' ಚಿತ್ರದಲ್ಲಿ ನಟಿಸಿದ್ದಾರೆ. ಈ ಸಿನಿಮಾದ ಮೊದಲ ಸಾಂಗ್ ರಿಲೀಸ್ ಆಗಿದೆ. ರೆಡ್ಡಿ ಮಗನೊಂದಿಗೆ ನಟಿ ಡ್ಯುಯೆಟ್ ಹಾಡಿದ್ದಾರೆ.

ಬೆಂಗಳೂರಿನಲ್ಲಿ ಅದ್ದೂರಿಯಾಗಿ ಸಾಂಗ್ ರಿಲೀಸ್ ಕಾರ್ಯಕ್ರಮ ಜರುಗಿದೆ. 'ಲೆಟ್ಸ್ ಲಿವ್ ದಿ ಮೂಮೆಂಟ್' ಎಂಬ ರೊಮ್ಯಾಂಟಿಕ್ ಸಾಂಗ್ ಕನ್ನಡ ಸೇರಿದಂತೆ ಬಹುಭಾಷೆಗಳಲ್ಲಿ ರಿಲೀಸ್ ಆಗಿದೆ. ಮಸ್ತ್ ಆಗಿ ಕಿರೀಟಿ ಜೊತೆ ನಟಿ ಕುಣಿದು ಕುಪ್ಪಳಿಸಿದ್ದಾರೆ. ಈ ಹಾಡಿಗೆ ಅಭಿಮಾನಿಗಳಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಇದೇ ಜುಲೈ 18ಕ್ಕೆ ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ.

'ಮಾಯಾಬಜಾರ್' ಸಿನಿಮಾ ಖ್ಯಾತಿಯ ರಾಧಾಕೃಷ್ಣ ರೆಡ್ಡಿ ನಿರ್ದೇಶನದಲ್ಲಿ 'ಜೂನಿಯರ್' ಸಿನಿಮಾ ತಯಾರಾಗಿದೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ವರಾಹಿ ಫಿಲ್ಮಂ ಪ್ರೊಡಕ್ಷನ್ ಕಿರೀಟಿ ಮೊದಲ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಬಿಗ್ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಚಿತ್ರ ಮೂಡಿಬಂದಿದೆ. ಬಹುದೊಡ್ಡ ಹಾಗೂ ಸ್ಟಾರ್ ತಾರಾಗಣ ಈ ಸಿನಿಮಾದ ಮತ್ತೊಂದು ಹೈಲೈಟ್.

ಶ್ರೀಲೀಲಾ, ಕಿರೀಟಿ ಜೊತೆ ರವಿಚಂದ್ರನ್, ಜೆನಿಲಿಯಾ ರಿತೇಶ್ ದೇಶ್‌ಮುಖ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. 'ಜೂನಿಯರ್' ಸಿನಿಮಾದ ತಾಂತ್ರಿಕ ಬಳಗ ಶ್ರೀಮಂತಿಕೆಯಿಂದ ಕೂಡಿದೆ. ದಕ್ಷಿಣ ಭಾರತದ ಖ್ಯಾತ ಸಂಗೀತ ನಿರ್ದೇಶಕ ರಾಕ್‌ಸ್ಟಾರ್ ಖ್ಯಾತಿಯ ದೇವಿಶ್ರೀ ಪ್ರಸಾದ್ ಸಂಗೀತ, 'ಬಾಹುಬಲಿ' ಸಿನಿಮಾ ಖ್ಯಾತಿಯ ಕಣ್ಣು ಕೆ ಸೆಂಥಿಲ್ ಕುಮಾರ್ ಕ್ಯಾಮೆರಾ ನಿರ್ದೇಶನ, ಭಾರತೀಯ ಚಿತ್ರರಂಗದ ಖ್ಯಾತ ಸಾಹಸ ನಿರ್ದೇಶಕ ಪೀಟರ್ ಹೆನ್ ಸಾಹಸ ಚಿತ್ರಕ್ಕಿದೆ.

## ಐಪಿಎಲ್ ಕುರಿತಾದ ಕ್ರೀಡಾ ಪ್ರಧಾನ ಚಿತ್ರದಲ್ಲಿ ಉಪ್ಪಿ

# 'ಕರ್ವ' ಡೈರೆಕ್ಟರ್ ಆಕ್ಷನ್ ಕಟ್



ರಿಯಲ್ ಸ್ಟಾರ್ ಉಪೇಂದ್ರ ಅವರು ಕನ್ನಡ ಮಾತ್ರವಲ್ಲ ಪರಭಾಷೆಯ ಸಿನಿಮಾದಲ್ಲೂ ಬ್ಯುಸಿಯಾಗಿದ್ದಾರೆ. ಯುಐ ಸಕ್ಸಸ್ ಬಳಿಕ ಸಾಲು ಸಾಲು ಸಿನಿಮಾಗಳಲ್ಲಿ ತೊಡಗಿಸಿಕೊಂಡಿದ್ದಾರೆ. 'ಕರ್ವ' ಡೈರೆಕ್ಟರ್ ನವನೀತ್ ನಿರ್ದೇಶನದಲ್ಲಿ ಐಪಿಎಲ್ ಕುರಿತಾದ ಕ್ರೀಡಾ ಪ್ರಧಾನ ಚಿತ್ರದಲ್ಲಿ ನಟಿಸಲು ಉಪೇಂದ್ರ, ಓಕೆ ಎಂದಿದ್ದಾರೆ.

ಸದಾ ಹೊಸ ಬಗೆಯ ಪಾತ್ರದಲ್ಲಿ ನಟಿಸೋ ಉಪೇಂದ್ರ, ಈಗ ಐಪಿಎಲ್ ಕುರಿತಾದ ಕ್ರೀಡಾ ಪ್ರಧಾನ ಚಿತ್ರದಲ್ಲಿ ಶ್ರೀಮಂತ ಉದ್ಯಮಿಯಾಗಿ ಕಾಣಿಸಿಕೊಳ್ತಿದ್ದಾರೆ. ಜುಲೈ 15ರಿಂದ ಈ ಚಿತ್ರದ ಶೂಟಿಂಗ್ ಶುರುವಾಗಲಿದೆ.

ಕ್ರಿಕೆಟ್‌ಗೆ ಸಂಬಂಧಿಸಿದ ಈ ಚಿತ್ರ ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಮೂಡಿ ಬರಲಿದೆ. ಈ ವರ್ಷದ ಅಂತ್ಯ ಅಥವಾ 2026ರಲ್ಲಿ ಸಿನಿಮಾ ತೆರೆಗೆ ಬರಲಿದೆ.

ಅಂದಹಾಗೆ, ರಾಮ್ ಪೋತಿನೇನಿ ನಟನೆಯ 'ಆಂಧ್ರ ಕಿಂಗ್ ತಾಲೂಕಾ' ಚಿತ್ರದಲ್ಲಿ ಉಪೇಂದ್ರ, ಸೂಪರ್ ಸ್ಟಾರ್ ರೋಲ್‌ನಲ್ಲಿ ನಟಿಸುತ್ತಿದ್ದಾರೆ. ರಜನಿಕಾಂತ್ ಜೊತೆ 'ಕೂಲಿ' ಚಿತ್ರದಲ್ಲಿಯೂ ಕಾಣಿಸಿಕೊಂಡಿದ್ದಾರೆ. ಭಾರ್ಗವ, 45 ಸಿನಿಮಾಗಳು ನಟನ ಕೈಯಲ್ಲಿವೆ.

## 18ನೇ ಆವೃತ್ತಿ, ಮೇ 18ರಂದೇ ಪ್ಲೇ-ಆಫ್‌ಗೆ ಎಂಟ್ರಿ

# 18ರ ನಂಟು ಮುಂದುವರಿಸಿದ ಆರ್‌ಸಿಬಿ




**ಬೆಂಗಳೂರು:** 18ನೇ ಆವೃತ್ತಿಯ ಐಪಿಎಲ್‌ನ ಲೀಗ್ ಸುತ್ತಿನ ಪಂದ್ಯಗಳು ಇನ್ನೇನು ಮುಗಿಯುವ ಹಂತಕ್ಕೆ ಬಂದಿದೆ. ಸೂಪರ್ ಸಂಡೇ ಗುಜರಾತ್ ಟೈಟಾನ್ಸ್ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 10 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ 3ನೇ ಬಾರಿಗೆ ಪ್ಲೇ ಆಫ್‌ಗೆ ಎಂಟ್ರಿಕೊಟ್ಟಿತು. ಇದರೊಂದಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಪಂಜಾಬ್ ಕಿಂಗ್ಸ್ ತಂಡಗಳೂ ಪ್ಲೇ ಆಫ್ ಪ್ರವೇಶಿಸಿದವು. ಇನ್ನೂ 10ನೇ ಬಾರಿಗೆ ಐಪಿಎಲ್ ಪ್ಲೇ ಆಫ್ ಪ್ರವೇಶಿಸಿರುವ ಆರ್‌ಸಿಬಿ ಮೇ 18ರೊಂದಿಗೆ ಹೊಂದಿದ್ದ ನಂಟನ್ನು ಮುಂದುವರಿಸಿದೆ.

**18ರ ಜೊತೆಗೆ ಏಕೆ ವಿಶೇಷ ನಂಟು?:** ಐಪಿಎಲ್ ಇತಿಹಾಸದಲ್ಲಿ ಆರ್‌ಸಿಬಿಗೆ ಮೊದಲ ಬಾರಿ 18ರ ನಂಟು ಶುರುವಾಗಿದ್ದು 2013ರಲ್ಲಿ. ಅಂದು ಆರ್‌ಸಿಬಿ ತಂಡ ಸಿಎಸ್‌ಕೆ ಎದುರು 24 ರನ್‌ಗಳ ಜಯ ದಾಖಲಿಸಿತ್ತು. ವಿರಾಟ್ ಕೊಹ್ಲಿ ಆ ಪಂದ್ಯದಲ್ಲಿ 29 ಎಸೆತಗಳಲ್ಲಿ ಅಜೇಯ 56 ರನ್ ಸಿಡಿಸಿ ಅಬ್ಬರಿಸಿದ್ದರು. ಬಳಿಕ 2014ರಲ್ಲೂ ಸಿಎಸ್‌ಕೆ ಎದುರು ಮೇ 18ರಂದೇ ನಡೆದ ಪಂದ್ಯದಲ್ಲಿ ಆರ್‌ಸಿಬಿ 5 ವಿಕೆಟ್‌ಗಳ ಜಯ ದಾಖಲಿಸಿತ್ತು. ಆ ಪಂದ್ಯದಲ್ಲೂ ಕೊಹ್ಲಿ ಜವಾಬ್ದಾರಿಯುತ ಬ್ಯಾಟಿಂಗ್ ಮಾಡಿದ್ದರು.

ಇದರೊಂದಿಗೆ 2016ರ ಮೇ 18ರಂದು ಕಿಂಗ್ಸ್ ಪಜಾಬ್ ವಿರುದ್ಧ, 2023ರ ಮೇ 18ರಂದು ಸನ್ ರೈಸರ್ಸ್ ಹೈದರಾಬಾದ್ ವಿರುದ್ಧವೂ ಆರ್‌ಸಿಬಿ ಗೆದ್ದಿತ್ತು. 2024ರ ಮೇ 18ರಂದಲೇ ಸಿಎಸ್‌ಕೆ ವಿರುದ್ಧ ನಾಕೌಟ್ ಕದನದಲ್ಲಿ ಗೆದ್ದು 18ರ ನಂಟು ಮುಂದುವರಿಸಿತ್ತು. ಇದೀಗ 2025ರ ಐಪಿಎಲ್ ಆವೃತ್ತಿಯಲ್ಲೇ ಮೇ 18ರಂದೇ ಪ್ಲೇ ಆಫ್ ಪ್ರವೇಶಿಸಿದ್ದು, 18ರ ನಂಟು ಮುಂದುವರಿಸಿದೆ.

**ಈ ಆವೃತ್ತಿ ವಿಶೇಷ ಏಕೆ?:** ಆರ್‌ಸಿಬಿ ಅಭಿಮಾನಿಗಳಿಗೆ ಈ ಬಾರಿಯ ಆವೃತ್ತಿಯ ಅತ್ಯಂತ ವಿಶೇಷವೆನ್ನಿಸಿದೆ. ಏಕೆಂದರೆ ಪ್ರಸಕ್ತ ನಡೆಯುತ್ತಿರುವುದು 18ನೇ ಆವೃತ್ತಿಯ ಐಪಿಎಲ್, ಆರ್‌ಸಿಬಿ ಅಭಿಮಾನಿಗಳ ಕೋಟೆ ಕಟ್ಟಿದ ಕೊಹ್ಲಿ ಜೆರ್ಸಿ ಸಂಖ್ಯೆಯೂ 18, ಮೇ 18ರಂದೇ ಪ್ಲೇ ಆಫ್ ಪ್ರವೇಶಿಸಿದೆ. ಹೀಗಾಗಿ ಈ ಬಾರಿ ಕಪ್ ಗೆದ್ದೇ ಗೆಲ್ಲುತ್ತೆ ಎನ್ನುವ ವಿಶ್ವಾಸ ಅಭಿಮಾನಿಗಳಲ್ಲಿದೆ. ಅದರಲ್ಲೂ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಘೋಷಿಸಿದ ಬಳಿಕ ಕಿಂಗ್ ಕೊಹ್ಲಿ ಕಣಕ್ಕಿಳಿಯುತ್ತಿದ್ದು, ಅಭಿಮಾನಿಗಳ ಮುಖ್ಯ ಆಕರ್ಷಣೆಯಾಗಲಿದ್ದಾರೆ.

**ಕೊಹ್ಲಿ ಮೇ 18ರಂದು ನೀಡಿರುವ ಬ್ಯಾಟಿಂಗ್ ಪ್ರದರ್ಶನ**

- **56★ (29) - ಸಿಎಸ್‌ಕೆ ವಿರುದ್ಧ 2013ರಲ್ಲಿ (ಆರ್‌ಸಿಬಿಗೆ ಜಯ)**
- **27 (29) - ಸಿಎಸ್‌ಕೆ ವಿರುದ್ಧ 2014ರಲ್ಲಿ (ಆರ್‌ಸಿಬಿಗೆ ಜಯ)**
- **113 (50) - ಪಂಜಾಬ್ ಕಿಂಗ್ಸ್ ವಿರುದ್ಧ 2016ರಲ್ಲಿ (ಆರ್‌ಸಿಬಿಗೆ ಜಯ)**
- **100 (63) - ಎಸ್‌ಆರ್‌ಎಚ್ ವಿರುದ್ಧ 2023ರಲ್ಲಿ (ಆರ್‌ಸಿಬಿಗೆ ಜಯ)**
- **47 (29) - ಸಿಎಸ್‌ಕೆ ವಿರುದ್ಧ 2024ರಲ್ಲಿ (ಆರ್‌ಸಿಬಿಗೆ ಜಯ)**

**ಚಿನ್ನಸ್ವಾಮಿ ಅಂಗಳದಲ್ಲಿ ನಿರಾಸೆ:** ಮೇ 17ರಂದು ನಿಗದಿಯಾಗಿದ್ದ ಪಂದ್ಯ ಆರ್‌ಸಿಬಿ ಮತ್ತು ವಿರಾಟ್ ಕೊಹ್ಲಿಗೆ ಬಹಳ ವಿಶೇಷವಾಗಿತ್ತು. ಟೆಸ್ಟ್ ಕ್ರಿಕೆಟ್ ನಿವೃತ್ತಿ ಬಳಿಕ ಕೊಹ್ಲಿ ಆಡಲಿದ್ದ ಮೊದಲ ಪಂದ್ಯ ಅದಾಗಿತ್ತು. ಕೊಹ್ಲಿಯ ಸಾವಿರಾರು ಅಭಿಮಾನಿಗಳು ಸಹ ನಂ.18ರ ಬಿಳಿ ಜೆರ್ಸಿ ಧರಿಸಿ ವಿಶೇಷ ಗೌರವ ಸಲ್ಲಿಸಲು ಕಾದುಕುಳಿತಿದ್ದರು. ಆದ್ರೆ ಅಭಿಮಾನಿಗಳ ಆಸೆಗೆ ಮಳೆ ತಣ್ಣೀರು ಎರಚಿತ್ತು.

## ಕೇಂದ್ರ ಕೊಟ್ಟ ಹಣ ಬಳಸುವಲ್ಲಿ ಕರ್ನಾಟಕ ಕಾಂಗ್ರೆಸ್ ಸರ್ಕಾರ ವಿಫಲ

# ಅಂಕಿಅಂಶ ಸಮೇತ ಸಿದ್ದರಾಮಯ್ಯಗೆ ಜೋಶಿ ತಿರುಗೇಟು



**ಬೆಂಗಳೂರು:** ಕರ್ನಾಟಕ ರಾಜ್ಯಕ್ಕೆ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಂಕಿಅಂಶ ಸಮೇತ ತಿರುಗೇಟು ನೀಡಿದ್ದಾರೆ. ಕೇಂದ್ರ ಸರ್ಕಾರ ಕೊಟ್ಟ ಹಣವನ್ನು ಸರಿಯಾಗಿ ಬಳಸದೇ ಕರ್ನಾಟಕ ಮುಖ್ಯಮಂತ್ರಿಗಳು ವೃಥಾ ಆರೋಪ ಮಾಡುತ್ತಿದ್ದಾರೆ. ತಮ್ಮ ಹಣಕಾಸು ನಿರ್ವಹಣೆಯ ಅಸಮರ್ಥತೆ ಮುಚ್ಚಿಹಾಕಲು ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದು ಜೋಶಿ ಟೀಕಿಸಿದ್ದಾರೆ. ಈ ವಿಚಾರವಾಗಿ ಸಾಮಾಜಿಕ ಮಾಧ್ಯ ಎಕ್ಸ್‌ನಲ್ಲಿ ಅಂಕಿಅಂಶ ಸಮೇತ ಜೋಶಿ ಮಾಹಿತಿ ನೀಡಿದ್ದು, ಕೇಂದ್ರದಿಂದ ಹಣ ಬಿಡುಗಡೆಯಾಗದ ಒಂದೇ ಒಂದು ಯೋಜನೆಯನ್ನು ಸಿದ್ದರಾಮಯ್ಯ ಹೆಸರಿಸಲಿ ನೋಡೋಣ ಎಂದು ಸವಾಲೆಸೆದಿದ್ದಾರೆ.

ಹಣಕಾಸು ನಿರ್ವಹಣೆಯಲ್ಲಿನ ತಮ್ಮ ಅಸಮರ್ಥತೆಯನ್ನು ಒಪ್ಪಿಕೊಳ್ಳುವ ಬದಲು, ಸಿಎಂ ಸಿದ್ದರಾಮಯ್ಯ ಮತ್ತು ಅವರ ಸರ್ಕಾರ ಕೇಂದ್ರದ ಮೇಲೆ ಆರೋಪ ಹೊರಿಸುತ್ತಲೇ ಇದ್ದಾರೆ. ತಮ್ಮ ಅಸಮರ್ಥತೆ ಮತ್ತು ಕಾಂಗ್ರೆಸ್ ನೀಡಿದ್ದ ಭರವಸೆಗಳನ್ನು ಈಡೇರಿಸುವಲ್ಲಿನ ವೈಫಲ್ಯವನ್ನು ಮುಚ್ಚಿಹಾಕಲು ಅವರು ಈ ರೀತಿ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

ಕೇಂದ್ರ ಸರ್ಕಾರದಿಂದ ಬರಬೇಕಾದ 4,195 ಕೋಟಿ ರೂ. ಅನುದಾನ ಬಾಕಿ ಇದೆ ಎಂದು ಸಿದ್ದರಾಮಯ್ಯ ದೂರುವುದು ಬೂಟಾಟಿಕೆ ಎಂದು ಜೋಶಿ ಟೀಕಿಸಿದ್ದಾರೆ.

ಪಿಎಂಎವೈ (ಗ್ರಾಮೀಣ), ಸ್ವಚ್ಛ ಭಾರತ ಮಿಷನ್ (ನಗರ), ಅಮೃತ್, ಪೋಷಣ್, ಸಮಗ್ರ ಶಿಕ್ಷಾ ಮುಂತಾದ ಹಲವು ಪ್ರಮುಖ ಯೋಜನೆಗಳು ಸೇರಿದಂತೆ ಕೇಂದ್ರ ಸರ್ಕಾರದ ವಿವಿಧ ಕೇಂದ್ರ ಯೋಜನೆಗಳ ಅಡಿಯಲ್ಲಿ 5,000 ಕೋಟಿ ರೂಪಾಯಿಗೂ ಹೆಚ್ಚು ಹಣ ಲಭ್ಯವಿದೆ ಎಂದು ಸಿದ್ದರಾಮ್ಯ ಅವರ ಸರ್ಕಾರದ ಖಜಾನೆಯ ಮೂಲಗಳೇ ನಮಗೆ ತಿಳಿಸಿವೆ ಎಂದು ಅವರು ಹೇಳಿದ್ದಾರೆ.

**ಸಿದ್ದರಾಮಯ್ಯಗೆ ಜೋಶಿ ಸವಾಲ್:** ಈಗಾಗಲೇ ಕೇಂದ್ರದಿಂದ ನೀಡಲಾಗಿರುವ ಹಣವನ್ನು ಕರ್ನಾಟಕವು ಸಂಪೂರ್ಣವಾಗಿ ಬಳಸಿಕೊಂಡಿದ್ದು, ಆ ನಂತರವೂ ಕೇಂದ್ರ ಸರ್ಕಾರ ಹಣವನ್ನು ತಡೆಹಿಡಿದಿರುವ ಒಂದು ನಿರ್ದಿಷ್ಟ ಯೋಜನೆ ಇದೆ ಎಂದು ಸಿದ್ದರಾಮಯ್ಯ ಭಾವಿಸಿದ್ದಾರೆ ಎಂದಿಟ್ಟುಕೊಳ್ಳೋಣ. ಒಂದು ವೇಳೆ ಹಾಗಿದ್ದರೆ, ಆ ಯೋಜನೆ ಯಾವುದೆಂಬುದನ್ನು ಸ್ಪಷ್ಟಪಡಿಸಲಿ. ವಾಸ್ತವದಲ್ಲಿ ಇದು ಸಾಧ್ಯವೇ ಇಲ್ಲ. ಯಾಕೆಂದರೆ, ಕೇಂದ್ರದಿಂದ ಬಿಡುಗಡೆಯಾದ ಹಣವನ್ನು ಖರ್ಚು ಮಾಡುವಲ್ಲಿಯೂ ಕರ್ನಾಟಕ ಕಾಂಗ್ರೆಸ್ ಸರ್ಕಾರ ವಿಫಲವಾಗಿದೆ ಎಂದು ಜೋಶಿ ಟೀಕಿಸಿದ್ದಾರೆ.

ವಿಪರ್ಯಾಸವೆಂದರೆ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕೂಡ, ಕಾಂಗ್ರೆಸ್‌ನ ಜನಪ್ರಿಯ ಗ್ಯಾರಂಟಿ ಯೋಜನೆಗಳಿಗೆ 40,000 ಕೋಟಿ ರೂ. ಮೀಸಲಿಡಬೇಕಾಗಿತ್ತು ಎಂದು ಈ ಹಿಂದೆ ಒಪ್ಪಿಕೊಂಡಿದ್ದರು. ಇದರಿಂದಾಗಿ ಅಭಿವೃದ್ಧಿ ಯೋಜನೆಗಳಿಗೆ ಯಾವುದೇ ಹಣ ಉಳಿದಿಲ್ಲ ಎಂದು ಬಹಿರಂಗವಾಗಿ ಒಪ್ಪಿಕೊಂಡಿದ್ದರು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಕೂಡ 2024 ರ ಜನವರಿಯಲ್ಲಿ, ಗ್ಯಾರಂಟಿಗಳಿಗಾಗಿ 58,000 ಕೋಟಿ ರೂ. ಮೀಸಲಿಡಲಾಗಿದೆ ಎಂದು ಬಹಿರಂಗಪಡಿಸಿದ್ದರು ಎಂದು ಜೋಶಿ ಉಲ್ಲೇಖಿಸಿದ್ದಾರೆ.

ಕರ್ನಾಟಕದ ಜನತೆಗೆ ಜವಾಬ್ದಾರಿಯುತ ಆಡಳಿತ ಬೇಕೇ ವಿನಃ ನಿರಂತರ ರಾಜಕೀಯ ಆರೋಪ-ಪ್ರತ್ಯಾರೋಪಗಳು ಮತ್ತು ದಾರಿತಪ್ಪಿಸುವ ನಿರೂಪಣೆಗಳಲ್ಲ. ಕಾಂಗ್ರೆಸ್ ಸರ್ಕಾರ ಆಧಾರರಹಿತ ಆರೋಪಗಳನ್ನು ಮಾಡುವುದನ್ನು ನಿಲ್ಲಿಸಿ, ಈಗಾಗಲೇ ತನ್ನ ಬಳಿ ಇರುವ ಗಣನೀಯ ಪ್ರಮಾಣದ ಹಣವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಪ್ರಾರಂಭಿಸುವ ಸಮಯ ಇದು ಎಂದು ಜೋಶಿ ಆಗ್ರಹಿಸಿದ್ದಾರೆ.

# ಐಪಿಎಲ್ ಪ್ಲೇಆಫ್: 4ನೇ ಸ್ಥಾನಕ್ಕೆ 3 ತಂಡಗಳ ಮಧ್ಯೆ ರೇಸ್




**ನವದೆಹಲಿ:** ಐಪಿಎಲ್ ಪ್ಲೇ ಆಫ್‌ನ 4ನೇ ಸ್ಥಾನಕ್ಕಾಗಿ ಈಗ ಮೂರು ತಂಡಗಳ ಮಧ್ಯೆ ಪೈಪೋಟಿ ಆರಂಭವಾಗಿದೆ.

ಡೆಲ್ಲಿ ವಿರುದ್ಧ ಗುಜರಾತ್ ಜೈಂಟ್ಸ್ ಜಯಗಳಿಸುವುದರೊಂದಿಗೆ ಗುಜರಾತ್ ಟೈಟಾನ್ಸ್, ಆರ್‌ಸಿಬಿ ಮತ್ತು ಪಂಜಾಬ್ ಕಿಂಗ್ಸ್ ಪ್ಲೇ ಆಫ್ ಪ್ರವೇಶಿಸಿದೆ. ಈಗ ಮುಂಬೈ ಇಂಡಿಯನ್ಸ್, ಲಕ್ನೋ ಮತ್ತು ಡೆಲ್ಲಿ ಮಧ್ಯೆ 4ನೇ ಸ್ಥಾನಕ್ಕಾಗಿ ಸ್ಪರ್ಧೆ ಆರಂಭವಾಗಿದೆ.

ಲಕ್ನೋ ಮೂರು ಪಂದ್ಯ ಗೆದ್ದರೆ 16 ಅಂಕ ತಲುಪಬಹುದಾಗಿದೆ. ಮುಂಬೈ ಎರಡು ಪಂದ್ಯ ಗೆದ್ದರೆ 18 ಅಂಕ ಸಂಪಾದಿಸಿದರೆ ಡೆಲ್ಲಿ ಎರಡು ಪಂದ್ಯ ಗೆದ್ದರೆ 17 ಅಂಕ ಪಡೆಯಲಿದೆ. ಆದರೆ ಇಲ್ಲಿ ಮುಂಬೈ ಮತ್ತು ಡೆಲ್ಲಿ ಮಧ್ಯೆ ಒಂದು ಪಂದ್ಯ ನಡೆಯಲಿದೆ.

ಮುಂಬೈ ವಿರುದ್ಧ ಡೆಲ್ಲಿ ಸೋತರೆ, ಡೆಲ್ಲಿ ಹೊರಬೀಳಲಿದೆ. ಮುಂಬೈ ಸೋತರೆ, ಆಗ ಪಂಜಾಬ್ ವಿರುದ್ಧ ಕೊನೆಯ ಪಂದ್ಯದಲ್ಲಿ ಗೆಲ್ಲಬೇಕು. ಜೊತೆಗೆ ಡೆಲ್ಲಿ ತನ್ನ ಕೊನೆ ಪಂದ್ಯದಲ್ಲಿ ಪಂಜಾಬ್‌ಗೆ ಶರಣಾಗಿ, ಲಕ್ನೋ 3 ರಲ್ಲಿ 1 ಪಂದ್ಯ ಸೋಲಬೇಕು. ಸದ್ಯ 10 ಅಂಕ ಪಡೆದಿರುವ ಲಕ್ನೋ ಮೂರಕ್ಕೆ ಮೂರೂ ಪಂದ್ಯ ಗೆಲ್ಲಬೇಕಾಗುತ್ತದೆ.

ಈಗಾಗಲೇ ಪ್ಲೇ-ಆಫ್‌ಗೇರಿರುವ 3 ತಂಡಗಳ ನಡುವೆ ಮೊದಲ 2 ಸ್ಥಾನಕ್ಕೆ ಪೈಪೋಟಿ ಇದೆ. ಅಗ್ರ-2ರಲ್ಲಿ ಸ್ಥಾನ ಪಡೆಯುವ ತಂಡಗಳು ಕ್ವಾಲಿಫೈಯರ್-1ನಲ್ಲಿ ಆಡಲಿದ್ದು, ಆ ಪಂದ್ಯ ಗೆಲ್ಲುವ ತಂಡ ನೇರವಾಗಿ ಫೈನಲ್‌ಗೆ ಅರ್ಹತೆ ಪಡೆಯಲಿದೆ. ಕ್ವಾಲಿಫಯರ್‌ನಲ್ಲಿ ಸೋತ ತಂಡಕ್ಕೂ ಎಲಿಮಿನೇಟರ್ ಪಂದ್ಯವಿದೆ.

# ನಾನು ನಿಮ್ಮಲ್ಲಿ ಒಬ್ಬ, ನಿಮ್ಮೊಂದಿಗೆ ನಿಲ್ಲುತ್ತೇನೆ: ಡಿಕೆಶಿ



**ಬೆಂಗಳೂರು:** ರಾತ್ರಿ ಸುರಿದ ಭಾರೀ ಮಳೆಗೆ ಬೆಂಗಳೂರು ತತ್ತರಿಸಿದ್ದು, ಜನ ಬಿಬಿಎಂಪಿ ವಿರುದ್ಧ ಆಕ್ರೋಶ ಹೊರಹಾಕುತ್ತಿದ್ದಾರೆ. ನಾನು ನಿಮ್ಮಲ್ಲಿ ಒಬ್ಬ, ನಾನು ನಿಮ್ಮೊಂದಿಗೆ ನಿಲ್ಲುತ್ತೇನೆ ಎಂದು ವ್ಯಾಪಕ ಟೀಕೆಯ ಬೆನ್ನಲ್ಲೇ ಡಿಸಿಎಂ ಡಿ.ಕೆ ಶಿವಕುಮಾರ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಮಳೆಯ ಅವಾಂತರದ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನಲ್ಲಿ ನಿರಂತರ ಮಳೆಯಿಂದ ಉಂಟಾದ ಹಾನಿಯಿಂದ ತೀವ್ರ ಕಳವಳಗೊಂಡಿದ್ದೇನೆ. ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಾನು ನಿರಂತರ ಸಂಪರ್ಕದಲ್ಲಿದ್ದೇನೆ ಮತ್ತು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ. ಸವಾಲುಗಳನ್ನು ಎದುರಿಸಲು ಮತ್ತು ಪರಿಹಾರವನ್ನು ಕೈಗೊಳ್ಳುವ ದಿನದ 24 ಗಂಟೆಗಳೂ ನಾನು ಕೆಲಸ ಮಾಡುತ್ತಿದ್ದೇನೆ ಎಂದು ಬರೆದುಕೊಂಡಿದ್ದಾರೆ.

ನಾನು ಬಿಬಿಎಂಪಿ ವಾರ್ ರೂಮ್ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ವೈಯಕ್ತಿಕವಾಗಿ ಭೇಟಿ ನೀಡಿ ವಾಸ್ತವಿಕವಾಗಿ ಮಾಹಿತಿ ಪಡೆಯುತ್ತೇನೆ. ಇವತ್ತು ನಾವು ಎದುರಿಸುತ್ತಿರುವ ಸಮಸ್ಯೆಗಳು ಹೊಸದೇನಲ್ಲ. ಹಲವು ಸರ್ಕಾರಗಳ, ಹಲವು ವರ್ಷಗಳ ನಿರ್ಲಕ್ಷ್ಯತನ ಈ ಸಮಸ್ಯೆ ಎದುರಿಸುತ್ತಿದ್ದೇವೆ. ಈ ಸಮಸ್ಯೆಯನ್ನು ಪರಿಹರಿಸಲು ಕೆಲಸ ಮಾಡುತ್ತಿದ್ದೇನೆ. ತಾತ್ಕಾಲಿಕ ಪರಿಹಾರ ಅಲ್ಲ, ದೀರ್ಘಕಾಲಿಕ ಪರಿಹಾರ ಕೈಗೊಳ್ಳು ಕೆಲಸ ಮಾಡ್ತಿದ್ದೇವೆ ಎಂದು ಹೇಳಿದ್ದಾರೆ.

ನನ್ನೆಲ್ಲಾ ಬೆಂಗಳೂರಿಗರೇ, ನಾನು ನಿಮ್ಮಲ್ಲಿ ಒಬ್ಬ, ನಾನು ನಿಮ್ಮೊಂದಿಗೆ ನಿಲ್ಲುತ್ತೇನೆ. ನಿಮ್ಮ ಕಳವಳ ಅರ್ಥಮಾಡಿಕೊಳ್ತೇನೆ. ಹತಾಶೆಯನ್ನು ಹಂಚಿಕೊಳ್ಳುತ್ತೇನೆ. ಬೆಂಗಳೂರಿನ ಈ ಸಮಸ್ಯೆಯನ್ನು ಪರಿಹರಿಸಲು ನಾನು ಬದ್ಧನಾಗಿದ್ದು, ಈ ಬಗ್ಗೆ ನಾನು ಭರವಸೆ ನೀಡುತ್ತೇನೆ. ನಾನು ನಿಮ್ಮೊಂದಿಗೆ ನಿಲ್ಲುತ್ತೇನೆ ಎಂದಿದ್ದಾರೆ.

ರಾತ್ರಿ ಸುರಿದ ಭಾರೀ ಮಳೆಗೆ ಬೆಂಗಳೂರಿನ ಹಲವು ಪ್ರದೇಶಗಳು ಜಲಾವೃತಗೊಂಡಿದೆ. ಅಲ್ಲದೇ ರಸ್ತೆಗಳಲ್ಲಿ ನೀರು ತುಂಬಿದ್ದು ವಾಹನ ಸವಾರರು ಪರದಾಡುತಿದ್ದಾರೆ. ಇನ್ನು ಹಲವೆಡೆ ಮನೆಗಳಿಗೆ ನೀರು ನುಗ್ಗಿ ಜನ ಮನೆಯಿಂದ ಹೊರಬರಲಾದೆ ತೊಂದರೆ ಅನುಭವಿಸುತ್ತಿದ್ದು, ಸರ್ಕಾರ ಹಾಗೂ ಬಿಬಿಎಂಪಿ ಅಧಿಕಾರಿಗಳ ವಿರುದ್ಧ ಜನ ಕಿಡಿಕಾರುತ್ತಿದ್ದಾರೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054